ಸಂಪುಟ: 13 Volume ಸಂಚಿಕೆ: 316 Issue ಪುಟಗಳು 08 Pages ಗುರುವಾರ 05 ಫೆಬ್ರವರಿ 2026 ₹6 PRGINO.120927 (RNINO:KARKAN/2011/48371) BDR/054/2026-2027 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಕಷ್ಟಗಳು ಹೆಚ್ಚಾದಂತೆ ಬುದ್ಧಿ ಚುರುಕಾಗಿ ಕೆಲಸ ಮಾಡುತ್ತದೆ.
–ಎಮರ್ಸನ್


# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ತರಕಾರಿ ಮಾರಾಟದ ಬಂಡಿ ವಿತರಣೆ 6
ಸ್ವರ ಸಂಗೀತ ವೈಭವ 7
ಔಷಧ ಕೇಂದ್ರ ತೆರೆದಿಡುವಂತೆ ಮನವಿ 8



ಬಜೆಟ್ ಹಿನ್ನಲೆಯಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಅವರು ಕ್ರಿಶ್ಚಿಯನ್, ಜೈನ ಹಾಗೂ ಬೌದ್ಧ ಮುಖಂಡರು, ಧರ್ಮ ಗುರುಗಳ ಜತೆ ಸಭೆ ನಡೆಸಿ ಮನವಿ ಸ್ವೀಕಾರ ಮಾಡಿದರು. ಸಚಿವರಾದ ಡಿ. ಸುಧಾಕರ್, ರಹೀಮ್ ಖಾನ್, ಮುಖ್ಯಮಂತ್ರಿ ಯವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಕ್ರಿಶ್ಚಿಯನ್ ನಿಗಮದ ಅಧ್ಯಕ್ಷ ಪ್ರೊ. ಜಾಫಟ್, ಇಲಾಖೆ ಕಾರ್ಯದರ್ಶಿ ಶಂಲಾ ಇಕ್ಬಾಲ್, ನಿರ್ದೇಶಕ ಜಿಲಾನಿ ಮೊಕಾಶಿ ಉಪಸ್ಥಿತರಿದ್ದರು.

## ಯುವಶಕ್ತಿಗೆ ಬೇಕು ಹಿಂದುತ್ವ



**ಪೀಣ್ಯದಾಸರಹಳ್ಳಿ:** ಹಿಂದೂ ಧರ್ಮದ ರಕ್ಷಣೆ ಆಗಬೇಕಾದರೆ ನಮ್ಮ ಸಂಸ್ಕಾರ, ಸಂಸ್ಕೃತಿ, ಗುರು ಪರಂಪರೆ, ಹಿಂದುತ್ವವನ್ನು ಯುವ ಜನಾಂಗಕ್ಕೆ ತಿಳಿಸುವ ಕೆಲಸ ಆಗಬೇಕು ಎಂದು ಶಾಸಕ ಎಸ್. ಮುನಿರಾಜು ತಿಳಿಸಿದ್ದಾರೆ. ದಾಸರಹಳ್ಳಿಯ ಕಾಳಹಸ್ತಿನಗರ ಹಿಂದೂ ಸಮಾಜೋತ್ಸವ ವಿಭಾಗದ ಅಧ್ಯಕ್ಷ ಚಂದ್ರಶೇಖರ್ ನೇತೃತ್ವದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನೂರಾರು ಮಹಿಳೆಯರಿಂದ ಪೂರ್ಣ ಕುಂಭ, ಗೋಪೂಜೆ ನಡೆಸುವ ಮೂಲಕ ಚಾಲನೆ ನೀಡಿದ್ದಾರೆ. ಮುತ್ತುರಾಯಸ್ವಾಮಿ ದೇವಸ್ಥಾನದಿಂದ ಹೊರಟು ದಾಸರಹಳ್ಳಿಯ ಎಸ್. ರಮೇಶ್ ರಸ್ತೆವರೆಗೂ ಸಾಗಿದೆ. ದಾಸರಹಳ್ಳಿ ಹಿಂದೂ ಸಮಾಜೋತ್ಸವ ಅಧ್ಯಕ್ಷ ಚಂದ್ರಶೇಖರ್, ಹಿಂದೂ ಹಿಂದುತ್ವ ಪ್ರತಿಪಾದಕ ಗಂಗಾಧರ ಕುಲಕರ್ಣಿ, ಹೇಮಚಲಾರೆಡ್ಡಿ, ಎಂ.ಮುನಿರಾಜು, ಟಿ.ಎಸ್.ಗಂಗರಾಜು, ರಘು ಸೇರಿ ಅನೇಕರು ಭಾಗವಹಿಸಿದ್ದರು.

## ಬೆರಗು ರೇಖೆಗಳು ಕೃತಿಗೆ ಅವ್ವ ಪ್ರಶಸ್ತಿ

**ಸೇಡಮ್:** ಗೊರೂರು ಪಂಕಜ ಅವರ ಬೆರಗು ರೇಖೆಗಳು ಎಂಬ ಕಾವ್ಯ ಕೃತಿಗೆ ರಾಜ್ಯಮಟ್ಟದ ಪ್ರತಿಷ್ಠಿತ ಅವ್ವ ಪ್ರಶಸ್ತಿ ಲಭಿಸಿದೆ ಎಂದು ಕಲಬುರಗಿಯ ಮಾತೋಶ್ರೀ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಡಾ.ಶರಣಬಸಪ್ಪ ಅ. ವಡ್ಡನಕೇರಿ ತಿಳಿಸಿದ್ದಾರೆ. ಫೆ. 16ರಂದು ಹಾರಕೂಡ ಶ್ರೀ ಮಠದಲ್ಲಿ ಗಣ್ಯರ ಸಮ್ಮುಖದಲ್ಲಿ ನಡೆಯಲಿರುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ವಿವರಿಸಿದ್ದಾರೆ.



## 8ಕ್ಕೆ ರುಕ್ಮೊದ್ದಿನ್‌ಗೆ ನುಡಿ ನಮನ

**ಬಸವಕಲ್ಯಾಣ:** ಸಾಹಿತಿ ದಿ. ರುಕ್ಮೊದ್ದಿನ್ ಇಸ್ಲಾಂಪೂರ ಅವರ ನುಡಿ ನಮನ ಕಾರ್ಯಕ್ರಮ ಫೆ. 8ರಂದು ಹುಮನಾಬಾದ್ ಕಲಬುರಗಿ ರಸ್ತೆಯಲ್ಲಿರುವ ಲಾಲಧರಿ ಆಶ್ರಮದಲ್ಲಿ ಬೆಳಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ. ಸಾಹಿತಿಗಳು, ಅಭಿಮಾನಿಗಳು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಅವರ ಕುಟುಂಬದ ಸದಸ್ಯರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.




# ಹಿಂದೂ ಧರ್ಮದ ಬಗ್ಗೆ ದ್ವೇಷವೇಕೆ..?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಹಿಂದೂ ಧರ್ಮ, ಹಿಂದೂಗಳು, ಹಿಂದೂಗಳ ಆಚರಣೆಗಳು ಅಂದರೆ ನಿಮ್ಮ ಕಾಂಗ್ರೆಸ್ ಸರ್ಕಾರಕ್ಕೆ ಯಾಕಿಷ್ಟು ಅಸಡ್ಡೆ? ಯಾಕಿಷ್ಟು ದ್ವೇಷ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಿಜೆಪಿ ಪ್ರಶ್ನೆ ಮಾಡಿದೆ.

ಬೆಂಗಳೂರು ಕರಗ ಉತ್ಸವದ ಅನುದಾನ ಬಿಡುಗಡೆಗೆ ಶೇ.20ರಷ್ಟು ಕಮಿಷನ್ ಕೇಳಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದ್ದು, ಇದರ ಬೆನ್ನಲ್ಲೇ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಕಿಡಿಕಾರಿದೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು, ಕರಗದ ದುಡ್ಡು ಬಿಡುಗಡೆಗೂ



ಕಮಿಷನ್, ಸಿಎಂ ಸಿದ್ದರಾಮಯ್ಯ ಅವರೇ,ಹಿಂದೂ ಧರ್ಮ, ಹಿಂದೂಗಳು, ಹಿಂದೂಗಳ ಆಚರಣೆಗಳು ಅಂದರೆ ನಿಮ್ಮ ಕಾಂಗ್ರೆಸ್ ಸರ್ಕಾರಕ್ಕೆ ಯಾಕಿಷ್ಟು ಅಸಡ್ಡೆ? ಯಾಕಿಷ್ಟು ದ್ವೇಷ? ಎಂದು ಪ್ರಶ್ನಿಸಿದ್ದಾರೆ.

# ಮಧ್ಯಾಹ್ನದ ಬಿಸಿಯೂಟ, ಮಕ್ಕಳು ಅಸ್ವಸ್ಥ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯ ಸರ್ಕಾರಿ ಶಾಲೆಯ ಇಪ್ಪತ್ತು ಮಕ್ಕಳು ಮಧ್ಯಾಹ್ನದ ಬಿಸಿಯೂಟ ಸೇವಿಸಿದ ನಂತರ ಅಸ್ವಸ್ಥಗೊಂಡಿದ್ದು, ಶಂಕಿತ ವಿಷಾಹಾರ ಸೇವನೆ ಪ್ರಕರಣದಲ್ಲಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಘಟನೆ ಔರಾದ್ ತಾಲೂಕಿನ ಜಮಾಲಾಪುರ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನಡೆದಿದೆ ಎಂದು ಅವರು ತಿಳಿಸಿದ್ದಾರೆ.



ಅಧಿಕಾರಿಗಳ ಪ್ರಕಾರ, ಅನ್ನ ಸಾಂಬಾರ್ ಮತ್ತು ಇತರ ಪದಾರ್ಥಗಳನ್ನು ಒಳಗೊಂಡ ಮಧ್ಯಾಹ್ನದ ಬಿಸಿಯೂಟ ಸೇವಿಸಿದ ನಂತರ, ಕೆಲವು ವಿದ್ಯಾರ್ಥಿಗಳಿಗೆ ಹೊಟ್ಟೆನೋವು, ವಾಕರಿಕೆ ಮತ್ತು ಭೇದಿ ಕಾಣಿಸಿಕೊಂಡಿದೆ. ಅವರಲ್ಲಿ ಕೆಲವರು ವಾಂತಿ ಕೂಡ ಮಾಡಿಕೊಂಡಿದ್ದಾರೆ. ಆತಂಕ ಹೆಚ್ಚಾದ ಕಾರಣ, ಶಿಕ್ಷಕರು ಮುನ್ನೆಚ್ಚರಿಕೆ ಕ್ರಮವಾಗಿ ಶಾಲೆಯ ಎಲ್ಲ 58 ವಿದ್ಯಾರ್ಥಿಗಳನ್ನು ಔರಾದ್ ತಾಲ್ಲೂಕು ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಅವರಿಗೆ ಅಗತ್ಯ ಚಿಕಿತ್ಸೆ ನೀಡಲಾಗಿದೆ. ಕೇವಲ 20 ಮಕ್ಕಳಿಗೆ ಮಾತ್ರ ಅನಾರೋಗ್ಯದ ಲಕ್ಷಣಗಳು ಕಂಡುಬಂದಿದ್ದು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಅಬಕಾರಿಯ ಹೈವೋಲ್ಟೇಜ್

## ಭ್ರಷ್ಟಾಚಾರ ಪ್ರಕರಣ ಎಂದ ಬಿಜೆಪಿ–ಜೆಡಿಎಸ್ | ಸಾಕ್ಷ್ಯ ಕೊಟ್ಟು ಮಾತಾಡಿ ಎಂದ ಕಾಂಗ್ರೆಸ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ ಕುರಿತು ಕಾಂಗ್ರೆಸ್–ಬಿಜೆಪಿ ನಡುವೆ ಮಾತಿನ ಚಕಮಕಿ ನಡೆದಿದೆ. ಬಿಜೆಪಿ, ಜೆಡಿಎಸ್ ಸದಸ್ಯರು ಸದನದ ಮಧ್ಯಭಾಗದಲ್ಲಿ ಪ್ರತಿಭಟನೆ ನಡೆಸಿ, ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರ ರಾಜೀನಾಮೆಯನ್ನು ಆಗ್ರಹಿಸಿದ್ದಾರೆ. ಅವರ ಇಲಾಖೆಯಲ್ಲಿ ಬಹುಕೋಟಿ ರೂ.ಹಗರಣ ನಡೆದಿದೆ ಎಂದು ಪ್ರತಿಪಕ್ಷಗಳು ಆರೋಪಿಸಿವೆ.

**ಅಹೋರಾತ್ರಿ ಧರಣಿ:** ತಿಮ್ಮಾಪುರ ಅವರು ತಮ್ಮ ಹಾಗೂ ತಮ್ಮ ಪುತ್ರನ ವಿರುದ್ಧ ಮದ್ಯ ಪರವಾನಗಿ ನೀಡಿಕೆ, ಅಧಿಕಾರಿಗಳ ವರ್ಗಾವಣೆಯಲ್ಲಿ ಭ್ರಷ್ಟಾಚಾರದ ಆರೋಪಗಳ ಹಿನ್ನೆಲೆಯಲ್ಲಿ ರಾಜೀನಾಮೆ ನೀಡಲು ನಿರಾಕರಿಸಿದ ಬಳಿಕ, ಪ್ರತಿಪಕ್ಷ ನಾಯಕರು ಅಹೋರಾತ್ರಿ ಧರಣಿ ನಡೆಸಿದ್ದರು.

**ರಾಜಿನಾಮೆಗೆ ಆಗ್ರಹ:** ಸದನದ ಮಧ್ಯಭಾಗದಲ್ಲಿದ್ದ ಬಿಜೆಪಿ–ಜೆಡಿಎಸ್ ಶಾಸಕರು ತಿಮ್ಮಾಪುರ ಅವರ ರಾಜೀನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗಿದ್ದಾರೆ. ಪ್ರತಿಭಟನೆಗೆ ನಾಯಕತ್ವ ನೀಡಿದ ಪ್ರತಿಪಕ್ಷದ ನಾಯಕ ಆರ್. ಅಶೋಕ್, ಅಬಕಾರಿ ಇಲಾಖೆಯಲ್ಲಿ ಪರವಾನಗಿ ಲಂಚ ಪಡೆಯಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

### ಸ್ಪೀಕರ್ ಮನವಿ ವಿಫಲ



ಬಳಿಕ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸದನದ ಮಧ್ಯಭಾಗದಲ್ಲಿ ಪ್ರತಿಭಟನೆ ಮುಂದುವರಿಸಿ ಸಚಿವ ತಿಮ್ಮಾಪುರ ರಾಜೀನಾಮೆಗೆ ಆಗ್ರಹಿಸಿ ಘೋಷಣೆ ಕೂಗಿದರು. ಪ್ರತಿಭಟನೆ ಹಿಂತೆಗೆದುಕೊಳ್ಳುವಂತೆ ಮನವರಿಕೆ ಮಾಡಲು ಸ್ಪೀಕರ್ ಯು.ಟಿ. ಖಾದರ್ ಅವರ ಹಲವು ಬಾರಿ ಮನವಿಗೆ ಕೇರ್ ಮಾಡಲಿಲ್ಲ. ಸಿಎಂ ಮಂಡಿಸಿದ್ದ ನಿರ್ಣಯದ ಚರ್ಚೆಯನ್ನು ಮುಂದುವರಿಸಲು ಕೈ ಸದಸ್ಯರಿಗೆ ಅವಕಾಶ ನೀಡಿದ್ದಾರೆ.







### ರಾಜಿನಾಮೆ ಕೊಡಲ್ಲ: ಸಚಿವ

ಈ ಬಗ್ಗೆ ಮಾತನಾಡಿದ ಸಚಿವ ತಿಮ್ಮಾಪುರ, ಇಲಾಖೆಯಲ್ಲಿ ಸುಧಾರಣೆ ತಂದಿದ್ದೇನೆ, ರಾಜೀನಾಮೆ ನೀಡುವುದಿಲ್ಲ. ಅಬಕಾರಿ ಸಚಿವನಾದ ಮೇಲೆ ಇಲಾಖೆಯಲ್ಲಿ ಸುಧಾರಣೆಗಳನ್ನು ತಂದಿದ್ದೇನೆ. ನಾನು ಸಚಿವನಾದ ನಂತರ, ನಾನು ಪ್ರಕ್ರಿಯೆಯನ್ನು ಸರಳೀಕರಿಸಿದೆ ಮತ್ತು ಕೌನ್ಸೆಲಿಂಗ್ ವ್ಯವಸ್ಥೆಯನ್ನು ತಂದಿದ್ದೇನೆ ಎಂದು ಉತ್ತರಿಸಿದ್ದಾರೆ.

### ಪುರಾವೆ ಕೊಡಿ: ಪ್ರಿಯಾಂಕ್

ಸಚಿವ ತಿಮ್ಮಾಪುರ ಅವರ ರಾಜೀನಾಮೆ ಕೋರುವ ಮೊದಲು ಅವರ ಬಳಿಯಿರುವ ದೃಢವಾದ ಪುರಾವೆ ಕೊಡಲಿ. ಪ್ರತಿಪಕ್ಷವು ಯಾವುದೇ ಪುರಾವೆಗಳನ್ನು ನೀಡದೆ ಆಟವಾಡುತ್ತಿದೆ. ತಮ್ಮ ವಿರುದ್ಧ ಸಾಕ್ಷ್ಯಗಳನ್ನು ಒದಗಿಸುವಂತೆ ತಿಮ್ಮಾಪುರ ಅವರೇ ಸವಾಲು ಹಾಕಿದ್ದಾರೆ. ಒಂದೇ ಒಂದು ಪುರಾವೆ ನೀಡಿದರೂ ರಾಜೀನಾಮೆ ನೀಡಲು ಸಿದ್ಧ ಎಂದಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡಿದ್ದಾರೆ.

### 6,000 ಕೋಟಿ ಹಗರಣ..?

ಮದ್ಯ ವ್ಯಾಪಾರಿಗಳ ಸಂಘವು ಅಬಕಾರಿ ಇಲಾಖೆಯ ಹಗರಣವು 6,000 ಕೋಟಿ ರೂ. ತ್ತದಷ್ಟು ಇದೆ. ಸಂಬಂಧಿತ ಆಡಿಯೋ ದಾಖಲೆ ಬಿಡುಗಡೆ ಮಾಡಲಾಗಿದೆ. ಲೋಕಾಯುಕ್ತರಿಗೆ ದೂರು ಸಲ್ಲಿಸಲಾಗಿದೆ. ಅವರು ಲೂಟಿ ಮಾಡಿದ ಹಣವನ್ನು ಕಾಂಗ್ರೆಸ್ ಪಕ್ಷವು ಚುನಾವಣೆ ನಡೆಯಲಿರುವ ರಾಜ್ಯಗಳಲ್ಲಿ ಪಕ್ಷದ ಹಣಕಾಸು ನೆರವಿಗೆ ಬಳಸುತ್ತಿದೆ ಎಂದು ಅಶೋಕ್ ದೂರಿದ್ದಾರೆ.

# ಬೆಂಗಳೂರುಗೆ ಹೊಸ ರೈಲು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬಜೆಟ್ ನಂತರ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ರೈಲ್ವೆ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ, ಮಾಹಿತಿ ಪ್ರಸಾರ ಖಾತೆ ಸಚಿವರಾದ ಸಚಿವ ಅಶ್ವಿನಿ ವೈಷ್ಣವ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.



ಈಗಾಗಲೇ ರಾಜ್ಯಕ್ಕೆ ಹೈ ಸ್ಪೀಡ್ ರೈಲು ಕಾರಿಡಾರ್‌ಗಳನ್ನು ಬಜೆಟ್ ನಲ್ಲಿ ಘೋಷಣೆ ಮಾಡಲಾಗಿದೆ. ಅದಕ್ಕೆ ಹೆಚ್ಚುವರಿಯಾಗಿ ಬೆಂಗಳೂರು–ಪುಣೆ ಹೈ–ಸ್ಪೀಡ್ ರೈಲು ಕಾರಿಡಾರ್ ನೀಡಲಾಗಿದೆ. ಈ ಮಾರ್ಗವು ಹುಬ್ಬಳ್ಳಿ, ಬೆಳಗಾವಿ ಮೂಲಕ ಹಾದು ಹೋಗಲಿರುವ ಬಗ್ಗೆ ರೇಲ್ವೆ ಸಚಿವ ತಿಳಿಸಿದ್ದಾರೆ ಎಂದು ಹೇಳಿದ್ದಾರೆ.

ಬೆಂಗಳೂರು–ಮುಂಬಯಿಗೆ ಹೊಸ ರೈಲು ಆರಂಭಿಸಲಾಗುವುದು ಎನ್ನುವ ಮಾಹಿತಿಯನ್ನು ರೈಲ್ವೆ ಸಚಿವರು ತಮಗೆ ನೀಡಿದರು. ಬೆಂಗಳೂರು–ಪುಣೆ ಹೈ ಸ್ಪೀಡ್ ರೈಲು ಕಾರಿಡಾರ್ ಹಾಗೂ ಬೆಂಗಳೂರು–ಮುಂಬಯಿ ನಡುವಿನ ಹೊಸ ರೈಲಿನಿಂದ ಕರ್ನಾಟಕಕ್ಕೆ ಮತ್ತಷ್ಟು ಅನುಕೂಲ ಆಗಲಿದೆ ಎಂದು ತಿಳಿಸಿದ್ದಾರೆ.

## ಸ್ಟಾರ್ ಬ್ಯಾಟ್ಸ್‌ಮನ್ ಬೆಂಬಲ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಭಾರತದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ, ಟೀಂ ಇಂಡಿಯಾದ ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರ ಬೆಂಬಲಕ್ಕೆ ನಿಂತಿ–ದ್ದು, ಅವರು ಮುಂದುವರಿಯಬೇಕೇ ಅಥವಾ ಬೇಡವೇ ಎಂಬುದನ್ನು ಯಾರೂ ಅವರಿಗೆ ಹೇಳಬಾರದು ಎಂದು ಹೇಳಿದ್ದಾರೆ.



ಧೋನಿಯನ್ನು ತನ್ನ ಬ್ರಾಂಡ್ ರಾಯಭಾರಿಯಾಗಿ ನೇಮಿಸಿಕೊಂಡ ಟೈಲ್ ಮತ್ತು ಸ್ಟೋನ್–ಇನ್ಸ್ಟಾಲೇಷನ್ ಕಂಪನಿ ಒಜಪ ಲ್ಯಾಟಿ–ಕ್ರೀಟ್ ಆಯೋಜಿಸಿದ್ದ ಕ್ರೀಡಾ ಪ್ರಸಾರಕ ಜತಿನ್ ಸಪ್ರು ಅವರಿಗೆ ನೀಡಿದ ಸಂದರ್ಶನದಲ್ಲಿ, ಧೋನಿ ಭಾರತೀಯ ಕ್ರಿಕೆಟ್ ವಿಷಯಗಳ ಬಗ್ಗೆ ಅಪರೂಪದ ಅಭಿಪ್ರಾಯಗಳನ್ನು ನೀಡಿದ್ದಾರೆ.

ಸುಮಾರು ಅರ್ಧ ಗಂಟೆ ನಡೆದ ಸಂವಾದದಲ್ಲಿ ರೋಹಿತ್ ಶರ್ಮಾ (38) ಮತ್ತು ವಿರಾಟ್ ಕೊಹ್ಲಿ (37) 2027ರ ಏಕದಿನ ವಿಶ್ವಕಪ್ ಆಡುವ ಸಾಧ್ಯತೆ ಸುತ್ತಲಿನ ಚರ್ಚೆಯನ್ನು ಎತ್ತಿದಾಗ ಅವರು ಮೊದಲಿಗೆ 'ಕ್ಷಮಿಸಿ, ಪ್ರಶ್ನೆ ಏನು?' ಎಂದಿದ್ದಾರೆ.

# ಮಕ್ಕಳ ಬಸ್‌ಗೆ ಬೆಂಕಿ: ತಪ್ಪಿದ ದುರಂತ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಪಟ್ಟಣದ ಕುಕನೂರು ಡಿಪೋದಲ್ಲಿ ನಿಂತಿದ್ದ ಬಸ್ ಶಾರ್ಟ್ ಸರ್ಕಿಟ್ ನಿಂದ ಸುಟ್ಟು ಭಸ್ಮವಾಗಿದೆ. ನಿನ್ನೆ ತಡರಾತ್ರಿ 12 ಗಂಟೆಗೆ ಯಿಂದ 1 ಗಂಟೆ ವರೆಗಿನ ಸಮಯದೊಳಗೆ ಈ ಘಟನೆ ನಡೆದಿದೆ ಎಂದು ತಿಳಿದು ಬಂದಿದೆ. ಶಾರ್ಟ್ ಸರ್ಕಿಟ್ ನಿಂದ ಬೆಂಕಿ ಹತ್ತುತ್ತಿರುವ ವಿಡಿಯೊ ಸಿಸಿಟಿವಿ ಲಭ್ಯವಾಗಿದೆ. ಬಸ್ ಚಲಿಸುತ್ತಿರಲಿ ಅಥವಾ ಡಿಪೋದಲ್ಲಿ ನಿಂತಿರಲಿ, ವಿದ್ಯುತ್ ಸಂಪರ್ಕದಲ್ಲಿನ ಸಣ್ಣ ಲೋಪವೂ ಇಡೀ ವಾಹನವನ್ನು ಕ್ಷಣಾರ್ಧದಲ್ಲಿ ಬೂದಿ ಮಾಡಿದೆ. ಇದರಿಂದ ದೊಡ್ಡ ಅನಾಹುತ ಒಂದು ತಪ್ಪಿದೆ ಎಂದು ಹೇಳಬಹುದು.

ಫೆ.3ರ ಬೆಳಗ್ಗೆಯಿಂದ ಸಂಜೆವರೆಗೆ ಒಂದು ದಿನದ ಶೈಕ್ಷಣಿಕ ಪ್ರವಾಸಕ್ಕಾಗಿ ಪಟ್ಟಣದ ಖಾಸಗಿ ಸಂಸ್ಥೆ ಎಸ್‌ಎಫ್‌ಎಸ್ ಸ್ಕೂಲ್ ನ 55 ಜನ ಮಕ್ಕಳನ್ನು ಈ ಬಸ್‌ನಲ್ಲಿ ಕರೆದುಕೊಂಡು ಹೋಗಲಾಗಿತ್ತು.



ರಾತ್ರಿ 8:30ಕ್ಕೆ ಈ ಬಸ್ ನಮ್ಮ ಡಿಪೊಗೆ ಇನ್ ಆಗಿದೆ. ಸಣ್ಣಮಟ್ಟದ ಸ್ಪಾರ್ಕ್ ಒಂದು ಕಿಡಿಯಾಗಿ ಇಡೀ ಬಸ್ಸನ್ನೇ ಆವರಿಸಿ ಭಾಗಶಃ ಬಸ್ ಸುಟ್ಟು ಕರಕಲಾಗಿದೆ. ಬಳಿಕ ಅಗ್ನಿಶಾಮಕಕ್ಕೆ ಫೋನ್ ಮಾಡಿ ಬೆಂಕಿಯ ಕೆನ್ನಾಲಿಗೆಯನ್ನು ಆರಿಸಿದ್ದಾರೆ. ಇದು ಸಿಬ್ಬಂದಿಗಳ ನಿರ್ಲಕ್ಷ್ಯ ಎನ್ನುವುದಕ್ಕಿಂತ ಆಕಸ್ಮಿಕವಾಗಿ ಘಟನೆ ನಡೆದಿದೆ ಎಂದಿದ್ದಾರೆ. **–ಸಿ. ವೆಂಕಟಚಲಪತಿ,** ಡಿಪೋ ವ್ಯವಸ್ಥಾಪಕ, ಕುಕನೂರು ಘಟಕ




ಗೀತರಚನೆ ಎನ್ನುವುದು ಕಲಿಯೋದು, ಕಲಿಸೋದಲ್ಲ. ಕನ್ನಡ ಕಾವ್ಯ, ಸಾಹಿತ್ಯ ಓದಬೇಕು. ಜನಜೀವನ ನೋಡಬೇಕು: ಖ್ಯಾತ ಚಿತ್ರಸಾಹಿತಿ ಜಯಂತ್ ಕಾಯ್ಕಿಣಿ

# ಅಪ್ರಾಪ್ತ ಬಾಲಕರಿಗೆ ವಾಹನ ಚಲಾಯಿಸಿದರೆ 25 ಸಾವಿರ ದಂಡ : ಪ್ರಕಾಶ ಅರ್ಜುನ ಬನಸೋಡೆ

ಮಲ್ಲಮ್ಮ ನುಡಿ ವಾರ್ತೆ,ಬೀದರ:

18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ವಾಹನ ಚಲಾಯಿಸುವುದು ಕಾನೂನುಬಾಹಿರ. ಒಂದು ವೇಳೆ ಅಪ್ರಾಪ್ತರು ವಾಹನ ಚಲಾಯಿಸುವಾಗ ಸಿಕ್ಕಿಬಿದ್ದರೆ ಪೋಷಕರಿಗೆ 25 ಸಾವಿರ ರೂ.ದಂಡ ಹಾಗೂ ಕಠಿಣ ಕಾನೂನು ಕ್ರಮ ಎದುರಿಸಬೇಕಾಗುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪ್ರಕಾಶ ಅರ್ಜುನ ಬನಸೋಡೆ ಎಚ್ಚರಿಸಿದರು.



ನೌಬಾದ್‌ನಲ್ಲಿರುವ ಸರ್ಕಾರಿ ನೌಕರರ ಭವನದಲ್ಲಿ ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಪೊಲೀಸ್ ಹಾಗೂ ಸಾರಿಗೆ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ '37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣ " ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಸ್ತೆ ಅಪಘಾತಗಳನ್ನು ತಡೆಯಲು ಪ್ರತಿಯೊಬ್ಬರೂ ನಿಯಮಗಳನ್ನು ಪಾಲಿಸಬೇಕು. ವಿಶೇಷವಾಗಿ ಯುವಕರು ಸಂಚಾರಿ ನಿಯಮಗಳ ಬಗ್ಗೆ ಜಾಗೃತರಾಗಿರಬೇಕು. 18 ವರ್ಷ ತುಂಬಿದವರು ಕಡ್ಡಾಯವಾಗಿ ಚಾಲನಾ ಪರವಾನಗಿ ಪಡೆದ ನಂತರವೇ ವಾಹನ ಓಡಿಸಬೇಕು ಎಂದು ಸಲಹೆ ನೀಡಿದರು.

ವಾಹನ ಖರೀದಿಸಿದ ತಕ್ಷಣ ದಾಖಲೆಗಳನ್ನು ಸರಿಯಾಗಿ ಇಟ್ಟುಕೊಳ್ಳಬೇಕು ಮತ್ತು ವಿಮೆ ಮಾಡಿಸುವುದು ಕಡ್ಡಾಯ, ವಿಮೆ ಇಲ್ಲದ ವಾಹನ ಅಪಘಾತಕ್ಕೀಡಾದರೆ ಅದರ ಸಂಪೂರ್ಣ ದಂಡವನ್ನು ಮಾಲೀಕರೇ ಭರಿಸಬೇಕಾಗುತ್ತದೆ. ವಿಮೆ ಇದ್ದರೆ ಕಂಪನಿಯು ನೆರವಾಗುತ್ತದೆ ಎಂದು ನ್ಯಾಯಾಧೀಶರು ತಿಳಿಸಿದರು.

ಆರ್.ಟಿ.ಓ ಅಧಿಕಾರಿ ಜಿ.ಕೆ.ಬಿರಾದಾರ ಮಾತನಾಡಿ, ದೇಶದಲ್ಲಿ ಶೇ.90ರಷ್ಟು ಜನ ವಾಹನ ಬಳಸುತ್ತಿದ್ದರೂ ಸಂಚಾರಿ ನಿಯಮ ಪಾಲನೆಯಲ್ಲಿ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಹಾಗೂ ಕಾರು ಚಾಲಕರು ಸೀಟ್ ಬೆಲ್ಟ್ ಧರಿಸುವುದರಿಂದ ಅಮೂಲ್ಯ ಜೀವ ಉಳಿಸಬಹುದು ಎಂದರು. ವಾಹನ ಚಲಾಯಿಸುವಾಗ ಮೊಬೈಲ್ ಫೋನ್ ಅಥವಾ ಹೆಡ್‌ಫೋನ್ ಬಳಸಬಾರದು ಮತ್ತು ಮದ್ಯಪಾನ ಮಾಡಿ ವಾಹನ ಚಲಾಯಿಸಬಾರದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಭಾಲ್ಕಿಯ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ ಎಂ.ಡಿ.ಜಾಫರ್ ಸಾದಿಕ್ ಮಾತನಾಡಿ, ಶಾಲಾ ವಾಹನಗಳಲ್ಲಿ ಸುರಕ್ಷತೆಗಾಗಿ 'ಪ್ಯಾನಿಕ್ ಬಟನ್' ಅಳವಡಿಸಲಾಗಿದೆ. ತುರ್ತು ಸಂದರ್ಭದಲ್ಲಿ ಇದನ್ನು ಒತ್ತಿದರೆ ನೇರವಾಗಿ ಬೆಂಗಳೂರಿನ ನಿಯಂತ್ರಣ ಕೊಠಡಿಗೆ ಸಂದೇಶ ರವಾನೆಯಾಗಿ ಕೂಡಲೇ ನೆರವು ದೊರೆಯಲಿದೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಡಿಡಿಪಿಯು ಚಂದ್ರಕಾಂತ್ ಶಹಬಾದಕರ್, ಡಿಎಚ್ ಒ ಜ್ಞಾನೇಶ್ವರ ನೀರಗುಡೆ, ಲೋಕೋಪಯೋಗಿ ಇಲಾಖೆಯ ಶಿವಶಂಕರ ಕಾಮಶೆಟ್ಟಿ, ಡಿಡಿಪಿಐ ಸುರೇಶ್ ಎಚ್.ಜಿ.ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಷಣ್ಮುಕಯ್ಯ ಸ್ವಾಮಿ, ಡಿವೈಎಸ್‌ಪಿ ಎನ್.ಡಿ.ಸನ್ನದಿ ಸೇರಿದಂತೆ ಹಲವು ಇಲಾಖೆಣಟಿಜಜಜಿಟಿಜಜ ಅಧಿಕಾರಿಗಳು ಉಪಸ್ಥಿತರಿದ್ದರು. ಶಾಹೀನ್,ಗುರುನಾನಕ್,ಜ್ಞಾನಸುಧಾ ಸೇರಿದಂತೆ ವಿವಿಧ ಕಾಲೇಜುಗಳ ನೂರಾರು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ನನ್ನ ನರನಾಡಿ, ಹೃದಯಲ್ಲಿ ಕನ್ನಡ ಆವರಿಸಿದೆ: ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ,ಔರಾದ:

ನನ್ನ ನರನಾಡಿ ಹಾಗೂ ಹೃದಯದಲ್ಲಿ ಕನ್ನಡ ಆವರಿಸಿಕೊಂಡಿದೆ. ಕನ್ನಡ ಕೇವಲ ಭಾಷೆಯಲ್ಲ, ಅದು ನನ್ನ ಬದುಕಿನ ಉಸಿರು, ಸಂಸ್ಕೃತಿ ಮತ್ತು ಆತ್ಮಗೌರವದ ಪ್ರತೀಕವಾಗಿದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ತಿಳಿಸಿದರು.

ಬೀದರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಔರಾದ(ಬಿ) ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನಿಂದ ಫೆ.4 ರಂದು ಔರಾದ(ಬಿ) ಪಟ್ಟಣದ ಡಾ. ಗುರುಪಾದಪ್ಪ ನಾಗಮಾರಪಳ್ಳಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ 7ನೇ ಕನ್ನಡ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ನನ್ನ ಮಾತೃಭಾಷೆ ಬಂಜಾರಾ, ಅನಿವಾರ್ಯವಾಗಿ ಮರಾಠಿ ಮಾಧ್ಯಮದಲ್ಲಿ ಓದಿದ್ದೇನೆ. ಆದರೆ ನನ್ನ ಹೃದಯದ ಭಾಷೆ ಕನ್ನಡವಾಗಿದೆ. ಕನ್ನಡ ಬಲ್ಲವರು ಅನೇಕರು ಸಿಗುತ್ತಾ-ರೆ. ಆದರೆ ಕನ್ನಡ ಕೆಲಸಗಳನ್ನು ಮಾಡುವ ಮತ್ತು ಕನ್ನಡವನ್ನು ಬೆಳೆಸಬೇಕೆಂಬ ಇಚ್ಛಾಶಕ್ತಿ ಬೇಕು. ಹಿಂದೆ ಔರಾದನಲ್ಲಿ ಕನ್ನಡದ ಪರಿಸ್ಥಿತಿ ತುಂಬಾ ಹೀನಾಯವಾಗಿತ್ತು. ಗಡಿ ಭಾಗದಲ್ಲಿ ಕನ್ನಡ ಮಾತನಾಡಿದರೆ ಸಾಕು ಜಗಳ ಮಾಡುತ್ತಿದ್ದರು. ನಾನು ಹಿಂದೆ ಅನುಭವಿಸಿದ ಕಷ್ಟ ಮುಂದಿನ ಪೀಳಿಗೆ ಅನುಭವಿಸಬಾರದು ಎಂಬ ಕಾರಣಕ್ಕಾಗಿ ನಾನು ಶಾಸಕನಾದ ನಂತರ ಎಲ್ಲ ಕಡೆ ಕನ್ನಡ ಶಾಲೆಗಳನ್ನು ತಂದು ಕನ್ನಡ ಶಿಕ್ಷಕರನ್ನು ನಿಯೋಜಿಸಿದ್ದು, ಈಗ ಮಕ್ಕಳು ಕನ್ನಡ ಕಲಿಯುತ್ತಿದ್ದಾರೆ. ಈಗ ಕ್ಷೇತ್ರದ ಪ್ರತಿ ಮನೆಯಲ್ಲಿ ಕನ್ನಡ ಮಾತನಾಡುವವರಿದ್ದಾರೆ. ಎಲ್ಲ ಕಡೆಗಳಲ್ಲಿ ಕನ್ನಡದ ವಾತಾವರಣ ನಿರ್ಮಾಣವಾಗಿದೆ ಎಂದರು.

ಸಮ್ಮೇಳನ ಮಾಡಬೇಕೆಂದು ಉದ್ದೇಶವಿತ್ತು. ಆದರೆ ಅದು ಕೈಗೂಡಿಲ್ಲ. ಆದರೆ ಅವರು ಹೇಳಿದ ಎಲ್ಲ ಕನ್ನಡದ ಕೆಲಸಗಳನ್ನು ಮಾಡಿದ್ದೇನೆ. ಈ ಕೆಲಸ ನಿರಂತರವಾಗಿ ಮುನ್ನಡೆಯಲಿದೆ. ಕನ್ನಡದ ಕೆಲಸಗಳಿಗೆ ಸದಾ ಸಿದ್ಧ ಎಂದು ಹೇಳಿದರು. ಮಕ್ಕಳು ಕನ್ನಡ ಕಲಿಯಬೇಕು. ಕನ್ನಡದಲ್ಲಿ ಮಾತನಾಡಬೇಕು. ನಮ್ಮ ಸಂಸ್ಕೃತಿ ಪರಂಪರೆಯನ್ನು ಗೌರವಿಸಬೇಕು. ಉತ್ತಮ ಸಂಸ್ಕಾರಗಳನ್ನು ಬೆಳೆಸಿಕೊಳ್ಳಬೇಕು.

ನಿರ್ಮಿಸಬೇಕೆಂಬ ಬೇಡಿಕೆಯಿದೆ. ಅಲ್ಲಿ ನಿವೇಶನದ ಸಮಸ್ಯೆಯಿರುವ ಕಾರಣ ವಿಳಂಬವಾಗುತ್ತಿದೆ. ನಿವೇಶನ ಸಿಕ್ಕ ತಕ್ಷಣ ಕನ್ನಡ ಭವನಕ್ಕೆ ಭೂಮಿ ಪೂಜೆ ನೆರವೇರಿಸುವೆ ಎಂದು ಶಾಸಕರು ಭರವಸೆ ನೀಡಿದರು. ಅಲ್ಲದೇ ಹೊಸ ಕವಿ–ಸಾಹಿತಿಗಳು ಪುಸ್ತಕಗಳನ್ನು ಬರೆದಿದ್ದಾರೆ. ಆದರೆ ಪ್ರಕಟಿಸಲು ಸಾಧ್ಯವಾಗುತ್ತಿಲ್ಲವೆಂದು ಕಸಾಪ ತಾಲ್ಲೂಕು ಅಧ್ಯಕ್ಷರು ಸಲ್ಲಿಸಿದ



ಬೇಡಿಕೆಗೆ ಸ್ಪಂದಿಸಿದ ಶಾಸಕರು, ತಾಲ್ಲೂಕಿನ ಹೊಸ ಕವಿ–ಸಾಹಿತಿಗಳ ಪುಸ್ತಕಗಳನ್ನು ಮುದ್ರಿಸಲು ಸಹಾಯ ಮಾಡುವುದಾಗಿ ಘೋಷಿಸಿದರು.

ನಾನು ಪ್ರಯತ್ನಪಟ್ಟು ಬೀದರ ಜಿಲ್ಲಾ ಕನ್ನಡ ಭವನಕ್ಕೆ ಅನುದಾನ ತಂದು ಕಟ್ಟಡ ನಿರ್ಮಾಣ ಪೂರ್ಣಗೊಳಿಸಿದ್ದೇನೆ. ಜಿಲ್ಲಾ ರಂಗಮಂದಿರಕ್ಕೆ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರವೆಂದು ಮರುನಾಮಕರಣ, ಬಸವಕಲ್ಯಾಣದಲ್ಲಿ ನೂತನ ಅನುಭವ ಮಂಟಪಕ್ಕೆ ಭೂಮಿ ಪೂಜೆ ನನ್ನ ಅವಧಿಯಲ್ಲಿ ನೆರವೇರಿಸಿರುವುದು ನನ್ನ ಸೌಭಾಗ್ಯ ಎಂದರು. ಅದರಂತೆ ಔರಾದ(ಬಿ) ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನಿರಂತರ ಶ್ರಮಿಸುತ್ತಿದ್ದು, ಅನೇಕ ಪ್ರಗತಿ ಕೆಲಸಗಳನ್ನು ಜಾರಿಗೊಳಿಸಲಾಗುತ್ತಿದೆ. ಯಾವುದೇ ತಂಟೆ–ತಕರಾರುಗಳಿಗೆ ಅವಕಾಶವಿಲ್ಲದೇ ಔರಾದ(ಬಿ) ಕ್ಷೇತ್ರದಲ್ಲಿ ಶಾಂತಿ ಸುವ್ಯವಸ್ಥೆ ನೆಲೆಸುವಂತೆ ಮಾಡಲಾಗಿದೆ ಎಂದು ತಿಳಿಸಿದರು.

ಔರಾದನಲ್ಲಿ 7 ಕನ್ನಡ ಸಾಹಿತ್ಯ ಸಮ್ಮೇಳನಗಳು, ಕಮಲನಗರದಲ್ಲಿ ಒಂದು ಸಮ್ಮೇಳನ, ವಲಯ ಸಮ್ಮೇಳನಗಳು ಸೇರಿದಂತೆ ಹತ್ತು ಹಲವು ಕನ್ನಡದ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಹಿಂದಿನ ಅಧ್ಯಕ್ಷರ ನೇತೃತ್ವದಲ್ಲಿಯೇ ಕನ್ನಡ ಸಾಹಿತ್ಯ ಕನ್ನಡ ಭಾಷೆ, ನೆಲ, ಜಲದ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು. ಕನ್ನಡದ ಕೆಲಸಗಳಿಗೆ ಮುನ್ನುಗ್ಗುವ ಮನೋಭಾವ ಎಲ್ಲರಲ್ಲಿಯೂ ಬೆಳೆಯಬೇಕು ಎಂದು ಶಾಸಕರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಕಮಲನಗರದಲ್ಲಿ ಕನ್ನಡ ಭವನ

ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷರಾದ ಪೂಜ್ಯ ಡಾ.ಬಸವಲಿಂಗ ಪಟ್ಟದೇವರು, ದಿವ್ಯ ಸಾನಿಧ್ಯ ವಹಿಸಿದ್ದರು. ಚಿಕ್ಕಮಗಳೂರಿನ ಸಂಸ್ಕೃತಿ ಚಿಂತಕರಾದ ಚಟ್ನಳ್ಳಿ ಮಹೇಶ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಸಮ್ಮೇಳನಾಧ್ಯಕ್ಷರಾದ ಡಾ.ಮನ್ಮಥ ಡೋಳೆ ಅವರು ಸಮ್ಮೇಳನದ ನುಡಿಗಳನ್ನಾಡಿದರು. ರಾಯಚೂರಿನ ಪ್ರಗತಿಪರ ಕೃಷಿ ಚಿಂತಕರಾದ ಕವಿತಾ ಮಿಶ್ರಾ, ಕಸಾಪ ಜಿಲ್ಲಾಧ್ಯಕ್ಷರಾದ ಸುರೇಶ ಚನ್ನಶೆಟ್ಟಿ, ತಾಲ್ಲೂಕು ಅಧ್ಯಕ್ಷ ಬಾಲಾಜಿ ಅಮರವಾಡಿ, 6ನೇ ಸಮ್ಮೇಳನಾಧ್ಯಕ್ಷ ಡಾ ಸಂಜೀವಕುಮಾರ ಜುಮ್ಮಾ, ತಹಸೀಲ್ದಾರರಾದ ಮಹೇಶ ಪಾಟೀಲ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಮುಖಂಡರಾದ ಶಿವರಾಜ ಅಲ್ಮಾಜೆ, ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಪಂಡರಿ ಆಡೆ, ಕಸಾಪ ಗೌರವ ಕಾರ್ಯದರ್ಶಿ ಮಲ್ಲಿಕಾರ್ಜುನ ಟಂಕಸಾಲೆ, ಮಹಿಳಾ ಘಟಕದ ಅಧ್ಯಕ್ಷೆ ಮಹಾನಂದಾ ಎಂಡೆ, ನಿಕಟಪೂರ್ವ ಅಧ್ಯಕ್ಷ ಡಾ.ಶಾಲಿವಾನ ಉದಗೀರೆ, ತಾಲ್ಲೂಕು ಉಪಾಧ್ಯಕ್ಷ ಖಂಡೋಬಾ ಕಂಗಟೆ ಸೇರಿದಂತೆ ಇತರರು ಉಪಸ್ಥಿತರಿದ್ದರು

# ಮಹತ್ವಾಕಾಂಕ್ಷಿ ತಾಲೂಕುಗಳು ಪ್ರೇರಣದಾಯಕವಾಗಲಿ : ಡಾ.ದಿಲೀಷ್ ಶಶಿ

ಮಲ್ಲಮ್ಮ ನುಡಿ ವಾರ್ತೆ ,ಕಾರವಾರ. ನೀತಿ ಆಯೋಗದಿಂದ ಗುರುತಿಸಲ್ಪಟ್ಟಿರುವ ಜಿಲ್ಲೆಯ ಮಹತ್ವಾಕಾಂಕ್ಷಿ ತಾಲೂಕುಗಳಾದ ಸೂಪಾ ಮತ್ತು ಮುಂಡಗೋಡುಗಳಲ್ಲಿ ನಡೆಯುವ ಅಭಿವೃದ್ಧಿ ಕಾರ್ಯಗಳು ಜಿಲ್ಲೆಯ ಎಲ್ಲಾ ತಾಲೂಕುಗಳಿಗೆ ಪ್ರೇರಣಾದಾಯವಾಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಹೇಳಿದರು.ಅವರು ಬುಧವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ, ಜಿಲ್ಲೆಯ ಮಹತ್ವಾಕಾಂಕ್ಷಿ ತಾಲೂಕುಗಳಲ್ಲಿ ಹಮ್ಮಿಕೊಳ್ಳಲಾಗುವ ಸಂಪೂರ್ಣತಾ ಅಭಿಯಾನ 2.0 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಹತ್ವಾಕಾಂಕ್ಷಿ ತಾಲೂಕುಗಳಲ್ಲಿನ ಸಾರ್ವಜನಿಕರಿಗೆ ಆರೋಗ್ಯ, ಪೌಷ್ಠಿಕತೆ, ಶಿಕ್ಷಣ ಮತ್ತು ಕೃಷಿ ಕ್ಷೇತ್ರಗಳಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ಅವರ ಜೀವನಮಟ್ಟವನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿದ್ದು, ಸಂಬಂದಪಟ್ಟ ಇಲಾಖೆಗಳ ಅಧಿಕಾರಿಗಳು ತಮಗೆ ವಹಿಸಲಾದ ಜವಾಬ್ದಾರಿಗಳನ್ನು ಪರಿಪೂರ್ಣಗೊಳಿಸಿ, ಇಲ್ಲಿನ ಸಾಧನೆಗಳು ಇತರೆ ತಾಲೂಕುಗಳಿಗೆ ಮಾದರಿ ಕಾರ್ಯಗಳಾಗುವಂತೆ ಮಾಡಬೇಕು ಎಂದರು.

ಸಂಪೂರ್ಣತಾ ಅಭಿಯಾನ 2.0 ಕಾರ್ಯಕ್ರಮದಲ್ಲಿ ಹಮ್ಮಿಕೊಂಡಿರುವ ಯೋಜನೆಗಳನ್ನು ಕಾಲಮಿತಿಯನ್ನು ಪೂರ್ಣಗೊಳಿಸುವಂತೆ ಸೂಚಿಸಿದ ಅವರು, ಕಾರ್ಯಕ್ರಮದ ಅನುಷ್ಠಾನದ ಸಂದರ್ಭದಲ್ಲಿ ಹೊಸ ಯೋಜನೆಗಳು ಅಗತ್ಯವಿದ್ದಲ್ಲಿ ಅಥವಾ ನೂತನ ಅನ್ವೇಷಣೆಗಳನ್ನು ಕೈಗೊಳ್ಳಬೇಕಾದಲ್ಲಿ ಈ ಬಗ್ಗೆ ಮಾಹಿತಿ ನೀಡುವಂತೆ ಮತ್ತು ಅಭಿಯಾನದಲ್ಲಿ ಕೈಗೊಳ್ಳುವ ಕಾರ್ಯಕ್ರಮಗಳ ಬಗ್ಗೆ ಹೆಚ್ಚಿನ ಅರಿವು ಮತ್ತು ಜಾಗೃತಿ ಮೂಡಿಸಿ, ಸಾರ್ವಜನಿಕರ ಸಹಭಾಗಿತ್ವದಲ್ಲಿ ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ, ಈ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ತಿಳಿಸಿದರು.

ಮುಂಡಗೋಡು ತಾ.ಪಂ. ಕಾರ್ಯನಿರ್ವಹಣಾಧಿಕಾರಿ ದಾಸನಕೊಪ್ಪ ಮಾತನಾಡಿ, ಮಹತ್ವಾಕಾಂಕ್ಷಿ ತಾಲೂಕಾದ ಮುಂಡಗೋಡು ತಾಲೂಕಿನಲ್ಲಿ ಈ ಮೊದಲು ಸಂಪೂರ್ಣತಾ ಅಭಿಯಾನದಲ್ಲಿ ನೀಡಿದ್ದ ಸೂಚಕಗಳ ಗುರಿಯನ್ನು ಎಲ್ಲಾ ಇಲಾಖೆಗಳ ಸಹಕಾರದಿಂದ ಅತ್ಯಂತ ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ಪ್ರಸ್ತುತದ ಸಂಪೂರ್ಣತಾ ಅಭಿಯಾನ 2.0 ನ್ನು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅಲ್ಲಾ ಭಕ್ಷ್, ಪ್ರಕಾಶ್ ಹಾಲಮ್ಮನವರ್, ಯೋಜನಾ ನಿರ್ದೇಶಕ ಕರೀಂ ಅಸಾದಿ, ಮುಖ್ಯ ಲೆಕ್ಕಾಧಿಕಾರಿ ಆನಂದ್‌ಸಾ ಹಬೀಬ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವಪ್ರಸಾದ್ ಗಾಂವಕರ್ ಇದ್ದರು.

# ಭಕ್ತಿ ಆಚರಣೆಯಿಂದ ಮನುಷ್ಯನ ಆತ್ಮಶುದ್ಧಿ ಸಾಧ್ಯವಾಗುತ್ತದೆ : ಮುರಳೀಧರ ಹೆಚ್ ಎಲ್, ಕರೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯವತಿಯಿಂದ ತಾಲ್ಲೂಕಿನ ಹಳ್ಳಿಖೇಡ ಕೆ ಗ್ರಾಮದಲ್ಲಿ ಧಾರ್ಮಿಕ ಕಾರ್ಯಕ್ರಮವಾದ ಸಹಸ್ರ ಬಿಲ್ವಾರ್ಚನೆ ಪೂಜಾ ಕಾರ್ಯಕ್ರಮದ ನಡೆಸಿ, ಧಾರ್ಮಿಕ ಕಾರ್ಯಕ್ರಮಗಳಿಂದ ಎಲ್ಲರಿಗೂ ನೆಮ್ಮದಿ ದೊರೆಯುತ್ತದೆ. ಪ್ರತಿಯೊಬ್ಬರು ಜೀವನದಲ್ಲಿ ಸದಾಚಾರ ಸಂಪನ್ನರಾಗಿ ಬಾಳಬೇಕು. ಭಕ್ತಿ ಆಚರಣೆಯಿಂದ ಮನುಷ್ಯನ ಆತ್ಮಶುದ್ಧಿ ಸಾಧ್ಯವಾಗುತ್ತದೆ ತಾಲ್ಲೂಕಿನ ಹಳ್ಳಿಖೇಡ ಗ್ರಾಮದಲ್ಲಿ ಪ್ರಪ್ರಥಮವಾಗಿ ಧಾರ್ಮಿಕ ಕಾರ್ಯಕ್ರಮವಾದ ಸಹಸ್ರಬಿಲ್ವಾರ್ಚನೆ ಪೂಜಾ ಕಾರ್ಯಕ್ರಮವನ್ನು ಗೌರವಾನ್ವಿತ ಜಿಲ್ಲಾ ನಿರ್ದೇಶಕರಾದ ಮುರಳೀಧರ ಹೆಚ್ ಎಲ್, ರವರು ಉದ್ಘಾಟಿಸಿ ಮಾತನಾಡುತ್ತಾ ನುಡಿದರು. ದೇವರು ನಮಗೆ ಬೇಕು ಎಂಬ ಶ್ರದ್ಧೆ ಇರಬೇಕು, ನೀವು ಕೊಟ್ಟ ಯಾವುದೇ ವಸ್ತು ನನಗೆ ಬೇಡ ಎಂದು ದೇವರು ಹೇಳುತ್ತಾರೆ. ಶ್ರದ್ಧೆಯ ಭಕ್ತಿಯನ್ನು ಮಾತ್ರ ನೀಡಿ. ಯಾವ ದೇವರನ್ನು ಪೂಜೆ ಮಾಡುತ್ತೀರಿ ಎಂಬುದು ಮುಖ್ಯವಲ್ಲ, ಹೇಗೆ ಆರಾಧನೆ ಮಾಡುತ್ತೀರಿ ಎಂಬುದು ಮುಖ್ಯ. ಭಜನೆಯನ್ನು ಹೇಳುವಾಗ ಭಕ್ತಿಯಿಂದ ದೇವರ ಮೂಲ ಸ್ವರೂಪವನ್ನು ಮಾತ್ರ ಕಲ್ಪಿಸಿಕೊಂಡು ಭಜನೆ ಮಾಡಬೇಕು. ಭಕ್ತಿಭಾವದಿಂದ ದೇವರ ಬಳಿಗೆ ಒಂದು ಹೆಜ್ಜೆ ಮುಂದಿಟ್ಟರೆ ದೇವರು ಹತ್ತು ಹೆಜ್ಜೆಯಿಂದ ನಮ್ಮ ಬಳಿಗೆ ಬರುತ್ತಾನೆ. ಒಳಗಿರುವ ದೇವರನ್ನು ಕಲ್ಲು ಎಂದು ಪೂಜೆ ಮಾಡಬಾರದು, ದೇವರು ಇದ್ದಾನೆ ಎಂಬ ಭಾವನೆಯಿಂದ ಅರ್ಚನೆ ಮಾಡಿದರೆ ಮಾತ್ರ ನಮ್ಮೊಳಗಿರುವ ದೇವರನ್ನು ನಮಗೆ ಕಾಣಲು ಸಾಧ್ಯ ಎಂದರು. ಶ್ರೀ ಕ್ಷೇತ್ರ ಧರ್ಮಸ್ಥಳ ಉತ್ತಮ ಕೆಲಸಗಳನ್ನು ಸಮಾಜಮುಖಿಯಾಗಿ ಮಾಡುತ್ತಿದೆ. ದೇವಾಲಯಗಳ ಜೀರ್ಣೋದ್ಧರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಅಲ್ಲದೇ ಕ್ಷೇತ್ರದ ವತಿಂದ ಆರ್ಥಿಕ ಸಹಕಾರ ನೀಡುತ್ತಿದೆ. ಆನರು ಇಂತಹ ಯೋಜನೆಗಳಲ್ಲಿ ಭಾಗವಹಿಸಿ ಹೆಚ್ಚಿನ ಸೌಲಭ್ಯ ಪಡೆದುಕೊಳ್ಳಬೇಕೆಂದು ಮುರಳೀಧರ ಹೆಚ್ ಎಲ್, ಕರೆ ನೀಡಿದರು. ಈ ಸಂದರ್ಭದಲ್ಲಿ ವೀರೇಷಪ್ಪ ಟ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿಗಳು, ಅಂಬರೀಶ ಃಖ, ಮೇಲ್ವಿಚಾರಕರು ಕಲ್ಲೂರ. ಉದಯ ಕುಮಾರ್ ವಾರದ, ಕರ್ನಾಟಕ ಸರ್ಕಾರ ಪಂಚ ಗ್ಯಾರಂಟಿ ಯೋಜನೆ ಜಿಲ್ಲಾ ಉಪಾಧ್ಯಕ್ಷರು, ಸುಭಾಷ್ ವಾರದ, ಚೇತನ ಚಿಲಶೆಟ್ಟಿ, ರೇವಣಸಿದ್ಧ ಕಲ್ಲೂರ, ಅನಿಲ್ ಕುಮಾರ ಕೊನೆರಿ, ಕರಿಬಸಪ್ಪ ಭಿಮಶೆಟ್ಟಿ, ಸಂಗಮೇಶ ಪಾಟೀಲ, ಸಾಗರ ಬೂರಿ ಉಪಸ್ಥಿತರಿದ್ದರು.



ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಅವರಿಂದ ಹುಮ್ನಾಬಾದ್ ತಾಲೂಕಿನ ಮೋಳಕೇರಾ ಗ್ರಾಮದಲ್ಲಿ ಸ್ಫೋಟಗೊಂಡು ಸೋಲಾಪುರ್ ಗಂಗಮಯಿ ಆಸ್ಪತ್ರೆ ಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಅನ್ವರ್ ಅವರ ಆರೋಗ್ಯ ವಿಚಾರಿಸಿದರು. ಈ ಸಂದರ್ಭದಲ್ಲಿ ವೈದ್ಯಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು,

# ಮದ್ಯ, ಮಾದಕ ವಸ್ತುಗಳು ಅವನ ಕುಟುಂಬವನ್ನೂ ನಾಶ ಮಾಡುತ್ತದೆ

• ಮಲ್ಲಮ್ಮ ನುಡಿ ವಾರ್ತೆ ,ಶಹಾಪುರ:

ಫೆಬ್ರವರಿ 04:–ಮದ್ಯ ಮತ್ತು ಮಾದಕ ವಸ್ತುಗಳು ಇಂದು ವ್ಯಕ್ತಿಯನ್ನಷ್ಟೇ ಅಲ್ಲ, ಅವನ ಕುಟುಂಬವನ್ನೂ, ಸಮಾಜವನ್ನೂ ನಾಶ ಮಾಡುವ ದೊಡ್ಡ ಅಪಾಯವಾಗಿ ಪರಿಣಮಿಸಿವೆ. ಮದ್ಯಪಾನ ಮತ್ತು ಮಾದಕ ವ್ಯಸನದಿಂದ ಆರೋಗ್ಯ ಹದಗೆಡುತ್ತದೆ, ಆರ್ಥಿಕ ಸ್ಥಿತಿ ಕುಸಿಯುತ್ತದೆ, ಕುಟುಂಬದಲ್ಲಿ ಅಶಾಂತಿ ಉಂಟಾಗುತ್ತದೆ ಮತ್ತು ಸಮಾಜದಲ್ಲಿ ಅಪರಾಧಗಳು ಹೆಚ್ಚಾಗುತ್ತವೆ ಎಂದು ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರಾದ ಶರಣಪ್ಪ ಸಲಾದಪುರ ಅವರು ಹೇಳಿದ್ದಾರೆ.

## ಸಂಪಾದಕೀಯ

### "ಕಬ್ಬು ಬೆಳೆದ ರೈತರ ನೆರವಿಗೆ ಸಕ್ಕರೆ ಕಾರ್ಖಾನೆಗಳು ಮುಂದೆ ಬರಲಿ"

ಕಬ್ಬು ಬೆಳೆದ ರೈತರ ನೆರವಿಗೆ ಸಕ್ಕರೆ ಕಾರ್ಖಾನೆಗಳು ಮುಂದೆ ಬರಲಿ

ರಾಜ್ಯದ ಕೃಷಿ ಆರ್ಥಿಕತೆಯಲ್ಲಿ ಕಬ್ಬು ಪ್ರಮುಖ ಪಾತ್ರ ವಹಿಸಿದೆ. ಲಕ್ಷಾಂತರ ರೈತ ಕುಟುಂಬಗಳು ತಮ್ಮ ಜೀವನೋಪಾಯಕ್ಕಾಗಿ ಕಬ್ಬು ಬೆಳೆ ಅವಲಂಬಿಸಿವೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಉತ್ಪಾದನಾ ವೆಚ್ಚ ಹೆಚ್ಚಳ, ಕಾರ್ಮಿಕ ಕೊರತೆ, ನೀರಿನ ಸಮಸ್ಯೆ ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಪಾವತಿ ವಿಳಂಬ ಇವುಗಳಿಂದ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ.

ಕಬ್ಬು ಬೆಳೆ ಬೆಳೆದ ರೈತರು ಬೆಳೆ ಕಟಾವು ಮಾಡಿದರೂ ಸಮಯಕ್ಕೆ ಸರಿಯಾಗಿ ಆಗದೇ ಹಣ ಸಿಗದೆ ಸಾಲದ ಬಲೆಗೆ ಸಿಲುಕುವ ಸ್ಥಿತಿ ನಿರ್ಮಾಣವಾಗಿದೆ. ಹಲವಾರು ಸಕ್ಕರೆ ಕಾರ್ಖಾನೆಗಳು ತಿಂಗಳುಗಟ್ಟಲೆ ಬಾಕಿ ಹಣ ಪಾವತಿಸದೇ ರೈತರ ನಂಬಿಕೆಗೆ ಧಕ್ಕೆ ತರುತ್ತಿವೆ. ರೈತರಿಗೆ ಕಬ್ಬು ಮಾರಾಟವೇ ಪ್ರಮುಖ ಆದಾಯವಾಗಿರುವುದರಿಂದ ಈ ವಿಳಂಬ ಅವರ ಕುಟುಂಬ ಜೀವನದ ಮೇಲೆ ಭಾರೀ ಪರಿಣಾಮ ಬೀರುತ್ತಿದೆ.

ಸಕ್ಕರೆ ಕಾರ್ಖಾನೆಗಳು ರೈತರ ಶ್ರಮದಿಂದಲೇ ಲಾಭ ಗಳಿಸುತ್ತಿವೆ ಎಂಬುದನ್ನು ಮರೆಯಬಾರದು. ಆದ್ದರಿಂದ ರೈತರ ಸಂಕಷ್ಟದ ಸಮಯದಲ್ಲಿ ಕಾರ್ಖಾನೆಗಳು ಸಾಮಾಜಿಕ ಹೊಣೆಗಾರಿಕೆ ತೋರಿಸಿ ತಕ್ಷಣ ಬಾಕಿ ಹಣ ಪಾವತಿಸುವುದರ ಜೊತೆಗೆ ಬೆಳೆ ಅಭಿವೃದ್ಧಿಗೆ ಅಗತ್ಯ ನೆರವು ನೀಡಬೇಕು. ಬೀಜ, ಗೊಬ್ಬರ, ತಾಂತ್ರಿಕ ಮಾರ್ಗದರ್ಶನ ಹಾಗೂ ನೀರಾವರಿ ಸಹಾಯ ಒದಗಿಸುವ ಮೂಲಕ ರೈತರ ಉತ್ಪಾದಕತೆ ಹೆಚ್ಚಿಸಲು ಕೈಜೋಡಿಸಬೇಕು.

ಸರ್ಕಾರವೂ ಈ ವಿಷಯದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಸಕ್ಕರೆ ಕಾರ್ಖಾನೆಗಳಿಂದ ಪಾವತಿ ವಿಳಂಬವಾದರೆ ದಂಡ ವಿಧಿಸುವ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ ರೈತರ ಹಕ್ಕುಗಳನ್ನು ರಕ್ಷಿಸಬೇಕು. ಜೊತೆಗೆ ಕಬ್ಬು ಕನಿಷ್ಠ ಬೆಲೆ ಸಮಯಕ್ಕೆ ತಕ್ಕಂತೆ ಪರಿಷ್ಕರಿಸಿ ಉತ್ಪಾದನಾ ವೆಚ್ಚಕ್ಕೆ ತಕ್ಕ ನ್ಯಾಯಯುತ ದರ ಒದಗಿಸಬೇಕು.

ರೈತ ಉಳಿದರೆ ಮಾತ್ರ ಕೃಷಿ ಉಳಿಯುತ್ತದೆ, ಕೃಷಿ ಉಳಿದರೆ ಮಾತ್ರ ದೇಶದ ಆಹಾರ ಭದ್ರತೆ ಕಾಪಾಡಬಹುದು. ಹೀಗಾಗಿ ಕಬ್ಬು ಬೆಳೆದ ರೈತರ ನೆರವಿಗೆ ಸಕ್ಕರೆ ಕಾರ್ಖಾನೆಗಳು ಮಾನವೀಯ ದೃಷ್ಟಿಯಿಂದ ಮುಂದೆ ಬಂದು ಕೈಜೋಡಿಸುವುದು ಇಂದು ಕಾಲದ ಅಗತ್ಯವಾಗಿದೆ. ರೈತರಿಗೆ ನ್ಯಾಯ ದೊರಕಿದಾಗ ಮಾತ್ರ ಗ್ರಾಮೀಣ ಆರ್ಥಿಕತೆ ಬಲಿಷ್ಠವಾಗುತ್ತದೆ.



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕ

# ಫೈನಲ್ ಪ್ರವೇಶಿ ಸಿದ ರೌಜಾ ಸ್ಟಾರ್ಸ್



• ಮಲ್ಲಮ್ಮ ನುಡಿ ವಾರ್ತೆ ,ಕಲಬುರಗಿ

ಸಂಗತ್ರಶ್ವಾಡಿಯಲ್ಲಿ ಮಂಗಳವಾರ ನಡೆದ ಕೆಬಿಎನ್‌ಪಿಎಲ್ 2026ರ ಕ್ವಾಲಿಫೈಯರ್–1 ಪಂದ್ಯದಲ್ಲಿ ರೋಚಕ ಹೋರಾಟಕ್ಕೆ ಸಾಕ್ಷಿಯಾದ ಅಭಿಮಾನಿಗಳಿಗೆ, ಗಂಗಾವತಿ ಲಯನ್ಸ್ ವಿರುದ್ಧ 21 ರನ್‌ಗಳ ಜಯ ಸಾಧಿಸಿದ ರೌಝಾ ಸ್ಟಾರ್ಸ್ ಭರ್ಜರಿ ಪ್ರದರ್ಶನದ ಮೂಲಕ ಫೈನಲ್ ಪ್ರವೇಸಿಸಿದೆ. ಟಾಸ್ ಗೆದ್ದ ಗಂಗಾವತಿ ಲಯನ್ಸ್ ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ರೌಝಾ ಸ್ಟಾರ್ಸ್ ಪರವಾಗಿ ಆರಂಭಿಕ ಬ್ಯಾಟ್ಸ್‌ಮನ್‌ಗಳಾದ ಎಂ.ಡಿ. ಮುನೀರ್ ಮತ್ತು ಆದರ್ಶ್ ಎಂ. ತಂಡಕ್ಕೆ ಉತ್ತಮ ಆರಂಭ ನೀಡಿದರು. ಇಬ್ಬರೂ ಸೇರಿ 78 ರನ್‌ಗಳ ಜೊತೆಯಾಟ ನಡೆಸಿದರು. ಇನಿಂಗ್ಸ್ ಮೊದಲಾರ್ಧದಲ್ಲಿ ಉತ್ತಮ ರನ್‌ರೇಟ್ ಕಾಯ್ದುಕೊಂಡ ರೌಝಾ ಸ್ಟಾರ್ಸ್, ನಂತರದ ಹಂತದಲ್ಲಿ ವಿಕೆಟ್‌ಗಳನ್ನು ಕಳೆದುಕೊಂಡಿತು. ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 174 ರನ್‌ಗಳು ತಂಡದ ಮೊತ್ತವಾಯಿತು.

ಮುನೀರ್ (41), ಆದರ್ಶ್ ಎಂ. (48), ಯುನೂಸ್ ಅಲಿ ಬೈಗ್ (34) ಮತ್ತು ಫೈಝಾನ್ ರಾಯಿಸ್ (24) ರನ್‌ಗಳ ಮೂಲಕ ತಂಡಕ್ಕೆ ಕೊಡುಗೆ ನೀಡಿದರು. ಗಂಗಾವತಿ ಲಯನ್ಸ್ ಪರ ರೋಹನ್ ನವೀನ್ ಎರಡು ವಿಕೆಟ್ ಪಡೆದರು.

ಲಕ್ಷ್ಯ ಬೆನ್ನತ್ತಿದ ಗಂಗಾವತಿ ಲಯನ್ಸ್ ಆರಂಭಿಕ ಬ್ಯಾಟ್ಸ್‌ಮನ್‌ಗಳಾದ ಭುವನ್ ರಾಜು ಮತ್ತು ಮಿರ್ಜಾ ವಸೀಮ್ ಬೈಗ್ ಉತ್ತಮ ಆಟ ಪ್ರದರ್ಶಿಸಿದರು. ಇದಾದ ಬಳಿಕ ರೌಝಾ ಸ್ಟಾರ್ಸ್ ಕಟ್ಟುನಿಟ್ಟಾದ ಫೀಲ್ಡಿಂಗ್ ಹಾಗೂ ಶಿಸ್ತುಬದ್ಧ ಬೌಲಿಂಗ್ ಮೂಲಕ ಒತ್ತಡ ಹೇರುತ್ತಾ ಕ್ರಮೇಣ ವಿಕೆಟ್‌ಗಳನ್ನು ಕಬಳಿಸಿತು. ಗಂಗಾವತಿ ಲಯನ್ಸ್ ತಂಡ 19.2 ಓವರ್‌ಗಳಲ್ಲಿ 153 ರನ್‌ಗಳಿಗೆ ಆಲೌಟ್ ಆಯಿತು.ಅದ್ಭುತ ಬೌಲಿಂಗ್ ಪ್ರದರ್ಶನ ನೀಡಿದ ವಿಕ್ಕಿ ಐತವಾಳ್ 5 ವಿಕೆಟ್‌ಗಳನ್ನು ಪಡೆದು ಪಂದ್ಯದ ಶ್ರೇಷ್ಠ ಆಟಗಾರ ಪ್ರಶಸ್ತಿಗೆ ಪಾತ್ರರಾದರು.

ಇದಕ್ಕೂ ಮುನ್ನ ನಡೆದ ಎಲಿಮಿನೇಟರ್ ಪಂದ್ಯದಲ್ಲಿ, ಮಾರ್ಕೆಟ್ ಸೂಪರ್ ಕಿಂಗ್ಸ್ ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊಮಿನಪುರ ಮಾಸ್ಟರ್ಸ್ ಪರವಾಗಿ ಪ್ರಜ್ವಲ್ ಪವನ್ ಮತ್ತು ನಿರಂಜನ್ ಇನಿಂಗ್ಸ್ ಆರಂಭಿಸಿದರು. ನಿರಂಜನ್ ಕೇವಲ 4 ರನ್‌ಗಳ ಅಂತರದಲ್ಲಿ ಅರ್ಧಶತಕ ತಪ್ಪಿಸಿಕೊಂಡು, 5 ಬೌಂಡರಿ ಮತ್ತು 2 ಸಿಕ್ಸರ್‌ಗಳೊಂದಿಗೆ 46 ರನ್‌ಗಳು ಗಳಿಸಿದರು.

ಅಬುಲ್ ಹಸನ್ ಖಾಲಿದ್ (32), ರಾಹುಲ್ ಇಂಜಾಲಿಕರ್ (25) ಮತ್ತು ಹರೀಶ್ ಜೆ.ಕೆ. (24) ರನ್‌ಗಳ ನೆರವಿನಿಂದ ಮೊಮಿನಪುರ ಮಾಸ್ಟರ್ಸ್ ತಂಡ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 167 ರನ್‌ಗಳು ಗಳಿಸಿತು. ಮಾರ್ಕೆಟ್ ಸೂಪರ್ ಕಿಂಗ್ಸ್ ಪರ ಅಜಯ್ ಗೌಡ 4 ವಿಕೆಟ್‌ಗಳನ್ನು ಪಡೆದು ಮಿಂಚಿದರು.

ಲಕ್ಷ್ಯ ಬೆನ್ನತ್ತಿದ ಮಾರ್ಕೆಟ್ ಸೂಪರ್ ಕಿಂಗ್ಸ್ ಪರ ವಿಜಯರಾಜ್ ಮತ್ತು ಅನುರಾಗ್ ಆರಂಭದಿಂದಲೇ ಆಕ್ರಮಣಕಾರಿ ಆಟ ಪ್ರದರ್ಶಿಸಿ 103 ರನ್‌ಗಳ ಭರ್ಜರಿ ಜೊತೆಯಾಟ ನಡೆಸಿದರು. ಅನುರಾಗ್ ಕೇವಲ 28 ಬಾಲ್‌ಗಳಲ್ಲಿ 58 ರನ್‌ಗಳು (5 ಬೌಂಡರಿ, 5 ಸಿಕ್ಸರ್) ಗಳಿಸಿದರು. ನಂತರ ಅಜಯ್ ಗೌಡ (11) ರನ್‌ಗಳನ್ನು ಸೇರಿಸಿದರು. ಅಂತಿಮವಾಗಿ ವಿಜಯರಾಜ್ (60)* ಮತ್ತು ಮಾಧವ್ ಬಜಾಜ್ (30)* ಅಜೇಯ ಆಟದೊಂದಿಗೆ ತಂಡವನ್ನು ಗೆಲುವಿನತ್ತ ಕೊಂಡೊಯ್ದರು.

ಮಾರ್ಕೆಟ್ ಸೂಪರ್ ಕಿಂಗ್ಸ್ ತಂಡ 15.3 ಓವರ್‌ಗಳಲ್ಲಿ ಗುರಿ ತಲುಪಿ, 7 ವಿಕೆಟ್‌ಗಳ ಜಯ ಸಾಧಿಸಿತು. ಇದರೊಂದಿಗೆ ಮೊಮಿನಪುರ ಮಾಸ್ಟರ್ಸ್ ಟೂರ್ನಿಯಿಂದ ಹೊರಬಿದ್ದಿತು.

ನಾಳೆ ಸಂಜೆ 6:30ಕ್ಕೆ ನಡೆಯಲಿರುವ ಕ್ವಾಲಿಫೈಯರ್–2 ಪಂದ್ಯದಲ್ಲಿ, ಗಂಗಾವತಿ ಲಯನ್ಸ್ ಮತ್ತು ಮಾರ್ಕೆಟ್ ಸೂಪರ್ ಕಿಂಗ್ಸ್ ತಂಡಗಳು ಫೈನಲ್ ಪ್ರವೇಶಕ್ಕಾಗಿ ಮುಖಾಮುಖಿಯಾಗಲಿವೆ.

# ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ (ಪಿ.ಎಮ್.ಎಸ್.ವೈ.ಎಂ) ಯೋಜನೆಯಡಿ ನೋಂದಣಿಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ:

ಕೇಂದ್ರ ಸರ್ಕಾರವು ಅಸಂಘಟಿತ ವಲಯದ ಕಾರ್ಮಿಕರಿಗೆ ವಯೋವೃದ್ಧ ವೇಳೆಯಲ್ಲಿ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣಕ್ಕಾಗಿ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್–ಧನ್ (ಪಿ.ಎಮ್.ಎಸ್.ವೈ.ಎಂ.) ಎಂಬ ವಂತಿಗೆ ಆಧಾರಿತ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಯೋಜನೆಯಡಿ 18 ರಿಂದ 40 ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ನೋಂದಾಯಿಸಿಕೊಂಡು ಇದರ ಪ್ರಯೋಜನ ಪಡೆಯಬೇಕೆಂದು ಕಲಬುರಗಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರಾದ ಮೊಹಮ್ಮದ್ ಬಶೀರ್ ಅನ್ಸಾರಿ ಅವರು ತಿಳಿಸಿದ್ದಾರೆ.

ವಯಸ್ಸಿಗೆ ಅನುಗುಣವಾಗಿ ಮಾಸಿಕವಾಗಿ 55 ರೂ. ನಿಂದ 200 ರೂ.ವರೆಗೆ ವಂತಿಕೆ ಪಾವತಿ ಮಾಡಬೇಕಾಗುತ್ತದೆ. ಕೇಂದ್ರ ಸರ್ಕಾರದ ವತಿಯಿಂದ ಅಷ್ಟೇ ವಂತಿಕೆ ಪಾವತಿಸಿ ಬ್ಯಾಂಕ್ ಖಾತೆಯಲ್ಲಿ ಸದರಿ ಮೊತ್ತವನ್ನು ಸಂಗ್ರಹಿಸಲಾಗುತ್ತದೆ. ನೊಂದಣಿಯಾದ ಫಲಾನುಭವಿಯು ವಯಸ್ಸು 60 ಪೂರ್ಣಗೊಂಡ ನಂತರ ತಿಂಗಳಿಗೆ 3,000 ರೂ. ಖಚಿತ ಮಾಸಿಕ ಪಿಂಚಣಿ ಪಡೆಯಲು ಅರ್ಹರಾಗಿರುತ್ತಾರೆ.

ಈ ಯೋಜನೆಯಡಿ ನರೇಗಾ ಕಾರ್ಮಿಕರು, ಎಸ್.ಹೆಚ್.ಜಿ. (ಖಊಉ) ಸದಸ್ಯರು, ಕೃಷಿ ಕಾರ್ಮಿಕರು, ಅಂಗನವಾಡಿ ಕಾರ್ಮಿಕರು, ಮಧ್ಯಾಹ್ನದ ಬಿಸಿ ಊಟದ ಕಾರ್ಮಿಕರು, ಆಶಾ ಕಾರ್ಯಕರ್ತೆಯರು, ಬೀದಿ ಬದಿ ವ್ಯಾಪಾರಿಗಳು, ಗೃಹ ಕಾರ್ಮಿಕರು, ಹಮಾಲರು, ಟೈಲರ್‌ಗಳು, ಗೃಹ ಕಾರ್ಮಿಕರು, ಅಗಸರು, ಚಿಂದಿ ಆಯುವವರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು, ಭಟ್ಟಿ ಕಾರ್ಮಿಕರು, ಸಿನಿ ಕಾರ್ಮಿಕರು, ನೇಕಾರರು, ಬೀದಿಬದಿ ವ್ಯಾಪಾರಿಗಳು, ಹೋಟೆಲ್ ಕಾರ್ಮಿಕರು, ಫೋಟೋಗ್ರಾಫರ್‌ಗಳು, ಸ್ವತಂತ್ರ ಲೇಖನ ಬರಹಗಾರರು, ಬೀಡಿ ಕಾರ್ಮಿಕರು, ಅಸಂಘಟಿತ ವಿಲಕಚೇತನ ಕಾರ್ಮಿಕರು, ಅಲೆಮಾರಿ ಪಂಗಡದ ಕಾರ್ಮಿಕರು, ಹಗ್ಗ ಸಿದ್ಧಪಡಿಸುವ (ಬೈಜಂತ್ರಿ) ಕಾರ್ಮಿಕರು, ಉಪ್ಪನ್ನು ತಯಾರಿಸುವ ಉಪ್ಪಾರರು, ಬಿದಿರು ವೃತ್ತಿಯಲ್ಲಿರುವ ಮೇದಾರರು, ಚಪ್ಪಲಿ ತಯಾರಿಕೆ ಮತ್ತು ರಿಪೇರಿ ಮಾಡುವ ಕಾರ್ಮಿಕರು, ಕೇಬಲ್ ಕಾರ್ಮಿಕರು, ಕಲ್ಯಾಣಮಂಟಪ/ಸಭಾಭವನ/ಟೆಂಟ್/ಪೆಂಡಾಲ್‌ಗಳ ಕಾರ್ಮಿಕರು, ಗಾದಿ, ಹಾಸಿಗೆ ಮತ್ತು ದಿಂಬು ತಯಾರಿಕಾ ಕಾರ್ಮಿಕರು (ಪಿಂಜಾರರು/ ನದಾಫರು), ಬಡಗಿ/ಮರದ ಕೆತ್ತನೆ ಕೆಲಸ, ಉಣ್ಣೆ ಮತ್ತು ಕಂಬಳಿ ನೇಯ್ದೆ ಹಾಗೂ ಕಂಬಳಿ ತಯಾರಿಕೆ, ಅಡಿಕೆ ಹಾಳೆಯಿಂದ ತಟ್ಟೆ ತಯಾರಿಕೆ, ಸಿಲ್ಕ್ ರೀಲಿಂಗ್ ಮತ್ತು ಸಿಲ್ಕ್ ಟ್ರಿಸ್ಟಿಂಗ್ ಕೆಲಸ, ಪೊರಕೆ ಕಡ್ಡಿ ತಯಾರಿಕೆ, ಸುಣ್ಣ ಸುಡುವುದು, ವಾಲಗ ಊದುವುದು, ದನಗಾಹಿ ವೃತ್ತಿ, ಹೈನುಗಾರಿಕೆ (ಗೌಳಿವೃತ್ತಿ), ಬಳೆ ವ್ಯಾಪಾರ/ ಮೇಣದಬತ್ತಿ ತಯಾರಿಕೆ, ಸ್ಮಶಾನ ಕಾರ್ಮಿಕರು, ವಿಗ್ರಹ/ಕಲ್ಲುಕೆತ್ತನೆ ಕೆಲಸ, ಮೀನುಗಾರಿಕೆ ಕಂಚು ಕೆಲಸ, ನಾರಿನಿಂದ ವಿವಿಧ ಉತ್ಪನ್ನ ತಯಾರಿಕೆ, ಬೆತ್ತದ ಕೆಲಸ (ರಟ್ಟನ್) ಆಟಿಕೆ/ಗೊಂಬೆ ತಯಾರಿಕೆ ಮತ್ತು ಕೆತ್ತನೆ ಕೆಲಸ ಚರ್ಮದ ವಸ್ತುಗಳ ತಯಾರಿಕೆ, ಅಗರಬತ್ತಿ ತಯಾರಿಕೆ, ಕಾಯರ್ ಫೈಬರ್ ತಯಾರಿಕೆ, ನಾಟಿ ಔಷಧಿ ತಯಾರಿಕೆ, ಬಣ್ಣ ಶೃಂಗಾರ (ಬ್ಯೂಟಿ ಪಾರ್ಲರ್) ಮಾಡುವ ವೃತ್ತಿ, ಶೀಟ್‌ಮೆಟಲ್ ವೃತ್ತಿ, ಬೈಸಿಕಲ್ ರಿಪೇರಿ, ಬಣ್ಣಗಾರಿಕೆ, ಮುದ್ರಣಗಾರಿಕೆ ಮತ್ತು ಹಚ್ಚೆಹಾಕುವುದು, ಮ್ಯಾಟ್ ತಯಾರಿಕೆ, ಗಾಡಿ/ರಥ ತಯಾರಿಕೆ, ಗ್ಲಾಸ್ ಬೀಡ್ಸ್ ತಯಾರಿಕೆ.

ಮೆಟಲ್ ಕ್ರಾಫ್ಟ್, ಟಿನ್ ವಸ್ತುಗಳ ತಯಾರಿಕೆ, ಜೇನು ಸಾಕಾಣಿಕೆ, ನಿಟ್ಟಿಂಗ್ ಕೆಲಸ, ಗಾಣದ ಕೆಲಸ, ಮೆಷನರಿ ಕೆಲಸ, ಹೂವುಕಟ್ಟುವ ವೃತ್ತಿ, ಹೊಸ್ಯೆರಿ ವಸ್ತುಗಳ ತಯಾರಿಕೆ, ಪಾತ್ರೆಗಳಿಗೆ ಕಲಾಯಿ ಹಾಕುವುದು, ವಾದ್ಯ ವೃಂದವೃತ್ತಿ, ವೆಲ್ಡಿಂಗ್ ಕೆಲಸ, ಕುರಿ ಸಾಕಾಣಿಕೆ, ಧಾರ್ಮಿಕ ಭಿಕ್ಷುಕ ವೃತ್ತಿ, ಮೋಡಿಗಾರರು, ಕಣ್ಣು ಕಟ್ಟು ವಿದ್ಯೆ, ಭವಿಷ್ಯ ನುಡಿಯುವುದು, ಲಾವಣಿ ಪದಗಳನ್ನು ಹಾಡುವುದು, ಹವಾಮಾನ ಪ್ರವಾದಿಗಳು, ಗೊಂದಲು ಹಾಕುವುದು (ಪೂಜಾವಿಧಾನ), ಹಳ್ಳಿಗಾಡಿನ ಸಾಹಸ ಕಲೆಗಳ ಪ್ರದರ್ಶನ, ಗುಂಡು ಎಸೆಯುವುದು, ಲಾಗಹಾಕುವುದು, ಎತ್ತಿನ ಬಂಡಿ ತಿರುಗಿಸುವುದು ಇತರೆ ಕಸರತ್ತುಗಳ ವೃತ್ತಿ, ಗ್ರಾಮ ಚರಿತ್ರೆಗಳ ಪಾರು ಪತ್ತೆಗಾರರು, ತಂಬೂರಿ ಮತ್ತು ಹಾರ್ಮೋನಿಯಂ ಸಹಾಯದಿಂದ ಪದಗಳನ್ನು ಕಟ್ಟಿಹಾಡುವುದು, ದೇವಸ್ಥಾನಗಳಲ್ಲಿ ನರ್ತಿಸುವುದು, ಭಿಕ್ಷಾಟನೆ, ಅಂಭಾದೇವಿಯ ಆರಾಧಕರು, ಗೋಂಧಳಿ ನೃತ್ಯ ಮಾಡುವುದು, ಬೊಂಬೆ, ಹೊದಿಕೆ, ಬಾಚಣಿಕೆ ತಯಾರಿಕೆ, ಹಚ್ಚೆ ಹಾಕುವುದು, ಜ್ಯೋತಿಷ್ಯ ಗಿಣಿಶಾಸ್ತ್ರ, ಹಸ್ತ ಮುದ್ರಿಕೆ ಶಾಸ್ತ್ರ, ಬುಡಬುಡಕಿ ಭವಿಷ್ಯ, ಕಣಿ ಹೇಳುವುದು, ಎತ್ತನ್ನು ಹಿಡಿದು ಕೊಂಡು ಊರಿಂದ ಊರಿಗೆ ಹೋಗಿ ಭಿಕ್ಷೆ ಬೇಡುವುದು, ಹಠಯೋಗ, ಧರ್ಮಪ್ರಚಾರ, ಕಾಲಭೈರವನ ಆರಾಧನೆ ಕತ್ತಿ ತಯಾರಿಕೆ, ದೇವರ ಕಥೆಗಳು ಹಾಗೂ ಪುರಾಣದ ಕಥೆಗಳನ್ನು ಹೇಳುವ ಹಾಗೂ ಬೊಂಬೆ ಪ್ರದರ್ಶನ, ಔಷಧಿ ಮಾರಾಟಗಾರರು, ಭಿಕಾರಿ ವೈದ್ಯ ವೃತ್ತಿ, ಮದುವೆ ಮತ್ತು ಹಬ್ಬದ ದಿನಗಳಂದು ಡೋಲುಬಡಿದು ಹಾಡುಹೇಳುವುದು, ಗಾರುಡಿಗರು, ಬೀಸುವ ಕಲ್ಲು ಮತ್ತು ಬೀಸಣಿಕೆ ಮಾರಾಟ, ಮರದ ಸೌಟುಗಳ ತಯಾರಿಕೆ, ಸೂಜಿ, ದಾರ, ಒಳಕಲ್ಲು ಮಾರಾಟ, ಅರಿಶಿಣ, ಕುಂಕುಮ ಮಾರಾಟ, ಮಸಾಲೆ ದಿನಸಿ ಮಾರಾಟ, ಡ್ರಂ–ಬಾರಿಸುವುದು ಮತ್ತು ಕೊಳಲು ನುಡಿಸುವುದು, ದೊಂಬರಾಟ. ವಿದೂಷಕ, ಕಬ್ಬಿಣದ ತಾಮ್ರದ ತಂತಿಗಳನ್ನು ಉಪಯೋಗಿಸಿ ವಿಧವಿಧವಾದ ಬಳೆ ಮತ್ತು ಅಲಂಕಾರಿಕ ವಸ್ತುಗಳನ್ನು ತಯಾರಿಸುವುದು, ತೊಗಲು ಬೊಂಬೆ ಆಡಿಸುವುದು, ಮರಗವನ ಆಡಿಸುವುದು ಊರೂರು ಅಲೆದು ಬಯಲಾಟಗಳ ಪ್ರದರ್ಶನ, ತಾಮ್ರ, ಬೆಳ್ಳಿ, ಕಲ್ಲು, ಹಿತ್ತಾಳೆಗಳಿಂದ ಆಭರಣಗಳನ್ನು ತಯಾರಿಸಿ ಮಾರಾಟ ಮಾಡುವುದು, ಅಲೆಮಾರಿ ಪಶು ಪಾಲಕರು, ಕೋಳಿಮೊಟ್ಟೆ ಮೀನು ಮಾರಾಟ ಇನ್ನಿತರೆ ಅಸಂಘಟಿತ ವಲಯಗಳ ಕಾರ್ಮಿಕರು ಹಾಗೂ ವ್ಯಾಪಾರಿಗಳು ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.

**ನೋಂದಣಿಗೆ ಅರ್ಹತೆಗಳು:** ವಯೋಮಿತಿ 18 ರಿಂದ 40 ವರ್ಷದೊಳಗಿರಬೇಕು. ಇ.ಪಿ.ಎಫ್ ಸದಸ್ಯರಾಗಿರಬಾರದು. ಇ.ಎಸ್.ಐ.ಸಿ ಸದಸ್ಯರಾಗಿರಬಾರದು. ಆದಾಯ ತೆರಿಗೆ ಪಾವತಿಸುವವರಾಗಿರಬಾರದು. ಅಸಂಘಟಿತ ವಲಯದ ಕಾರ್ಮಿಕರು ನೋಂದಣಿಯಾಗಿ ವಯೋಮಿತಿ ಆಧಾರದ ಮೇಲೆ ವಂತಿಕೆ ಪಾವತಿಸಬೇಕಾಗುತ್ತದೆ.

**ನೋಂದಣಿಗೆ ಬೇಕಾಗಿರುವ ದಾಖಲೆಗಳು:** ಆಧಾರ ಕಾರ್ಡ್, ಚಾಲ್ತಿಯುಳ್ಳ ಬ್ಯಾಂಕ್ ಖಾತೆಯ ಪಾಸ್‌ಬುಕ್, ಸಕ್ರೀಯ ಮೊಬೈಲ್ ಸಂಖ್ಯೆ, ಆಧಾರ ಕಾರ್ಡ ಇ–ಕೆ.ವೈ.ಸಿ. ಕಡ್ಡಾಯ, ನಾಮ ನಿರ್ದೇಶಿತರ ಹೆಸರು ಮತ್ತು ಜನ್ಮ ದಿನಾಂಕ ಹಾಗೂ ಇ–ಶ್ರಮ ಯೋಜನೆ ಕಾರ್ಡ.

ಅಸಂಘಟಿತ ವಲಯದ ಕಾರ್ಮಿರು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಹಾಗೂ ಮೊದಲ ತಿಂಗಳ ವಂತಿಕೆಯೊಂದಿಗೆ ಸಮೀಪದ ಸಾಮಾನ್ಯ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ https://maandhan.in/maandhan/login ವೆಬ್‌ಸೈಟ್‌ನಲ್ಲಿ ನೋಂದಣಿಯಾಗಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಕಾರ್ಮಿಕ ಅಧಿಕಾರಿಗಳ ಕಛೇರಿಯನ್ನು ಅಥವಾ ಆಯಾ ತಾಲ್ಲೂಕಿನ ಸಂಬಂಧಪಟ್ಟ ಕಾರ್ಮಿಕ ನಿರೀಕ್ಷಕರುಗಳ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಫೆಬ್ರವರಿ 5 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ,ಕಲಬುರಗಿ:

11ಕೆ.ವಿ. ದುಬೈ ಕಾಲೋನಿಯ ಫೀಡರಗಳ ವ್ಯಾಪ್ತಿಯಲ್ಲಿ ನಿರ್ವಹಣಾ ಕೆಲಸ ಕಾರ್ಯ ಕೈಗೊಳ್ಳುವ ಪ್ರಯುಕ್ತ ಇದೇ ಫೆಬ್ರವರಿ 5 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

11 ಕೆ.ವಿ ದುಬೈ ಕಾಲೋನಿ ಫೀಡರ : ಎಮ್.ಜಿ.ಟಿ.ಟಿ, ಆಶ್ರಯ ಕಾಲೋನಿ, ದುಬೈ ಕಾಲೋನಿ, ಶೇಖ ರೋಜಾ ಜಿಡಿಎ, ಕಸ್ತೂರಿ ನಗರ, ಸ್ವಾರ್ಗಿಟ್ ನಗರ, ಸುವರ್ಣ ನಗರ ಜಿ.ಡಿ.ಎ, ವೈಷ್ಣವಿ ದೇವಿ ಮಂದಿರ ಸುತ್ತಮುತ್ತಲಿನ ಪ್ರದೇಶ, ಚಿಂಚೋಳ್ಳಿ ಕ್ರಾಸ್, ಭೀರಲಿಂಗೇಶ್ವರ ಮಂದಿರ ಏರಿಯಾ, ಶಿವಲಿಂಗೇಶ್ವರ ಮಂದಿರ ಸುತ್ತಲಿನ ಪ್ರದೇಶ, ಆಯುರ್ವೇದಿಕ ಆಸ್ಪತ್ರೆ, ಸರಕಾರಿ ಆಸ್ಪತ್ರೆ ಮತ್ತು ಸುತ್ತಮುತ್ತಲಿನ ಪ್ರದೇಶಗಳು.

# ಫೆಬ್ರವರಿ 6 ಕ್ಕೆ ಜೇವರ್ಗಿ ತಾಲೂಕು ಮಟ್ಟದ ಕೆ.ಡಿ.ಪಿ. ಸಭೆ

ಮಲ್ಲಮ್ಮ ನುಡಿ ವಾರ್ತೆ ,ಕಲಬುರಗಿ:

ಜೇವರ್ಗಿ ತಾಲೂಕೂ ಮಟ್ಟದ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆ ಇದೇ ಫೆಬ್ರವರಿ 6 ರಂದು ಬೆಳಿಗ್ಗೆ 11 ಗಂಟೆಗೆ ಜೇವರ್ಗಿಯ ಪಟ್ಟಣದ ಮಿನಿವಿಧಾನ ಸೌಧದಲ್ಲಿರುವ ತಾಲೂಕು ಪಂಚಾಯತ್ ಸಭಾ ಭವನದಲ್ಲಿ ನಡೆಯಲಿದೆ.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷರು ಹಾಗೂ ಜೇವರ್ಗಿ ಶಾಸಕರಾದ ಡಾ. ಅಜಯ್ ಧರ್ಮಸಿಂಗ್ ಅವರು ಸಭೆಯ ಅಧ್ಯಕ್ಷತೆ ವಹಿಸಲಿದ್ದು, ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ತಮ್ಮ ಇಲಾಖೆಯ ತ್ರೈಮಾಸಿಕ ವರದಿ ಹಾಗೂ ಹಿಂದಿನ ಸಭೆಯ ಅನುಪಾಲನಾ ವರದಿಯೊಂದಿಗೆ ಸಭೆಗೆ ಹಾಜರಾಗುವಂತೆ ಜೇವರ್ಗಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಮಲನಗರ:ತಾಲೂಕಿನ ಖ್ಯಾತ ಉದ್ಯಮಿ, ಭಾರತ ಪೆಟ್ರೋಲಿಯಂ ಕಮಲನಗರ'ನ ಮಾಲೀಕರಾದ ಶ್ರೀ ವಿಷ್ಣುದಾಸ ಸಿಂಧೆ ಸರ್ ಅವರಿಗೆ ಅವರ ಕಚೇರಿಯಲ್ಲಿ ಮಲ್ಲಮ್ಮ ನುಡಿ ದಿನ ಪತ್ರಿಕೆ ಹೊರ ತಂದ ವಿಶಿಷ್ಟ ಕ್ಯಾಲೆಂಡರ ನೀಡಿ ಹೊಸ ವರ್ಷ 2026ಯಶಸ್ಸು ನೀಡಲೆಂದು ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಕಮಲನಗರ ತಾಲೂಕ ವರದಿಗಾರ ಪರಮೇಶ ರಾಂಪುರೆ ಅವರು ಇದ್ದರು

# ಬೀದರ ಜಿಲ್ಲೆಯಲ್ಲಿ ಕೃಷಿ ಮಹಾವಿದ್ಯಾಲಯ ಸ್ಥಾಪನೆಗೆ ಸಿದ್ರಾಮಯ್ಯಾ ಎಸ್.ಸ್ವಾಮಿ ಮನವಿ

ಮಲ್ಲಮ್ಮ ನುಡಿ ವಾರ್ತೆ



ಬೀದರ,ಫೆ,4:–ಬೀದರ ಜಿಲ್ಲೆಯಲ್ಲಿ ಕೃಷಿ ಮಹಾವಿದ್ಯಾಲಯ ಸ್ಥಾಪಿಸಲು ಕ್ರಮ ವಹಿಸುವಂತೆ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ಸಿದ್ರಾಮಯ್ಯಾ ಎಸ್.ಸ್ವಾಮಿ ಅವರು ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರಿಗೆ ಪತ್ರದ ಮೂಲಕ ಮನವಿ ಮಾಡಿದ್ದಾರೆ.

ಪತ್ರದಲ್ಲಿ ಕರ್ನಾಟಕದ ಮುಕುಟ ಜಿಲ್ಲೆಯಾದ ಬೀದರ, ಕಲ್ಯಾಣ ಕರ್ನಾಟಕ ಪ್ರದೇಶದ ಪ್ರಮುಖ ಜಿಲ್ಲೆಗಳಲ್ಲೊಂದಾಗಿದೆ. ಬೀದರ ಜಿಲ್ಲೆಯ ಹವಾಗುಣವು ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಉತ್ತಮವಾಗಿದ್ದು, ನೆರೆಯ ಜಿಲ್ಲೆಗಳ ಹಾಗೂ ರಾಜ್ಯದ ವಿದ್ಯಾರ್ಥಿಗಳಿಗೂ ತುಂಬಾ ಅನುಕೂಲಕರವಾಗಲಿದೆ. ಈಗಾಗಲೇ ಈ ಭಾಗದ ರೈತರಿಗೆ ಅನುಕೂಲವಾಗಲು ಈಗಾಗಲೇ ಕೃಷಿ ಸಂಶೋಧನಾ ಕೇಂದ್ರ ಹಾಗೂ ಕೃಷಿ ವಿಜ್ಞಾನ ಕೇಂದ್ರಗಳು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಕೃಷಿ ಕುರಿತು ಸಂಶೋಧನಾ ಹಾಗೂ ವಿಸ್ತರಣೆಯ ಕಾರ್ಯಗಳನ್ನು ತೃಪ್ತಿಕರವಾಗಿ ಕೈಗೊಳ್ಳಲಾಗುತ್ತಿದೆ.

ಬೀದರ ಜಿಲ್ಲೆಯಲ್ಲಿ ಯುವಕರಿಗೆ ಉದ್ಯೋಗ ದೊರಕಿಸಿ ಕೊಡುವಂತಹ ಕೈಗಾರಿಕೆಗಳು ತುಂಬಾ ಕಡಿಮೆ ಇವೆ. ಇವರೆಲ್ಲರೂ ಕೃಷಿಯನ್ನು ತಮ್ಮ ಜೀವನದ ಆಧಾರವಾಗಿ ಅವಲಂಬಿಸಿರುತ್ತಾರೆ. ಕೃಷಿಯ ಅನೇಕ ರಂಗಗಳಲ್ಲಿ ಹೆಚ್ಚಿನ ಸಾಮರ್ಥ್ಯ ಹೊಂದಿದ್ದು, ರೈತರ ಏಳಿಗಗಳಿಗಾಗಿ ಮತ್ತು ಅವರ ಜ್ಞಾನ ಭಂಡಾರ ಹಾಗೂ ಆರ್ಥಿಕ ಮಟ್ಟ ಸುಧಾರಿಸಲು ಬೀದರನಲ್ಲಿ ಒಂದು ಕೃಷಿ ಮಹಾವಿದ್ಯಾಲಯದ ಅವಶ್ಯಕತೆ ತುಂಬಾ ಇರುತ್ತದೆ. ಒಣಬೇಸಾಯದಲ್ಲಿ ವಿವಿಧ ಬೆಳೆಗಳಲ್ಲಿ ಆಗುವ ಬದಲಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಕೃಷಿ ಮಹಾವಿದ್ಯಾಲಯದ ಮುಖಾಂತರ ಅನೇಕ ತಾಂತ್ರಿಕತೆಯನ್ನು ರೈತರಿಗೆ ತಲುಪಿಸುವ ನಿಟ್ಟಿನಿಂದ ಬೀದರನಲ್ಲಿ ಕೃಷಿ ಮಹಾವಿದ್ಯಾಲಯದ ಸ್ಥಪನೆ ಅತ್ಯವಶ್ಯಕವಾಗಿದೆ.

ರೈತ ಹಿತೈಷಿಗಳಾದ ತಾವುಗಳು ಜಿಲ್ಲೆಯ ಕೃಷಿಕರ ಅಭಿವೃದ್ಧಿ ಮತ್ತು ಕೃಷಿಕರ ಮಕ್ಕಳು ಕೃಷಿಯಲ್ಲಿ ಪದವಿ ಹೊಂದಲು ಅನುಕೂಲವಾಗುವ ದೃಷ್ಟಿಯಿಂದ ಬೀದರನಲ್ಲಿ ಕೃಷಿ ಮಹಾವಿದ್ಯಾಲಯ ಬರುವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಕ್ರಮವಹಿಸಬೇಕೆಂದು ಅವರು ಪತ್ರದಲ್ಲಿ ಕೋರಿದ್ದಾರೆ.

# ವಿರಾಟ ಹಿಂದೂ ಸಮ್ಮೇಳನ ನಿಮಿತ್ಯ ಭವ್ಯ ಶೋಭಾ ಯಾತ್ರೆ!



ಭಾಲ್ಕಿ. ಪಟ್ಟಣದ ಅಧಿದೇವತೆ ಭಾಲ್ಕೇಶ್ವರ ಮಂದಿರದಿಂದ ಬುಧವಾರ ವಿಶ್ವ ಹಿಂದೂ ಪರಿಷತ್ ಸೇರಿದಂತೆ ವಿವಿಧ ಹಿಂದೂ ಪರ ಸಂಘಟನೆಗಳು ಆಯೋಜಿಸಿದ ವಿರಾಟ್ ಹಿಂದೂ ಸಮ್ಮೇಳನದ ಭವ್ಯ ಶೋಭಾಯಾತ್ರೆ ವಿಜೃಂಭಣೆಯಿಂದ ಸಾಗಿಬಂತು. ಬುಧವಾರ ಮಧ್ಯಾಹ್ನ 2 ಗಂಟೆಗೆ ಭಾಲ್ಕೇಶ್ವರ ಮಂದಿರ ಆವರಣದಿಂದ ಬೃಹತ್ ಶೋಭಾ ಯಾತ್ರೆ ಹೊರಟು, ಬೊಮಗೊಂಡೇಶ್ವರ ವೃತ್ತ, ಬಸ್ ನಿಲ್ದಾಣ, ಜ್ಯೋತಿಬಾ ಫುಲೆ ವೃತ್ತ, ಸರಾಫ್ ಬಜಾರ್, ಮಹಾತ್ಮ ಗಾಂಧಿ ವೃತ್ತ ಮತ್ತು ಅಂಬೇಡ್ಕರ್ ವೃತ್ತದ ಮೂಲಕ ಚನ್ನಬಸವಾಶ್ರಮ ಪರಿಸರದಲ್ಲಿ ಶೋಭಾಯಾತ್ರೆ ಸಮಾವೇಶಗೊಂಡಿತು. ಮೆರವಣಿಗೆಯಲ್ಲಿ ನಾಡೋಜ ಡಾ.ಬಸವಲಿಂಗಪಟ್ಟದ್ದೇವರು, ರಾಜೇಶ್ವರ ಶಿವಾಚಾರ್ಯ, ಶಂಕರರಾನಂದ ಸ್ವಾಮೀಜಿ, ಗೋವಿಂದ ಮಹಾರಾಜ, ಹಾವಗಿಲಿಂಗೇಶ್ವರ ಶಿವಾಚಾರ್ಯ, ಆರ್ ಎಸ್ ಎಸ್ ಸಹ ಕಾರ್ಯವಾಹಕ ಮುಕುಂದ ಜೀ, ಸೇರಿದಂತೆ ವಿವಿಧ ಸಮುದಾಯದ ನೃತ್ಯ, ಶಾಲಾ ಕಾಲೇಜು ವಿದ್ಯಾರ್ಥಿಗಳ ಕೋಲಾಟ, ನೃತ್ಯ, ಮಹಾತ್ಮರ ಛದ್ಮವೇಷ ಸೇರಿ ಮುಂತಾದ ಪ್ರದರ್ಶನ ಗಮನ ಸೆಳೆದವು. ಮೆರವಣಿಗೆಯಲ್ಲಿ ವಿರಾಟ ಹಿಂದೂ ಸಮ್ಮೇಳನ ಸಮಿತಿ ಅಧ್ಯಕ್ಷ ರಾಚಪ್ಪ ಪಾಟೀಲ್, ಪ್ರಮುಖರಾದ ಸೋಮನಾಥಪ್ಪ ಅಷ್ಟೂರೆ, ಹಿರಿಯ ಮುಖಂಡ ಪ್ರಭುರಾವ ಧೂಪೆ, ಯುವ ಮುಖಂಡರಾದ ಶಿವು ಲೋಖಂಡೆ, ಪ್ರಸನ್ನ ಪ್ರಕಾಶ್ ಖಂಡ್ರೆ, ಜಯಕಿಶನ ಬಿಯಾನಿ, ವಿಲಾಸ ಬಕ್ಕಾ, ಅಶೋಕ ವಾಲೆ, ಮಹಾಂತೇಶ, ಸತೀಶ್ ಮುದಾಳೆ, ಈಶ್ವರ್ ರುಮ್ಮ, ಚಂದ್ರಕಾಂತ್ ತಳವಾಡೆ ಇದ್ದರು. ಮೆರವಣಿಗೆ ಮಧ್ಯದಲ್ಲಿ ರಾಜಕುಮಾರ ಭೋಸಲೆ ಸೇರಿದಂತೆ ವಿವಿಧ ಅಭಿಮಾನಿಗಳು ತಮ್ಮ ಅಂಗಡಿಗಳ ಮುಂದೆ ತಂಪು ಪಾನೀಯ ಮತ್ತು ಮಜ್ಜಿಗೆ ನೀಡಿ ಶೋಭಾ ಯಾತ್ರೆಯಲ್ಲಿ ಭಾಗವಸಿದ ಸಾರ್ವಜನಿಕರ ದಣಿವು ಆರಿಸಿದರು.

# ಒಂದು ದಿನದ ಸಾಂಕೇತಿಕ ಶಾಂತಿಯುತ ಧರಣಿ ಸತ್ಯಗ್ರಹ ಫೆ.6 ರಂದು

• ಮಲ್ಲಮ್ಮ ನುಡಿ ವಾರ್ತೆ ಬೀದರ:

:ಕೆ.ಕೆ.ಆರ್.ಟಿ.ಸಿ ಬೀದರ್ ವಿಭಾಗೀಯ ಕಛೇರಿ ಎದುರುಗಡೆ ಫೆ. 06 ರಂದು ಶುಕ್ರವಾರ ಬೆಳ್ಳಿಗೆ 10:00 ಗಂಟೆ ಯಿಂದ ಸಾಯಂಕಾಲ 04:00 ಗಂಟೆ ವರೆಗೆ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಒಂದು ದಿನದ ಸಾಂಕೇತಿಕ ಶಾಂತಿಯುತ ಧರಣಿ ಸತ್ಯಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರ ಸಂಘ ವಲಯ ಸಮಿತಿ ಅಧ್ಯಕ್ಷರು ಸೂರ್ಯಕಾಂತ್ ಟೈಗರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಬೀದರ್ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಗೈರು ಹಾಜರಿರುವ ನೌಕರರ ಹೆಸರಿನಲ್ಲಿ ಲಕ್ಷಾಂತರ ರೂಪಾಯಿ ಅವ್ಯವಹಾರ ಮಾಡಿ ಸಂಸ್ಥೆಗೆ ಹಣ ಲೂಟಿ ಹೊಡೆದಿರುತ್ತಾರೆ,ನೌಕರರ ಶಿಸ್ತು ಕ್ರಮಗಳನ್ನು ಜರುಗಿಸುವಲ್ಲಿ ತಾರತಮ್ಯ ಮಾಡಿ ಡಿಪೋಗಳಲ್ಲಿ ಸೇವೆ ಸಲ್ಲಿಸುವ ನೌಕರರ ಸೇವಾ ಮುಂಬಡ್ತಿಗಳನ್ನು ವ್ಯವಸ್ಥಿತವಾಗಿ ವಂಚಿಸಿರುತ್ತಾರೆ.ವಾಣಿಜ್ಯ ಮಳಿಗೆಗಳ ಇ– ಟೆಂಡರ್ ನಿಬಂಧನೆಗಳನ್ನು ಉಲ್ಲಂಘನೆ ಮಾಡಿ ಬೇಕ್ ಬಿಟ್ಟಿ ಬಿಡ್ ದಾರರಿಗೆ ಆಯ್ಕೆ ಮಾಡಿದ ಕಾರಣ ಮಳಿಗೆಗಳು ಸಕಾಲದಲ್ಲಿ ಒಪ್ಪಂದ ಆಗದೆ ಹಾಗೂ ಸಂಸ್ಥೆಗೆ ಬರಬಹುದಾದ ಆದಾಯ ಕೈತಪ್ಪಿರುತ್ತದೆ. ಸಂಸ್ಥೆಯ ಸುತ್ತೋಲೆ/ಸ್ಥಾಯಿ ಸಮಿತಿ ಆದೇಶ ಉಖಔ ಓಂ 175/2021, 180/2024 ರನ್ವಯ ನೌಕರರಿಗೆ ವರ್ಗವಣೆ ಸೌಲಭ್ಯಗಳಲ್ಲಿ ನೀಡುವಲ್ಲಿ ವಿಫಲರಾಗಿರುತ್ತಾರೆ.



ನೌಕರರ ಗೈರು ಹಾಜರಿ ಸಂಬಂಧಪಟ್ಟಂತ ಪ್ರಕರಣಗಳಲ್ಲಿ ನಿಯಮಾನಸಾರ ವಿಲೇವಾರಿ ಮಾಡದೇ 4, 5 ವರ್ಷ ವರೆಗೂ ಬಾಕಿ ಇಟ್ಟು ನೌಕರರಿಗೆ ಪ್ರಸ್ತುತ ವೇತನಗಳ ಮೇಲೆ ಶಿಕ್ಷೆ ನೀಡಿ ಆರ್ಥಿಕವಾಗಿ ಹಾಗೂ ಮಾನಸಿಕ ಶೋಷಣೆ ಮಾಡಿರುತ್ತಾರೆ. ಸರ್ಕಾರಿ ವಾಹನಗಳು ಕರ್ತವ್ಯದ ನೆಪದಲ್ಲಿ ದುರ್ಬಳಕೆ ಮಾಡಿಕೊಂಡು ಕೆಳ ವರ್ಗದ ನೌಕರರ ಮೇಲೆ ಶಿಸ್ತು ಕ್ರಮಗಳಂತ ಶಿಕ್ಷೆಗಳು ನಿರಂತರವಾಗಿ ನೀಡುತ್ತಿರುತ್ತಾರೆ.ಈ ರೀತಿಯ ನಿಗಮಕ್ಕೆ ಆರ್ಥಿಕವಾಗಿ ಲೂಟಿ ಮಾಡಿರುವರ ಅಧಿಕಾರಿ/ಮೇಲ್ವಿಚಾರಕ/ಸಿಬ್ಬಂದಿಗಳನ್ನು ಮೇಲೆ ಪೊಲೀಸ್ ಪ್ರಕರಣ ದಾಖಲಿಸಿ, ಕೂಡಲೇ ಸೇವೆಯಿಂದ ಅಮಾನತ್ತುಗೊಳಿಸಿ ಬೇರೆ ವಿಭಾಗಕ್ಕೆ ವರ್ಗವಣೆ ಮಾಡುವಂತೆ ಏಖಖಖಿಅ ನೌಕರರ ಸಂಘ (ರಿ) ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಮತ್ತು ಇತರೆ ಸಂಘಟನೆಗಳ ಬೆಂಬಲದೊಂದಿಗೆ ಧರಣಿ ಸತ್ಯಾಗ್ರಹ ಹೋರಾಟದಲ್ಲಿ ಎಲ್ಲಾ ನೌಕರರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಯಶಸ್ವಿಗೊಳಿಸಬೇಕೆಂದು ಸಂಘಟನೆ ಪರವಾಗಿ ತಿಳಿಸಿದ್ದಾರೆ.

# ಮಾಜಿ ಪಾಲಿಕೆ ಸದಸ್ಯ ಹೆಚ್ ಎನ್ ಗಂಗಾಧರ್ : ಡಾ. ಸಂಗನ ಬಸಪ್ಪ ಬಿರಾದಾರ್ ಅವರ ಮನೆಗೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಪೀಣ್ಯ ದಾಸರಹಳ್ಳಿ:

ಕ್ಷೇತ್ರದ ರಾಜಗೋಪಾಲ ನಗರ ವಾರ್ಡಿನ ಕೆಂಪೇಗೌಡ ಲೇಔಟ್ ನಲ್ಲಿ ಇರುವ ರಾಷ್ಟ್ರೀಯ ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ. ಸಂಗನ ಬಸಪ್ಪ ಬಿರಾದಾರ್ ಅವರ ಮನೆಗೆ ದಿಢೀರನೇ ಬಿಬಿಎಂಪಿ ಮಾಜಿ ಸದಸ್ಯ ಹಾಗೂ ತೋಟಗಾರಿಕೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಹೆಚ್ ಎನ್ ಗಂಗಾಧರ್ ಅವರು ಭೇಟಿ ನೀಡಿದರು. ಡಾ. ಬಿರಾದಾರ್ ಅವರು ಅವರಿಗೆ ಲಭಿಸಿರುವ ಪ್ರಶಸ್ತಿಗಳ ಬಗ್ಗೆ ಸಂಪೂರ್ಣ ಮಾಹಿತಿ ಬಿರಾದಾರ್ ಗಂಗಾಧರ್ ಅವರಿಗೆ ತಿಳಿಸಿದರು ಹಾಗೂ ಶ್ರೇಷ್ಠ ನಿವೃತ್ತ ಲೋಕಾಯುಕ್ತ ಹಾಗೂ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಅವರ ಜೊತೆಗೆ ಹಲವಾರು ಬಾರಿ ವೇದಿಕೆ ಹಂಚಿಕೊಂಡಿದ್ದು ಬಹಳ ಖುಷಿ ತಂದಿದೆ ಎಂದು ಹೆಚ್ ಎನ್ ಗಂಗಾಧರ್ ಅವರಿಗೆ ಮನವರಿಕೆ ಮಾಡಿಕೊಟ್ಟರು.ನಂತರ ಉತ್ತರ ಕರ್ನಾಟಕದಲ್ಲಿ ತಿಂಡಿಗಳಲ್ಲಿ ಒಂದಾದ ಕಡಲೆ ಪುರಿ ವಗ್ಗರಣೆ ಕೊಡಬೆಳೆ ಸೇವಿಸಿದ್ದರು. ಡಾ. ಸಂಗನ ಬಸಪ್ಪ ಬಿರಾದಾರ್ ಅವರಿಗೆ ಮುಂಬರುವ ಮಾರ್ಚ್ ತಿಂಗಳಲ್ಲಿ ಗೋವಾದಲ್ಲಿ ನಡೆಯುವ ಕನ್ನಡ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಬಿರಾದಾರ್ ಅವರಿಗೆ ಶುಭಾಶಯ ತಿಳಿಸಿದರುಇದೆ ವೇಳೆ ಮಾಜಿ ಪಾಲಿಕೆ ಸದಸ್ಯ ಹೆಚ್ ಎನ್ ಗಂಗಾಧರ್ ಅವರಿಗೆ ಬಿರಾದಾರ್ ರವರು ಬಿಜೆಪಿ ಮಾಜಿ ಅಧ್ಯಕ್ಷ ಹರೀಶ್ ಜಿಕೆ ಡಬ್ಲ್ಯೂ ಲೇಔಟ್, ಎಸ್ ವಿ ಎಸ್ ಶಿಕ್ಷಣ ಸಂಸ್ಥೆಯ ಫೌಂಡರ್ ಕಾರ್ಯದರ್ಶಿ ಅರ್ಕೇಶ್ ಮತ್ತು ಕೈಗಾರಿಕಾ ಉದ್ಯಮಿ ಹಾಗೂ ಬಿಜೆಪಿ ಯುವ ಮುಖಂಡ ಲಿಖಿನ್ ಸೇರಿದಂತೆ ಮುಂತಾದವರು ಸನ್ಮಾನಿಸಿದರು


# ನ್ಯಾಯವಾದಿ ಮೇಲೆ ಮರಣಾಂತಿಕ ಹಲ್ಲೆ ಪ್ರಕರಣ ದಾಖಲು

ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್ :

ನ್ಯಾಯವಾದಿರೊಬ್ಬರ ಮೇಲೆ ಚಾಕುವಿನಿಂದ ಕುತ್ತಿಗೆಗೆ ಇರಿದು ಮಾರಣಾಂತಿಕ ಹಲ್ಲೆ ಮಾಡಿರುವ ಘಟನೆ ಮಂಗಳವಾರ ತಾಲೂಕಿನ ಹಳ್ಳಿಖೇಡ (ಬಿ)ದಲ್ಲಿ ನಡೆದಿದೆ. ಪಟ್ಟಣದಲ್ಲಿ ನ್ಯಾಯವಾದಿ ವೃತ್ತಿಯಲ್ಲಿರುವ



ಅನೀಲಕುಮಾರ್ ಅಲಿಯಾಸ ಅಂಕುಶ ಎಂಬುವರೇ ಹಲ್ಲೆಗೊಳಗಾಗಿ ತೀವ್ರ ಗಾಯಗೊಂಡಿದ್ದಾರೆ. ಹಂದಿ ಕಳವು ಘಟನೆ ಸಂಬಂಧ ಹಳ್ಳಿಖೇಡ (ಬಿ) ಪೊಲೀಸ್ ಠಾಣೆಗೆ ದೂರು ನೀಡಲು ತೆರಳಿದ್ದಾಗ, ಹುಡಗಿ ಗ್ರಾಮದ ನಿವಾಸಿ ಅಜಯ ಹಾಗೂ ಇತರರು ಸೇರಿ ಅವರನ್ನು ಕೊಲೆ ಮಾಡಲು ಸಂಚು ರೂಪಿಸಿ ಮಾರಣಾಂತಿಕ ಹಲ್ಲೆಗೈದಿದ್ದಾರೆ ಎಂದು ಹಲ್ಲೆಗೊಳಗಾದ ವ್ಯಕ್ತಿಯ ಸಹೋದರ ವಿಜಯಕುಮಾರ ದೂರು ನೀಡಿದ್ದಾರೆ. ಹಳ್ಳಿಖೇಡ (ಬಿ) ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗಾಯಗೊಂಡ ವ್ಯಕ್ತಿಗೆ ಸ್ಥಳೀಯ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಬೀದರ್ ಬ್ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಖಂಡನೆ: ನ್ಯಾಯವಾದಿ ಅನೀಲಕುಮಾರ ಮೇಲೆ ಮರಣಾಂತಿಕ ಹಲ್ಲೆ ನಡೆದಿರುವುದಕ್ಕೆ ತಾಲೂಕು ವಕೀಲರ ಸಂಘ ಖಂಡಿಸಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಘದ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ ನಾತೆ ಅವರು ಒತ್ತಾಯಿಸಿದ್ದಾರೆ,



ಮಲ್ಲಮ ನುಡಿ ಪ್ರಾದೇಶಿಕ ಪತ್ರಿಕೆಯ ಕ್ಯಾಲೆಂಡರ ಬಿಡುಗಡೆಗೊಳಿಸಿದ ಸಂಗೊಳ್ಳಿ ರಾಯಣ್ಣ ಯುವ ಘರ್ಜನೆ ತಂಡ ಈ ಸಂದರ್ಭದಲ್ಲಿ ಕ್ರಾಂತಿ ವೀರ್ ಸಂಗೊಳ್ಳಿ ರಾಯಣ್ಣ ಯುವ ಘರ್ಜನೆ ಜಿಲ್ಲಾ ಅಧ್ಯಕ್ಷರಾದ ಲೋಕೇಶ್ ಮಾರ್ಜಾಪುರ್(ಎಂ), ಉಪಾಧ್ಯಕ್ಷರಾದ ಶಿವು ಚಿಮಕೊಡೆ,ಕಾರ್ಯದರ್ಶಿಗಳಾದ ಕುಮಾರ್ ನಿಜಾಂಪುರ್,ಖಜಾಂಚಿಗಳಾದ ರಾಜ್ ಟಗರು ಆಣದೂರ , ಪ್ರಧಾನ ಕಾರ್ಯದರ್ಶಿ ಶರಣು ಚಿಮಕೊಡ ಹಾಗೂ ಇನ್ನಿತರ ಪ್ರಮುಖರಿದ್ದರು,

ಬಸವಕಲ್ಯಾಣ:– ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ಆವರಣದಲ್ಲಿ ಬಸವ ಕಲ್ಯಾಣದ ರಥ ಮೈದಾನದಲ್ಲಿ ಹಾರಕೂಡ ಶ್ರೀಮಠದ ವತಿಯಿಂದ ಜರುಗಲಿರುವ ನಾಲ್ಕನೇ ಕಾಯಕ ಉತ್ಸವ ಪ್ರಚಾರ ರಥಕ್ಕೆ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ವೀರಣ್ಣ ಶೀಲವಂತ, ಸೂರ್ಯಕಾಂತ ಮಠ, ರಮೇಶ ರಾಜೋಳೆ, ಚನ್ನಬಸಪ್ಪ ಕನಕಪುರ, ರಾಜಕುಮಾರ ಜಾಯೆ, ನಾಗಣ್ಣ ಪಾಟೀಲ, ರಮೇಶ ನಾಗರಾಳೆ ಮುಂತಾದವರು ಉಪಸ್ಥಿತರಿದ್ದರು.ದಿ. ೭ ಮತ್ತು ೮ ರಂದು ಇಲ್ಲಿನ ರಥ ಮೈದಾನದಲ್ಲಿ ನಾಲ್ಕನೇ ಕಾಯಕ ಉತ್ಸವ ಜರುಗಲಿದೆ ಎಂದು ತಿಳಿಸಿದ್ದಾರೆ.

(ಮಲ್ಲಮ್ಮ ನುಡಿ ಚಿತ್ರ).



## ಜಯಕರ್ನಾಟಕ ರಕ್ಷಣಾ ಸೇನೆಯ ರೈತ ಘಟಕ ಜಿಲ್ಲಾಧ್ಯಕ್ಷರನ್ನಾಗಿ ಮಲ್ಲಿಕಾರ್ಜುನ ಮಾಲಿ ಪಾಟೀಲ್



- **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ಜಯಕರ್ನಾಟಕರಕ್ಷಣಾ ಸೇನೆಯರಾಜ್ಯಧ್ಯಕ್ಷರಾದ ಕೆ.ಸಿ ರಾಜಪ್ಪಣ್ಣನವರ ಆದೇಶದ ಮೇರೆಗೆ, ಜಿಲ್ಲಾಧ್ಯಕ್ಷರಾದ ಮಲ್ಲಿಕಾರ್ಜುನ ಎಂ ಜಲ್ಲಪ್ಪನ್ನೋರ ಇವರ ನೇತೃತ್ವದಲ್ಲಿ ರೈತ ಘಟಕ ಜಿಲ್ಲಾಧ್ಯಕ್ಷರನ್ನಾಗಿ ಮಲ್ಲಿಕಾರ್ಜುನ ಮಾಲಿ ಪಾಟೀಲ್ ಹುಣಸಗಿ ಇವರನ್ನು ನೇಮಕ ಮಾಡಿ ಆದೇಶ ಪತ್ರ ನೀಡಲಾಯಿತು.

ಜಿಲ್ಲಾಧ್ಯಕ್ಷರಾದ ಮಲ್ಲಿಕಾರ್ಜುನ ಜಲ್ಲಪ್ಪನೋರ ಮಾತನಾಡಿ ಜಿಲ್ಲೆಯಲ್ಲಿ ರೈತರ ನೂರಾರು ಸಮಸ್ಯೆಗಳು ಇದ್ದು ಸಂಘಟನೆಯ ಮುಖಾಂತರ ಹೋರಾಟ ಮಾಡಿ ರೈತರಿಗೆ ನ್ಯಾಯ ಒದಗಿಸಲು ಸಲಹೆ ನೀಡಿದರು. ಯಾದಗಿರಿ ಜಿಲ್ಲಾ ಕಾರ್ಯಧ್ಯಕ್ಷರಾದ ಶರಣಪ್ಪ ಬೈರಿಮಡ್ಡಿ, ಹುಣಸಿಗಿ ತಾಲೂಕ ಅಧ್ಯಕ್ಷರಾದ ಬಸವರಾಜ್ ಚಿಗರಾಳ, ವೆಂಕಟೇಶ ಆರ್ ಕೋಳೂರ, ಆಂಜನೇಯ ಬಿಲ್ಲರ್, ಶಿವು ಹುಣಸಗಿ ಕಾರ್ಯಕರ್ತರು ಭಾಗವಹಿಸಿದ್ದರು.

## ಬೀದರ ಜಿಲ್ಲಾ ಯೋಜನಾ ಸಮಿತಿ ರಚನೆಗೆ ಚುನಾವಣೆ ವೇಳಾಪಟ್ಟಿ ಪ್ರಕಟ

- **ಮಲ್ಲಮ್ಮ ನುಡಿ ವಾರ್ತೆ ,ಬೀದರ,**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1995 (ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ) ನಿಯಮಗಳು 1996 ರ ನಿಯಮ–8 ರ ಪ್ರಕಾರ ಮಹಾನಗರ ಪಾಲಿಕೆ ಮತ ಕ್ಷೇತ್ರದಿಂದ ಬೀದರ ಜಿಲ್ಲೆಯ ಜಿಲ್ಲಾ ಯೋಜನಾ ಸಮಿತಿಗೆ 04 ಸದಸ್ಯರ ಸ್ಥಾನಗಳಿಗೆ ಚುನಾವಣೆಯನ್ನು ನಡೆಸಬೇಕಾಗಿರುತ್ತದೆ.

ಆದ್ದರಿಂದ ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳ ಚುನಾವಣೆ) ನಿಯಮಗಳು 1996 ನಿಯಮ–8 ರನ್ವಯ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಪದನಿಮಿತ್ತ ಚುನಾವಣಾ ಅಧಿಕಾರಿ, ಜಿಲ್ಲಾ, ಯೋಜನಾ ಸಮಿತಿ ಚುನಾವಣೆಗಳು, ಡಾ. ಗಿರೀಶ್ ದಿಲೀಪ್ ಬದೋಲೆ, ಭಾ.ಆ.ಸೇ ಆದ ನಾನು ನನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಜಿಲ್ಲಾ ಯೋಜನಾ ಸಮಿತಿ ಚುನಾವಣೆ ನಡೆಸಲು ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿರುತ್ತದೆ.

ಚುನಾವಣಾ ವೇಳಾಪಟ್ಟಿ ವಿವರ: ಫೆಬ್ರವರಿ.3 ರಿಂದ 16 ರವರೆಗೆ ಬೆಳಿಗ್ಗೆ 10 ರಿಂದ ಅಪರಾಹ್ನ 3 ರವರೆಗೆ ಚುನಾವಣಾಧಿಕಾರಿಗಳು, ಜಿಲ್ಲಾ ಯೋಜನಾ ಸಮಿತಿ ಚುನಾವಣೆ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರ ಕಛೇರಿ (ಯೋಜನಾ ಶಾಖೆ) ಜಿಲ್ಲಾ ಪಂಚಾಯತ ಬೀದರ ಇಲ್ಲಿ ನಾಮ ನಿರ್ದೇಶನಗಳನ್ನು ಸಲ್ಲಿಸಬೇಕು. ಫೆಬ್ರವರಿ.17 ರಂದು ಬೆಳಿಗ್ಗೆ 11 ಗಂಟೆಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರ ಕಛೇರಿ, ಜಿಲ್ಲಾ ಪಂಚಾಯತ (ಯೋಜನಾ ಶಾಖೆ) ಬೀದರ ಇಲ್ಲಿಗೆ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ನಾಮಪತ್ರಗಳನ್ನು ಹಿಂದಕ್ಕೆ ಪಡೆಯಲು ಫೆಬ್ರವರಿ.20 ರಂದು ಬೆಳಿಗ್ಗೆ 10 ರಿಂದ ಅಪರಾಹ್ನ 3 ರವರೆಗೆ ಅವಕಾಶವಿರುತ್ತದೆ. ಫೆಬ್ರವರಿ.24 ರಂದು ಬೆಳಿಗ್ಗೆ 10 ರಿಂದ ಅಪರಾಹ್ನ 4 ರವರೆಗೆ ಜಿಲ್ಲಾ ಪಂಚಾಯತ ಸಭಾಂಗಣ ಬೀದರ ಇಲ್ಲಿ ಮತದಾನ ನಡೆಯಲಿದೆ. ಮತಗಳ ಏಣಿಕೆ ಫೆಬ್ರವರಿ.24 ರಂದು ಸಂಜೆ 5 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣ ಬೀದರಲ್ಲಿ ನಡೆಯಲಿದೆ. ಚುನಾವಣೇ ಪ್ರಕ್ರಿಯೇ ಫೆಬ್ರವರಿ.24 ರಂದು ಕೊನೆಗೊಳ್ಳಲಿದೆ ಎಂದು ಚುನಾವಣಾಧಿಕಾರಿಗಳು, ಜಿಲ್ಲಾ ಯೋಜನಾ ಸಮಿತಿ ಚುನಾವಣೆ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೀದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ. 10ರಂದು ವಾರ್ಷಿಕ ಬಜೆಟ್ ಮಂಡನೆ ಪೂರ್ವಭಾವಿ ಸಭೆ



**ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:–**

ಪಟ್ಟಣದ ಪುರಸಭೆಯ 2026–27ನೇ ಸಾಲಿನ ವಾರ್ಷಿಕ ಬಜೆಟ್ ಮಂಡನೆಯ ಮೊದಲನೇ ಸುತ್ತಿನ ಪೂರ್ವಭಾವಿ ಸಾರ್ವಜನಿಕರ ಸಭೆಯನ್ನು ಫೆಬ್ರವರಿ 10ರಂದು ಮಂಗಳವಾರ ಬೆಳಿಗ್ಗೆ 11: 30 ಘಂಟೆಗೆ ಪುರಸಭೆ ಸಭಾಂಗಣದಲ್ಲಿ ನಡೆಯಲಿದೆ ಎಂದು ಮುಖ್ಯಾಧಿಕಾರಿ ಸತೀಶ ಗುಡ್ಡೆ ತಿಳಿಸಿದ್ದಾರೆ. ಪಟ್ಟಣದ ನೋಂದಾಯಿತ ವಸತಿಕ್ಷೇಮಾಭಿವೃದ್ಧಿ ಸಂಘಗಳು, ನೋಂದಾಯಿತ ಸರ್ಕಾರೇತರ ಸಂಘ ಸಂಸ್ಥೆಗಳು, ವಾಣಿಜ್ಯ ಮತ್ತು ಕೈಗಾರಿಕಾ ಸಂಘಗಳು ಸೇರಿದಂತೆ ಇತರೆ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಗಣ್ಯ ವ್ಯಕ್ತಿಗಳು ಹಾಗೂ ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿ ಸಲಹೆ ಸೂಚನೆಗಳನ್ನು ನೀಡಲು ಮುಖ್ಯಾಧಿಕಾರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಷೆಗೆ ಬಾಂಧವ್ಯ ಗಟ್ಟಿಗೊಳಿಸುವ ಶಕ್ತಿ ಇದೆ– ಡಾ. ಗಾಯಕವಾಡ

- **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ಕನ್ನಡ ಭಾಷೆಗೆ ಹಿರಿದಾದ ಪರಂಪರೆ ಇದೆ, ಕನ್ನಡ ಸಾಹಿತ್ಯ ಅನೇಕ ಭಾಷೆಗಳಿಗೆ ತರ್ಜುಮಗೊಂಡಿದೆ, ಭಾಷೆ–ಭಾಷೆಗಳ ಮಧ್ಯೆ ಅನುಸಂಧಾನ ಬೆಳೆದಾಗ ಮಾತ್ರ ಭಾಷಾ ಸಂಸ್ಕೃತಿ ಬೆಳೆಯಲು ಸಾಧ್ಯವಾಗುತ್ತದೆ, ಆ ಮೂಲಕ ಕನ್ನಡ ಭಾಷೆ ಬಾಂಧವ್ಯ ಬೆಳೆಯುತ್ತದೆ ಎಂದು ಚಿಂತಕಿ ಡಾ. ಜಯದೇವಿ ಗಾಯಕವಾಡ ಹೇಳಿದರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು, ಸಗರನಾಡು ಸೇವಾ ಪ್ರತಿಷ್ಠಾನ ಸುರಪುರ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಯಾದಗಿರಿ ಸಹಯೋಗದಲ್ಲಿ, ಯಾದಗಿರಿ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಇಂದು ನಡೆದ ಕನ್ನಡ ಭಾಷಾ ಬಾಂಧವ್ಯ ಕುರಿತು ಒಂದು ದಿನದ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು ಕನ್ನಡ ಭಾಷೆಗೆ ಒಂದು ದೊಡ್ಡ ಪರಂಪರೆ ಇದೆ ಈ ಭಾಷೆ ಹಲವು ಭಾಷೆಗಳ ಉಗಮಕ್ಕೆ ಕಾರಣವಾಗಿದೆ ಕನ್ನಡ ಭಾಷಾ ಸಂಸ್ಕೃತಿ ಜಗತ್ತಿನ ಎಲ್ಲ ಸಂಸ್ಕೃತಿಗಳಿಗೆ ಮೇರು ಮತ್ತು ಮಾದರಿಯಾಗಿದೆ, ಕನ್ನಡ ಸಾಹಿತ್ಯ ಪರಂಪರೆ ಅಧ್ಯಯನ ಮಾಡಿದಾಗ ಸಹಸ್ರಾರು ವರ್ಷಗಳ ಭವ್ಯ ಇತಿಹಾಸ ನಮಗೆ ತಿಳಿಯುತ್ತದೆ ಆ ಹಿನ್ನೆಲೆಯಲ್ಲಿ ಭಾಷೆ,ಸಾಹಿತ್ಯ, ಸಂಸ್ಕೃತಿ ಒಂದಕ್ಕೊಂದು ಪೂರಕವಾಗಿ ನಿಲ್ಲುತ್ತವೆ ಎಂದು ಹೇಳಿದರು, ಯಾದಗಿರಿ ಜಿಲ್ಲೆ ಗಡಿ ಭಾಗದ ಜಿಲ್ಲೆಯಾಗಿದ್ದು ಇಲ್ಲಿ ಭಾಷಾ ಜಾಗೃತಿ ಮೂಡಿಸುವುದು ಅತ್ಯಂತ ಅವಶ್ಯಕವಾಗಿದೆ ಎಂದು ಗಾಯಕವಾಡ ಅಭಿಪ್ರಾಯಪಟ್ಟರು, *ಗಡಿ ಜಿಲ್ಲೆಗಳಲ್ಲಿ ಭಾಷೆ ಸಮಸ್ಯೆಯ ಕುರಿತು* ಉಪನ್ಯಾಸ ನೀಡಿದ ಡಾ. ಗಾಳೆಪ್ಪಾ ಪೂಜಾರಿ ಮಾತನಾಡಿ ಗಡಿಭಾಗದ ಶಾಲಾ ಮಕ್ಕಳು ಅನುಭವಿಸುವ ಭಾಷೆ ಸಮಸ್ಯೆಗಳ ಬಗ್ಗೆ, ಶಿಕ್ಷಕರ ಸಮಸ್ಯೆ ಬಗ್ಗೆ ಮಾತನಾಡಿದರು, ಜೊತೆಗೆ ಗಡಿಭಾಗದ ಗ್ರಾಮಗಳಲ್ಲಿ ಈ ರೀತಿಯ ಕನ್ನಡ ಭಾಷೆ ಅಭಿಮಾನ ಬೆಳೆಸುವ ಚಟುವಟಿಕೆಗಳು ನಿರಂತರವಾಗಿ ನಡೆಯಬೇಕು ಎಂದು ಅಭಿಪ್ರಾಯಪಟ್ಟರು, ಕಾರ್ಯಕ್ರಮವನ್ನು ಹಿರಿಯ ಸಾಹಿತಿ ಶಾಂತಪ್ಪ ಬೂದಿಹಾಳ ಕಾರ್ಯಕ್ರಮ ಉದ್ಘಾಟಿಸಿದರು, ಮುಖ್ಯ ಅತಿಥಿಗಳಾಗಿ ರಾಯಚೂರು ವಿಶ್ವವಿದ್ಯಾಲಯದ ಅಕಾಡೆಮಿ ಕೌನ್ಸಿಲ್ ಸದಸ್ಯರಾದ ಶೇಖರ್ ರಾಕಾ ಪಾಲ್ಗೊಂಡಿದ್ದರು, ಯಾದಗಿರಿ ಕ.ಸಾ.ಪ ಮಾಜಿ ಅಧ್ಯಕ್ಷ ಅಯ್ಯಣ್ಣ ಹುಂಡೇಕರ್ ಅಧ್ಯಕ್ಷತೆ



ವಹಿಸಿದ್ದರು, ಡಾ. ಸುಭಾಷಚಂದ್ರ ಕೌಲಗಿ ಆಶಯ ಮಾತುಗಳನ್ನು ಆಡಿದರು, ಸಗರನಾಡು ಸೇವಾ ಪ್ರತಿಷ್ಠಾನ ಅಧ್ಯಕ್ಷ ಪ್ರಕಾಶ್ ಅಂಗಡಿ ಕನ್ನೆಳ್ಳಿ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು, ಕಾರ್ಯಕ್ರಮವನ್ನು ಗುರುಪ್ರಸಾದ ವೈದ್ಯ ನಿರೂಪಿಸಿದರು, ದುರ್ಗಪ್ಪ ಪೂಜಾರಿ ಸ್ವಾಗತಿಸಿದರು ರಾಘವೇಂದ್ರ ಭಕ್ರಿ ವಂದಿಸಿದರು,

ನಂತರ ನಡೆದ ಗೋಷ್ಠಿ ಎರಡರಲ್ಲಿ *ಯಾದಗಿರಿ ಜಿಲ್ಲೆಯ ಸಾಹಿತ್ಯ ಪರಂಪರೆ* ಕುರಿತು ಡಾ. ಭೀಮರಾಯ ಲಿಂಗೇರಿ ಉಪನ್ಯಾಸ ನೀಡಿದರು, ಹಾಗೂ *ಯಾದಗಿರಿ ಜಿಲ್ಲೆಯ ಸಾಂಸ್ಕೃತಿಕ ಪರಂಪರೆ* ಕುರಿತು ಡಾ. ಎಸ್. ಎಸ್ ನಾಯಕ್ ಉಪನ್ಯಾಸ ನೀಡಿದರು, ಯಾದಗಿರಿ ಕ.ಸಾ.ಪ ಅಧ್ಯಕ್ಷ ವೆಂಕಟೇಶ ಕಲಕಂಬ ಅಧ್ಯಕ್ಷತೆ ವಹಿಸಿದರು, ನಂತರ ನಡೆದ ಸಮಾರೋಪ ಸಮಾರಂಭದಲ್ಲಿ ಸಾಹಿತಿ ಡಾ.ಮರಿಯಪ್ಪ ನಾಟೇಕರ ಸಮಾರೋಪ ಮಾತುಗಳನ್ನಾಡಿದರು, ಮುಖ್ಯ ಅತಿಥಿಗಳಾಗಿ ಎಲ್.ಕೆ..ಇ.ಟಿ ಎಸ್. ಕಾಲೇಜಿನ ಪ್ರಾಚಾರ್ಯ ಗುರಪ್ಪಚಾರ್ಯ ವಿಶ್ವಕರ್ಮ, ಸರ್ಕಾರಿ ಪದವಿ ಮಹಾವಿದ್ಯಾಲಯದ ಉಪನ್ಯಾಸಕ ಡಾ. ನರಸಪ್ಪ ಚಿತ್ತಾಪುರ ಅತಿಥಿಗಳಾಗಿ ಪಾಲ್ಗೊಂಡಿದ್ದರು, ಪ್ರಕಾಶ ಅಂಗಡಿ ಕನ್ನೆಳ್ಳಿ ಅಧ್ಯಕ್ಷತೆ ವಹಿಸಿದರು, ಮಾಳಪ್ಪ ಯಾದವ ನಿರೂಪಿಸಿದರು ಅಂಜುಮ ಪರ್ವಿನ ಸ್ವಾಗತಿಸಿದರು ದೇವರಾಜ್ ವರ್ಕನಳ್ಳಿ ವಂದಿಸಿದರು ಪ್ರಮುಖರಾದ ಶಿವಶರಣಪ್ಪ ಹೆಡಗಿನಾಳ, ಆರ್ ಮಹದೇವಪ್ಪ ತುಮಕೂರ, ನಾಗೇಂದ್ರ ಜಾಜಿ, ನೊರಂದಪ್ಪ ಲೇವಡಿ, ಚೆನ್ನಪ್ಪ ಠಾಣಗುಂದಿ, ಬಸವಂತರಾಯ ಗೌಡ ಮಾಲಿಪಾಟೀಲ್, ಸುರೇಶ ತಡಿಬಿಡಿ ಅಯ್ಯನಗೌಡ ಕಾಶಪ್ಪನಳ್ಳಿ, ಸೂರ್ಯಕಾಂತ ಕರದಳ್ಳಿ, ದೇವೇಂದ್ರ ದೋತ್ರೆ, ಸೋಮಶೇಖರ ಮಣ್ಣೂರ ಸಂಗಣ್ಣ ಗುಳಗಿ, ಆನಂದ ರಾಠೋಡ ಸೇರಿದಂತೆ ಸರ್ಕಾರಿ ಪದವಿ ಮಹಾವಿದ್ಯಾಲಯದ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು

## ಪ್ರಕಾಶಕರ ಸಮ್ಮೇಳನ ಫೆ. 7 ಮತ್ತು 8 ಕ್ಕೆ. ಸಕಲ ಸಿದ್ಧತೆ

- **(ವರದಿ.ಡಿ.ಕೆ. ಪ್ರಹ್ಲಾದ.)**
- **ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ**

ಹುಲಸೂರು: ತಾಲ್ಲೂಕಿನ ಬೇಲೂರಿನ ಗ್ರಾಮದಲ್ಲಿ ಶರಣ ಉರಿಲಿಂಗ ಪೆದ್ದಿ ಮಠದಲ್ಲಿ ಫೆಬ್ರುವರಿ 7 ಮತ್ತು 8 ರಂದು ನಡೆಯುವ ಶರಣ ಉರಿಲಿಂಗ ಪೆದ್ದಿ ಉತ್ಸವ ಮತ್ತು ಕಾಳವ್ವೆ ಉತ್ಸವದ ಅಂಗವಾಗಿ ಪ್ರಕಾಶಕರ ಪ್ರಥಮ ಸಮ್ಮೇಳನವೂ ಆಯೋಜಿಸಲಾಗಿದೆ. ಸಮ್ಮೇಳನದ ಸರ್ವಾಧ್ಯಕ್ಷ ಕಲಬುರಗಿಯ ಸಿದ್ದಲಿಂಗೇಶ್ವರ ಬುಕ್ ಡಿಪೋ ಮತ್ತು ಪ್ರಕಾಶನ ಸಂಸ್ಥೆ ಮಾಲೀಕ ಡಾ.ಬಸವರಾಜ ಕೊನೇಕ್ ಅವರಿಗೆ ಮಠಾಧಿಪತಿ ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮೀಜಿ ಹಾಗೂ ಸಂಯೋಜಕ ಡಾ.ಗವಿಸಿದ್ದಪ್ಪ ಪಾಟೀಲ, ಸಾಹಿತಿ ಡಾ.ಜಯದೇವಿ ಗಾಯಕವಾಡ ಅವರಿಂದ ಈಚೆಗೆ ಅಧಿಕೃತ ಆಮಂತ್ರಣ ಸಹ ನೀಡಲಾಗಿದೆ. ಇತರೆ ಸಿದ್ಧತೆ ಕೈಗೊಳ್ಳಲಾಗುತ್ತಿದೆ.



ಫೆಬ್ರುವರಿ 7 ರಂದು ಬೆಳಿಗ್ಗೆ 8 ಗಂಟೆಗೆ ಮೆರವಣಿಗೆ ನಡೆಯುವುದು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕ ಸಿದ್ರಾಮ ಸಿಂಧೆ ಉದ್ಘಾಟಿಸುವರು. ತಹಶೀಲ್ದಾರ್ ಶಿವಾನಂದ ಮೇತ್ರೆ ಅಧ್ಯಕ್ಷತೆ ವಹಿಸುವರು. ಮಧ್ಯಾಹ್ನ 1.30 ಗಂಟೆಗೆ ಜಿಲ್ಲಾ ಉಸ್ತುವರಿ ಸಚಿವ ಈಶ್ವರ ಖಂಡ್ರೆ ಅಧ್ಯಕ್ಷತೆಯಲ್ಲಿ ಸಮ್ಮೇಳನ ಆರಂಭ ಆಗುವುದು. ಬೆಂಗಳೂರಿನ ಅಂಕಿತ ಪ್ರಕಾಶನದ ಪ್ರಕಾಶ ಕಂಬತ್ತಳ್ಳಿ ಉದ್ಘಾಟಿಸುವರು. ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ ಬಸವಲಿಂಗ ಪಟ್ಟದ್ದೇವರು, ಹುಲಸೂರಿನ ಪೂಜ್ಯ ಶ್ರೀ ಶಿವಾನಂದ ಸ್ವಾಮೀಜಿ,ಬೇಲೂರಿನ ಪೂಜ್ಯಶ್ರೀ ಪಂಚಾಕ್ಷರಿ ಸ್ವಾಮೀಜಿ ನೇತೃತ್ವ ವಹಿಸುವರು. ಬಸವರಾಜ ಕೊನೇಕ್ ಸಮ್ಮೇಳನಾಧ್ಯಕ್ಷರ ಭಾಷಣ ಮಾಡುವರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟೆ ಪ್ರಶಸ್ತಿ ಪ್ರದಾನ ಮಾಡುವರು. 40 ಸಾಧಕರಿಗೆ ಧರಿಸಿರಿ ಪ್ರಶಸ್ತಿ ಮತ್ತು ಕರುನಾಡ ಸಿರಿ ಪ್ರಶಸ್ತಿ ನೀಡಲಾಗುತ್ತದೆ.

ಅಂದು ಮಧ್ಯಾಹ್ನ 4.30 ಗಂಟೆಗೆ ಮೊದಲನೇ ಚಿಂತನಗೋಷ್ಠಿ ನಡೆಯುವುದು. ಗೋರಟಾ ಪ್ರಭುದೇವರು, ಅಂಬಿಗರ ಚೌಡಯ್ಯ ಜಾಗೃತಿ ಪೀಠದ ರತ್ನಾಕಾಂತ ಸ್ವಾಮೀಜಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಡಾ.ಸಿದ್ದರಾಮ ಹೊನ್ಕಲ್, ಪ್ರೊ.ಶಿವರಾಜ ಪಾಟೀಲ ಪಾಲ್ಗೊಳ್ಳುವರು. ಡಾ.ಕಾವ್ಯಶ್ರೀ ಮಹಾಗಾಂವಕರ್ ಮತ್ತು ಡಾ.ಶ್ರೀಶೈಲ್ ನಾಗರಾಳ, ಡಾ.ಸಾರಿಕಾದೇವಿ ಕಾಳಗಿ ಉಪನ್ಯಾಸ ನೀಡುವರು. ಬಳಿಕ ಹಳ್ಳಿಗಾಡಿನ ಆಟೋಟಗಳ ಸ್ಪರ್ಧೆ ನಡೆಯುವುದು.

ಫೆಬ್ರುವರಿ 8 ರಂದು ಬೆಳಿಗ್ಗೆ 10 ಗಂ–ಟೆಗೆ ಲೇಖಕ, ಪ್ರಕಾಶಕ ಮತ್ತು ಓದುಗ ವಿಷಯದ ಬಗ್ಗೆ ಟಿಪ್ಪಣೆ ಮಂಡಿಸಲಾಗುತ್ತದೆ. ಬೇಲೂರು ವಿರಕ್ತಮಠದ ಪೂಜ್ಯ ಶ್ರೀ ಶಿವಕುಮಾರ ಸ್ವಾಮೀಜಿ. ಚಿತ್ರಮ್ಮತಾಯಿ ಬಸವಕಲ್ಯಾಣ, ಅಪ್ಪಾರಾವ್ ಅಕ್ಕೋಣಿ ಪಾಲ್ಗೊಳ್ಳುವರು. ಬಳಿಕ 12.30 ಗಂ–ಟೆಗೆ ಸಮ್ಮೇಳನಾಧ್ಯಕ್ಷರೊಂದಿಗೆ ಸಂವಾದ ನಡೆಯುವುದು. ಗುಣತೀರ್ಥವಾಡಿಯ ಪೂಜ್ಯ ಶ್ರೀ ಬಸವಪ್ರಭು ಸ್ವಾಮೀಜಿ, ಸಸ್ತಾಪುರ ಮಹಾದೇವಿತಾಯಿ, ಎನ್.ರವಿಕುಮಾರ, ಡಾ.ಸ್ವಾಮಿರಾವ್ ಕುಲಕರ್ಣಿ ಪಾಲ್ಗೊಳ್ಳುವರು.

ಮಧ್ಯಾಹ್ನ 2.30 ಗಂಟೆಗೆ ಪ್ರಶಸ್ತಿ ಪ್ರದಾನ ಮತ್ತು ಸಮಾರೋಪ ನಡೆಯುವುದು. ಮೈಸೂರು– ಕೊಲ್ಲಾಪೂರ ಪೂಜ್ಯ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ, ಸಾಹಿತಿ ಡಾ.ರಾಜಶೇಖರ ಮಠಪತಿ, ಬಸವರಾಜ ಕೊನೇಕ್, ಸಂಸದ ಈಶ್ವರ ಖಂಡ್ರೆ, ಜಿಯಾವುದ್ದೀನ್ ಪಾಲ್ಗೊಳ್ಳುವರು. ಶಾಸಕ ಶರಣು ಸಲಗರ ಅಧ್ಯಕ್ಷತೆ ವಹಿಸುವರು. ಶಿಕ್ಷಣ ಇಲಾಖೆ ಸಮಗ್ರ ಯೋಜನೆ ನಿರ್ದೇಶಕ ಡಾ.ಸತೀಶಕುಮಾರ ಹೊಸಮನಿ ಪ್ರಶಸ್ತಿ ಪ್ರದಾನ ಮಾಡುವರು.

ಬೆಂಗಳೂರಿನ ಪ್ರಕಾಶಕಿ ಎಂ.ರಾಜೇಶ್ವರಿ ವೆಂಕಟೇಶ ಮತ್ತು ಧಾರವಾಡದ ಸಾಹಿತಿ ಡಾ.ವೈ.ಎಂ.ಭಜಂತ್ರಿ ಅವರಿಗೆ ಉರಿಲಿಂಗ ಪೆದ್ದಿ ಪ್ರಶಸ್ತಿ ಮತ್ತು ಬೆಂಗಳೂರಿನ ಚಿಂತಕಿ ಪದ್ಮಶ್ರೀ ರಾಗಂ ಅವರಿಗೆ ಕಾಳವ್ವೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಹಲವಾರು ಜನರಿಗೆ ಪ್ರಕಾಶಕರ ಪ್ರಶಸ್ತಿ ಮತ್ತು ವಿವಿಧ ಕ್ಷೇತ್ರದ ಸಾಧಕರಿಗೆ ವಿಶೇಷ ಸನ್ಮಾನ ನಡೆಯಲಿದೆ ಎಂದು ಮಠಾಧಿಪತಿ ಪಂಚಾಕ್ಷರಿ ಸ್ವಾಮೀಜಿ ಹಾಗೂ ಸಂಯೋಜಕ ಡಾ.ಗವಿಸಿದ್ದಪ್ಪ ಪಾಟೀಲ ತಿಳಿಸಿದ್ದಾರೆ.

# ಕಾಲ್ಪನಿಕ ಜಗತ್ತು ವಿಶೇಷ ಅಂಕಣ.

## ಬಡತನದಲ್ಲಿ ಹುಟ್ಟಿ ಬೆಳೆದು ಸಮಾಜಕ್ಕೆ ಮಾದರಿಯಾದ ಸಮಾಜಸೇವಕ ಬಸವರಾಜ ಕುಂಬಾರ ಬಳಿಚಕ್ರ.

**ಭೀಮ ತೀರದ ಗಿರಿನಾಡೆಂದೆ ಪ್ರಸಿದ್ಧವಾದ ಯಾದಗಿರ ಶರಣರ, ಸಂತರ, ಸ್ವಾತಂತ್ರ್ಯ ಹೋರಾಟಗಾರರ ತವನಿಧಿ.**

ಈ ನಾಡಿನಲ್ಲಿ ಅನೇಕ ಸಾಹಿತಿಗಳು ಕಲಾವಿದರು ಸಾಹಿತ್ಯ, ಸಂಸ್ಕೃತಿ ಪರಂಪರೆಗೆ ತಮ್ಮದೇಯಾದ ಕೊಡುಗೆಯನ್ನು ನೀಡಿದ್ದಾರೆ. ಸಾಮಾಜಿಕ, ಶೈಕ್ಷಣಿಕ, ಜನಪರ ಹೋರಾಟ ಮಾಡಿದ ಅನೇಕರು ಈ ನೆಲದಲ್ಲಿ ದೊರೆಯುತ್ತಾರೆ. ಅಪೂರ್ವ ಪ್ರತಿಭೆಯಾಗಿದ್ದ ಈ ನಾಡಿನ ಸಮಾಜ ಸೇವಕನಾಗಿ ಬಾಳಿ ಬದುಕುತಿರುವ "ಜನರ ಮನ ನೊಂದೀತೆಂಬ ಹೆದರಿಕೆಯಿಂದ ಸತ್ಯಕ್ಕೆ ಅವಮಾನವನ್ನುಂಟು ಮಾಡಬೇಡ, ಅನುಕೂಲತೆಗಿಂತ ಆತ್ಮಗೌರವ ಹೆಚ್ಚಿನದು. ಲಾಭಕ್ಕಿಂತ ತತ್ವ ನಿಷ್ಠೆ ಹೆಚ್ಚಿನದು ಪಡೆದ ತಿಳಿವನ್ನು ಜನತೆಯಲ್ಲಿ ಹರಡಿ ಕಲ್ಯಾಣ ಸಾಧನೆಯು ಮಹತ್ವಪೂರ್ಣವಾದದ್ದು ಎಂಬುದು ಬಸವರಾಜ್ ಕುಂಬಾರ ಅವರ ಬಲವಾದ ನಂಬುಗೆ ಈ ದೃಷ್ಟಿಕೋನ ಅವರ ಬಾಳ ಬಟ್ಟೆಯ ಶಾಸನವೆನಿಸಿತ್ತು.

ಮೂಲತಃ ಬಳಿಚಕ್ರ ಗ್ರಾಮದ ಸಾಮಾನ್ಯ ಹಾಗೂ ಪರಿಶ್ರಮ ರೈತ ಕುಟುಂಬದ ದಂಪತಿಗಳಾದ ಶ್ರೀಮತಿ ಅಯ್ಯಮ್ಮ ಹಾಗೂ ದಿ॥ ಶರಣಪ್ಪ ಕುಂಬಾರ ಅವರ ಪುತ್ರನಾಗಿ ಜನಿಸಿ. ಸರಳ ಜೀವನ, ಶ್ರಮ, ಸತ್ಯ ಮತ್ತು ಮಾನವೀಯ ಮೌಲ್ಯಗಳೇ ನಮ್ಮ ಕುಟುಂಬದ ಮೂಲ ಆಸ್ತಿ. ತಮ್ಮ ಬಾಲ್ಯಶಿಕ್ಷಣವನ್ನು ಬಳಿಚಕ್ರದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಪೂರ್ಣಗೊಳಿಸಿ, ವಿದ್ಯಾರ್ಥಿ ಜೀವನದಲ್ಲೇ ಶಿಸ್ತು, ಶ್ರಮ ಮತ್ತು ಆತ್ಮವಿಶ್ವಾಸವನ್ನು ಬೆಳೆಸಿಕೊಂಡು ಮುಂದಿನ ಜೀವನದ ಗುರಿಗಳನ್ನು ರೂಪಿಸಿಕೊಂಡೆ.

ತನ್ನ ವಿದ್ಯಾಭ್ಯಾಸದ ಮುಂದಿನ ಹಂತದಲ್ಲಿ ಚಿಂಚೋಳಿ ತಾಲೂಕಿನ ಸರಕಾರಿ ಕೋಟಾದ ಮೂಲಕ ಐಟಿಐ ಫಿಟ್ಟರ್ ತರಬೇತಿಗೆ ಪ್ರವೇಶ ಪಡೆಯುವ ಅವಕಾಶ ದೊರೆಯಿತು. ಅವರ ಸಹಕಾರ ಜೀವನದ ದಿಕ್ಕನ್ನೇ ಬದಲಿಸಿದ ಮಹತ್ವದ ಘಟ್ಟವಾಗಿತ್ತು.

ಐಟಿಐ ತರಬೇತಿ ನಂತರ ಪ್ರತಿಷ್ಠಿತ ರಾಬರ್ಟ್ ಬಾಷ್ ಕಂಪನಿಯಲ್ಲಿ ಉದ್ಯೋಗ ಪ್ರಾರಂಭಿಸಿ. ಅಲ್ಲಿ ಪಡೆದ ತಾಂತ್ರಿಕ ಜ್ಞಾನ, ಶಿಸ್ತು ಹಾಗೂ ವೃತ್ತಿಪರ ಅನುಭವ ಜೀವನಕ್ಕೆ ಬಲವಾದ ಅಡಿಪಾಯವಾಯಿತು. ನಂತರ ಟ್ರಿಡೆಂಟ್ ಹುಂಡೈ ಸಂಸ್ಥೆಯಲ್ಲಿ ಪಿಡಿಐ ಇಂಚಾರ್ಜ್ ಆಗಿ



ಸೇವೆ ಸಲ್ಲಿಸುವ ಅವಕಾಶ ದೊರೆಯಿತು. ಅಲ್ಲಿನ ಅನುಭವದಿಂದ ಆಡಳಿತಾತ್ಮಕ ಜವಾಬ್ದಾರಿ ಹಾಗೂ ತಂಡ ನಿರ್ವಹಣೆಯ ಕೌಶಲ್ಯವನ್ನು ಅರಿತುಕೊಂಡ.

ಮುಂದೆ ಒಂದು ಅಂತರರಾಷ್ಟ್ರೀಯ ಜರ್ಮನ್ ಕಂಪನಿಯಲ್ಲಿ ಪ್ರಸ್ತುತ ಇಂಚಾರ್ಜ್ ಆಗಿ ಕಾರ್ಯನಿರ್ವಹಿಸುತ್ತಿದ್ದು, ವೃತ್ತಿಜೀವನದಲ್ಲಿ ಉನ್ನತ ಸ್ಥಾನವನ್ನು ಪಡೆದಿರುವುದು ಅಪಾರ ಸಂತೋಷ ಮತ್ತು ಹೆಮ್ಮೆಯ ವಿಷಯವಾಗಿದೆ.

ಉದ್ಯೋಗದ ಜೊತೆಗೆ ಸ್ವಾವಲಂಬನೆಯ ಕನಸನ್ನು ನನಸು ಮಾಡಬೇಕೆಂಬ ದೃಢ ಸಂಕಲ್ಪದಿಂದ ಇತ್ತೀಚಿನ ದಿನಗಳಲ್ಲಿ ಸಂಕಲ್ಪ ಎಂಬ ಹೆಸರಿನ ಎರಡು ರೆಸ್ಟೋರೆಂಟ್ ಮಾದರಿಯ ಕೇಟರಿಂಗ್ ಹಾಗೂ ಹೋಟೆಲ್ ವ್ಯವಹಾರಗಳನ್ನು ಪ್ರಾರಂಭಿಸಿ ಯಶಸ್ವಿಯಾಗಿ ನಡೆಸುತ್ತಿದ್ದಾರೆ. ಉದ್ಯೋಗ ಸೃಷ್ಟಿ, ಸ್ಥಳೀಯ ಯುವಕರಿಗೆ ಅವಕಾಶ ನೀಡುವುದು ಮತ್ತು ಗುಣಮಟ್ಟದ ಸೇವೆ ನೀಡುವುದು ತನ್ನ ವ್ಯಾಪಾರದ ಮುಖ್ಯ ಉದ್ದೇಶವಾಗಿದೆ.

ವೃತ್ತಿಜೀವನದ ಜೊತೆಗೆ ಸಮಾಜದ ಮೇಲಿನ ಹೊಣೆಗಾರಿಕೆಯ ಅರಿವು ಬಾಲ್ಯದಿಂದಲೇ ಇತ್ತು. ಸಮಾಜ ಸೇವೆ, ಶೈಕ್ಷಣಿಕ ಪ್ರೋತ್ಸಾಹ ಮತ್ತು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ತನ್ನ ಜೀವನದ ಮೂಲ ಮೌಲ್ಯವಾಗಿದೆ.

ರಾಜಕೀಯ ಮತ್ತು ಸಾಮಾಜಿಕ ಚಟುವಟಿಕೆಗಳ ಕಡೆಗೆ ಒಲವು ಹೆಚ್ಚಾಗಲು ಕರ್ನಾಟಕ ರಾಜ್ಯದ ವಿಧಾನಸಭೆಯ ಮಾಜಿ ಸ್ಪೀಕರ್ ಹಾಗೂ ಕಾಂಗ್ರೆಸ್ ಪಕ್ಷದ ಕಟ್ಟಾಳು ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರ ಪ್ರೇರಣೆ ಪ್ರಮುಖ ಕಾರಣವಾಗಿದೆ. ಅವರ ಆದರ್ಶ, ಶಿಸ್ತುಬದ್ಧ ರಾಜಕೀಯ ಜೀವನ ಮತ್ತು ಜನಪರ ಸೇವೆಗೆ ದಾರಿದೀಪವಾಗಿದೆ.

ಆ ಪ್ರೇರಣೆಯ ಫಲವಾಗಿ ತಮ್ಮ ಊರಾದ ಬಳಿಚಕ್ರದಿಂದಲೇ ಸಾಮಾಜಿಕ, ರಾಜಕೀಯ ಹಾಗೂ ಶೈಕ್ಷಣಿಕ ಸೇವೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಇಂದಿಗೂ ನಿರಂತರವಾಗಿ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ, ಪ್ರಸ್ತುತ ಕರ್ನಾಟಕದ ಪ್ರಾದೇಶಿಕ ಪಕ್ಷವಾದ ಏಖಖ ಪಕ್ಷದಲ್ಲಿ ಕಾರ್ಯಕರ್ತನಾಗಿ ಸೇವೆ ಸಲ್ಲಿಸುತ್ತಿದ್ದು, ಪಕ್ಷದ ತತ್ವ, ರೈತಪರ ಚಿಂತನೆ, ಸಾಮಾಜಿಕ ನ್ಯಾಯ ಹಾಗೂ ಪ್ರಾದೇಶಿಕ ಸಮತೋಲನದ ಸಿದ್ಧಾಂತಗಳ ಮೇಲೆ ಸಂಪೂರ್ಣ ನಂಬಿಕೆ ಹೊಂದಿದ್ದಾನೆ,

ಈ ನಂಬಿಕೆಯೊಂದಿಗೆ 2023ರ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಜೇವರ್ಗಿ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿ, ಜನಸೇವೆಯ ಮಹತ್ತರ ಜವಾಬ್ದಾರಿಯನ್ನು ಹೊರುವ ಸಂಕಲ್ಪದೊಂದಿಗೆ ಚುನಾವಣಾ ಕಣಕ್ಕೆ ಇಳಿದಿದ್ದಾರೆ, ನಮ್ಮ ಬದುಕು ಒಂದು ಹೋರಾಟ, ಈ ಹೋರಾಟದಲ್ಲಿ ನಾವು ಮಾಡುವ ಕಾರ್ಯಕ್ರಮಗಳು ನಾವು ಪ್ರಾಮಾಣಿಕವಾಗಿ, ಪರಿಶುದ್ಧವಾಗಿ ಯಾವುದೇ ಫಲಪ್ರೇಕ್ಷಯಿಲ್ಲದೆ ಮಾಡಬೇಕು ಎಂಬ ಆಶಯದೊಂದಿಗೆ ತನ್ನ ನಂಬಿದವರಿಗೆ ಇಂಬು ನೀಡುತ್ತಾ, ಯಾವುದಕ್ಕೂ ಕೊರಗದೆ, ಕೊಚ್ಚಿಕೊಳ್ಳದೆ, ಗಳಿಕೆ ಅಳಿಕೆಗಳಿಂದ ವಿಚಲಿತ ನಾಗದ ಸಾತ್ವಿಕ ಸ್ವಭಾವದ ಗಿರಿನಾಡಿನ ಜನರ ಹೃದಯ ಸಾಮ್ರಾಟ. ಭವಿಷ್ಯದಲ್ಲಿಯೂ ಪಕ್ಷಾತೀತವಾಗಿ ಜನರ ಬದುಕನ್ನು ಉತ್ತಮಗೊಳಿಸುವ ಕಾರ್ಯ, ಶಿಕ್ಷಣ ಪ್ರೋತ್ಸಾಹ, ಉದ್ಯೋಗ ಸೃಷ್ಟಿ, ರೈತ ಹಾಗೂ ಯುವಜನರ ಹಿತಕ್ಕಾಗಿ ಪ್ರಾಮಾಣಿಕವಾಗಿ ಶ್ರಮಿಸುವುದೇ ತನ್ನ ಜೀವನದ ಗುರಿಯಾಗಿದೆ. ಸೇವೆ ಶ್ರಮ ಸತ್ಯ ಸಾಮಾಜಿಕ ನ್ಯಾಯ

ಇವುವೇ ತನ್ನ ಜೀವನದ ಮೂಲ ಮಂತ್ರಗಳು ಎಂದು ನಂಬಿದ್ದಾರೆ. ಮೃದು ಸ್ವಭಾವದಿಂದ ನೇರ ಮಾತನಾಡುವ ವ್ಯಕ್ತಿತ್ವದ ಮನುಷ್ಯರಾಗಿದ್ದಾರೆ, ತಮ್ಮಲ್ಲಿ ಸಹಾಯ ಕೇಳಿಕೊಂಡು ಬಂದವರಿಗೆ ಸಹಾಯ ಮಾಡುವ ದಿಟ್ಟತನದ ವ್ಯಕ್ತಿಯಾಗಿದ್ದಾರೆ, ನಾ ಕಂಡಂತೆ ಸುಮ್ಮನೆ ಭರವಸೆ ನೀಡುವ ಜಾಯಮಾನ ಅವರದ್ದಲ್ಲ, ಮೊದಲಿಂದಲೂ ಕೆಲಸದ ವ್ಯಕ್ತಿ, ವಿಶೇಷವಾಗಿ ಕಳೆದ ಸುಮಾರು ವರ್ಷಗಳಿಂದ ನಿತ್ಯ ಜನರ ಸೇವೆ ಮಾಡುವುದರಲ್ಲಿ ಮತ್ತು ಎಲ್ಲಾ ಸಮುದಾಯದ ಮುಖ್ಯ ಕ್ಷೇತ್ರಗಳಿಗೆ ಆದ್ಯತೆ ನೀಡಿ ಇತ್ತೀಚಿನ ದಿನದಲ್ಲಿ ಉತ್ತಮ ಸಮಾಜ ಸೇವಕ ಎಂದು ಹೆಸರುವಾಸಿಯಾಗಿದ್ದಾರೆ, ಅವರ ವ್ಯಕ್ತಿತ್ವವನ್ನು ನಾವು ಹೇಳುವುದು ನಭೂಮಂಡಲದ ಚುಕ್ಕಿ ಸಾಗರದ ಜಲ ಬೊಗಸೆಯಲ್ಲಿ ಹಿಡಿದಂತಾಗುತ್ತದೆ, ಒಟ್ಟಾರೆಯಾಗಿ ಎಲ್ಲಾ ಕ್ಷೇತ್ರಗಳಲ್ಲಿ ಗಣನೀಯ ಸೇವೆಗೈದು ಜನಪ್ರಿಯತೆಗಳಿಸಿದರು.



**ಡಿ.ಕೆ ದೇವಿಂದ್ರ ಯಾದಗಿರಿ.**
ಲೇಖಕರು, ವರದಿಗಾರರು
ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.
9538649428

# ಕರ್ನಾಟಕ ಸಂಘದಿಂದ ಮೆರವಣಿಗೆ ಬೈಕ್ ರ್‍ಯಾಲಿ ವಿಶೇಷ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ಫೆ.5ರಂದು ಮಧ್ಯಾಹ್ನ 1 ಗಂಟೆಗೆ ಕರ್ನಾಟಕ ಸಂಘದಿಂದ ಉತ್ಸವದ ಜಾಥಾ ಮತ್ತು ಬೈಕ್ ರ್‍ಯಾಲಿ ಕಾರ್ಯಕ್ರಮ ನಡೆಯಲಿದ್ದು, ಮೆರವಣಿಗೆಯು ಕರ್ನಾಟಕ ಸಂಘದಿಂದ ಆರಂಭವಾಗಿ ಬಂಗಾರ ಬಜಾರ್, ಡಾ.ಬಿ.ಆರ್. ಅಂಬೇಡ್ಕರ್ ವೃತ್ತ, ಬಸವೇಶ್ವರ ವೃತ್ತದ ಮಾರ್ಗವಾಗಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದವರೆಗೆ ಸಂಚರಿಸಲಿದೆ. ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಬೈಕ್ ರ್‍ಯಾಲಿ ನಡೆಯಲಿದೆ.

ಈ ಮೆರವಣಿಗೆಯಲ್ಲಿ ವೀರಗಾಸೆ, ಹಗಲುವೇಷ, ಚಿಲಿಪಿಲಿ ಗೊಂಬೆ, ಕೀಲುಕುದುರೆ, ಜಾಂಜಮೇಳ, ಹಗಲುವೇಷ, ಕಣಿಹಲಗೆ, ಡೊಳ್ಳುಕುಣಿತ, ತಾಷಾರೊಂಡಾಲಾ, ಶಹನಾಯಿ ವಾದನ, ಲಂಬಾಣಿ ನೃತ್ಯ, ಕೊಂಬುಕಹಳೆ, ಗೊರವ ಕುಣಿತ, ತಮಟೆವಾದನ, ನಾಸಿಕಡೊಳ್ಳು, ಮಹಿಳಾ ಡೊಳ್ಳು, ಕಹಳೆವಾದನ, ಸೋಮನಕುಣಿತ, ನಂದಿಧ್ವಜ ಮತ್ತು ಸಮಾಳ, ಭದ್ರಕಾಳಿ ಕುಣಿತ, ಸತ್ತೀಗೆ ಕುಣಿತ, ಜಗ್ಗಲಗಿ, ಕೋಳಿ ಕುಣಿತ, ಕರಡಿ ಮಜಲು ಸೇರಿದಂತೆ ನಾನಾ ಕಲಾಪ್ರಕಾರ ಕಲಾವಿದರು ಮೆರವಣಿಗೆಯಲ್ಲಿ ಭಾಗವಹಿಸಿ ಮೆರವಣಿಗೆಯ ಕಳೆ ಹೆಚ್ಚಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಫೆ.5ರಂದು ಫೈರ್ ಶೋ, ಸಂಜೆ 7ರಿಂದ ನೃತ್ಯ ಕಾರ್ಯಕ್ರಮ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಅಂಗವಾಗಿ ಫೆ.05ರಂದು ಕೃಷಿ ವಿಶ್ವವಿದ್ಯಾಲಯದ ಮುಖ್ಯ ವೇದಿಕೆಯಲ್ಲಿ ಸಂಜೆ 5.30ಕ್ಕೆ ಮುಖ್ಯ ವೇದಿಕೆಯ ಉದ್ಘಾಟನಾ ಸಮಾರಂಭದಲ್ಲಿ ಜಿಲ್ಲಾವಾರು ಶ್ರೇಷ್ಠ ಕೃಷಿಕ, ಕೃಷಿಕ ಮಹಿಳೆ ಪ್ರಶಸ್ತಿ ವಿಜೇತರಿಗೆ ಪ್ರಶಸ್ತಿ ಪ್ರಧಾನ ಪುರಸ್ಕೃತರ ಪರಿಚಯ ಕೃಷಿ ತಾಂತ್ರಿಕತೆಗಳ ಕೈಪಿಡಿ, ಹಸ್ತಪ್ರತಿ ಪ್ರಕಟಣೆಗಳ ಬಿಡುಗಡೆ ನಡೆಯಲಿದೆ.

ಸಂಜೆ 6.55ಕ್ಕೆ ಫೈರ್ ಶೋ ನಡೆಯಲಿದೆ. ಸಂಜೆ 7 ಗಂಟೆಗೆ ಎಕ್ಸಟೆಸ್ಸಿ ತಂಡದಿಂದ ನೃತ್ಯ ಕಾರ್ಯಕ್ರಮ, ಸಂಜೆ 7.15 ರಿಂದ 9.15ವರೆಗೆ ಸವಾರಿ ತಂಡದವರಿಂದ ಕಾರ್ಯಕ್ರಮ, ರಾತ್ರಿ 9.15 ರಿಂದ 9.30 ರವರೆಗೆ ಎಕ್ಸೆಸ್ಸಿ ತಂಡದಿಂದ ನೃತ್ಯ ಕಾರ್ಯಕ್ರಮ ಹಾಗೂ ರಾತ್ರಿ 9.40 ರಿಂದ 11.00 ರವರೆಗೆ ಸಂಜಿತ್ ಹೆಗಡೆ ಅವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ.

# ಸಾಂಸ್ಕೃತಿಕ ಕಾರ್ಯಕ್ರಮಗಳು

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಮುಖ್ಯ ವೇದಿಕೆಯಲ್ಲಿ ಫೆ.5ರ ಸಂಜೆ 4 ಗಂಟೆಯಿಂದ 5.30ರವರೆಗೆ ಪಂಡಿತ ನರಸಿಂಹಲು ವಡವಟ್ಟಿ ಅವರಿಂದ ಕ್ಲಾರಿನೇಟ್ ವಾದನ, ಶರಣಪ್ಪ ಗೋನಾಳ ಅವರಿಂದ ಜಾನಪದ ಗಾಯನ, ವೀರುಪಾಕ್ಷ ವಂದಲಿ ಅವರಿಂದ ಹಿಂದೂಸ್ಥಾನಿ ಶಾಸ್ತ್ರಿಯ ಸಂಗೀತ, ಸೂಗೂರೇಶ ಅಸ್ಕಿಹಾಳ ಅವರಿಂದ ಹಿಂದುಸ್ಥಾನಿ ಶಾಸ್ತ್ರಿಯ ಸಂಗೀತ, ನಬಿ ಬೇಗ್ ರಾಯಚೂರು ಅವರಿಂದ ಗಜಲ್, ಮುದ್ದುಮೋಹನ ರಾಯಚೂರು ಅವರಿಂದ ಹಿಂದುಸ್ಥಾನಿ ಸಂಗೀತ, ಶ್ರೇಯಸ್ ಜೋಷಿ ಅವರಿಂದ ಭರತನಾಟ್ಯ, ಗೋಪಾಲ ಗುಡಿಬಂಡಿ ರಾಯಚೂರು ಅವರಿಂದ ತಬಲಾವಾದನ, ವಿಷ್ಣುದೇಸಾಯಿ ಅವರಿಂದ ಏಕಪಾತ್ರಭಿನಯ, ಶಾಂತಕುಲಕರ್ಣಿ ಶಕ್ತಿನಗರ ಅವರಿಂದ ಜಾನಪದ ಸಂಗೀತ ನಡೆಯಲಿವೆ.ಮುರಳಿಧರ ಕುಲಕರ್ಣಿ, ಮರಿಮಳ ದಿಕ್ಷೀತ್, ಭಾವನಿ ಲೋಕೇಶ ಅವರು ನಿರೂಪಿಸುವರು.

ಬೆಳಿಗ್ಗೆ 11ರಿಂದ ಆರಂಭವಾಗುವ ಕಾರ್ಯಕ್ರಮದಲ್ಲಿ ಶಶಿಧರ್ ಒಂದಲಿ ಅವರಿಂದ ವಚನ ಗಾಯನ, ಅಮರೇಶ ಸಾಲಿಮಠ ಅವರಿಂದ ಸುಗಮ ಸಂಗೀತ, ಶಾಂತಾ ಬಲ್ಲಟಗಿ ಅವರಿಂದ ಸುಗಮ ಸಂಗೀತ, ವಸುಂಧರ ವಿ. ಹೊಸಪೇಟೆ ಅವರಿಂದ ಭರತನಾಟ್ಯ, ರಮೇಶ ಹಸಮಕಲ್ ಅವರಿಂದ ಸುಗಮ ಸಂಗೀತ, ಮಲ್ಲಣ್ಣ ಹರವಾಳ ಅವರಿಂದ ಜಾನಪದ ಗಾಯನ, ಸಂಗನಗೌಡ ರಾಮತಾಳ ಅವರಿಂದ ಹಂತಿಪದಗಳು, ಜಾವೀದ್ ಅವರಿಂದ ಗಜಲ್, ಗುಲಾಮ್ ಹೈದಾರ್ ಅವರಿಂದ ಗಜಲ್, ಅನ್ವರಿ ಅವರಿಂದ ಕವಾಲಿ, ಸುಭಾಷ್ ಅಸ್ಕಿಹಾಳ ಅವರಿಂದ ತತ್ವಪದಗಳು ನಡೆಯಲಿವೆ.

ಬೆಳಗ್ಗೆ 11 ಗಂಟೆಗೆ ಆರಂಭವಾಗುವ ಈ ಸಭಾಂಗಣದಲ್ಲಿ ಬೂದಯ್ಯ ಯಾದಗಿರಿ ಅವರಿಂದ ಸುಗಮ ಸಂಗೀತ, ಯಂಕನಗೌಡ ದಿದ್ದಿಗಿ ಅವರಿಂದ ಭಕ್ತಿಗೀತೆ, ಅಲ್ಲಭಕ್ಷಿ ಸಿಂಧನೂರು ಅವರಿಂದ ಜನಪದ ಗಾಯನ, ಬಸವರಾಜ ದಿನ್ನಿ ಅವರಿಂದ ದಾಸರ ಪದಗಳು, ಚೈತ್ರಮ್ಮ ಮಾಟುರ ಅವರಿಂದ ಸಂಪ್ರದಾಯ ಪದಗಳು, ಜಯಸಿಂಹ ಪೇರೂರ ಅವರಿಂದ ಸಂಗೀತ ಗಾಯನ, ಸುಜಾತ ಜೋಷಿ ಅವರಿಂದ ದಾಸವಾಣಿ, ಶ್ರೀನಿವಾಸ ಸಿಗ್ನೆಚರ್ ಡ್ಯಾನ್ಸ್ ಗ್ರೂಪ್ ರಾಯಚೂರು ಅವರಿಂದ ಸಮೂಹ ನೃತ್ಯ, ಬಸಮ್ಮ ಜಾಲಿಹಾಳ ಅವರಿಂದ ಪಾರಿಜಾತ ಭಜನೆ, ಸಂಗೀತ, ಶರಣಮ್ಮ ಉಪಲದೊಡ್ಡಿ ಅವರಿಂದ ಸಂಪ್ರದಾಯ ಪದಗಳು, ಹನುಮಮ್ಮ ಬಸಪೂರ ಕೆ. ರಾಯಚೂರು ಅವರಿಂದ ಸೋಬಾನೆ ಪದಗಳು, ವಿಶ್ವನಾಥ ರಾಯಚೂರು ಅವರಿಂದ ಜನಪದ ಗೀತೆ, ನಟರಾಜ ರಾಯಚೂರು ಅವರಿಂದ ಸ್ಯಾಕ್ಸೋಫೋನ್, ದೇವರಾಜ ಡಿ. ಬೆಂಗಳೂರು ಅವರಿಂದ ಕಥಾ ಕೀರ್ತನ, ಲಕ್ಷ್ಮಣ ಕೊಪ್ಪರ ಅವರಿಂದ ಭಕ್ತಿಗೀತೆ, ನರಸಿಂಹಲು ಮರ್ಚೆಡ್ ಅವರಿಂದ ಹಂತಿಪದಗಳು, ಅಕ್ಷಯ ಜೋಷಿ ಲಿಂಗಸೂಗೂರು ಅವರಿಂದ ತಬಲಾವಾದನ ಸೋಲೋ, ಪ್ರಭಾ ಕೆ. ಕಂಬಾರ ಅವರಿಂದ ಸುಗಮ ಸಂಗೀತ, ಅನ್ನಪೂರ್ಣಬಾಯಿ ರಾಯಚೂರು ಅವರಿಂದ ಭಕ್ತಿಗೀತೆಗಳು ನಡೆಯಲಿವೆ.

# ಫೆ.5ರಂದು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಫೆ.5ರಂದು ಬೆಳಿಗ್ಗೆ 11ರಿಂದ ಸಂಜೆ 5ರವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.ಬೆಳಗ್ಗೆ 11 ರಿಂದ ಆರಂಭವಾಗುವ ಕಾರ್ಯಕ್ರಮದಲ್ಲಿ ಅಲ್ತಾಫ್ ರಂಗ ಮಿತ್ರ ರಾಯಚೂರು ಅವರಿಂದ ನಾಟಕ, ವಿ.ಎನ್. ಅಕ್ಕಿ ರಾಯಚೂರು ಅವರಿಂದ ಸಮುದಾಯ, ಪ್ರವೀಣ ರೆಡ್ಡಿ ಗುಂಜಹಳ್ಳಿ ಅವರಿಂದ ನಾಟಕ, ಲಕ್ಷ್ಮಣ ಮಂಡಲಗೇರಾ ರಾಯಚೂರು ಅವರಿಂದ ನಾಟಕ, ಹನುಮಂತಪ್ಪ ಜಾಲಿಬೆಂಚಿ ರಾಯಚೂರು ಅವರಿಂದ ನಾಟಕ, ಉರುಕುಂದಪ್ಪ ಅವರಿಂದ ರಂಗಭೂಮಿ, ಈರಣ್ಣ ಸೇನನಪಲ್ಲಿ ರಾಯಚೂರು ಅವರಿಂದ ನಾಟಕ, ಅಣವೀರಯ್ಯ ರಾಯಚೂರು ಅವರಿಂದ ನಾಟಕ, ರಂಗಸ್ವಾಮಿ ರಾಯಚೂರು ಅವರಿಂದ ಬಯಲಾಟ, ವೆಂಕಟ ನರಸಿಂಹಲು ರಾಯಚೂರು ಅವರಿಂದ ಪೌರಾಣಿಕ ನಾಟಕ, ರಂಗಚೇತನ ಸಾಂಸ್ಕೃತಿಕ ಕಲಾಸಂಘ ರಾಯಚೂರು ಅವರಿಂದ ನಾಟಕ, ದೇವಣ್ಣ ಎಲೆ ಬಿಚ್ಚಾಲಿ ಅವರಿಂದ ನಾಟಕ ನಡೆಯಲಿದೆ. ನಿರೂಪಣೆಯನ್ನು ವೈಶಂಪಾಯನ ಜೋಷಿ, ಪ್ರಸನ್ನ ಕುಮಾರ ರಾಯಚೂರು, ಶ್ರೀಕೃಷ್ಣ, ರಾಘವೇಂದ್ರ ರಾಯಚೂರು ಅವರು ನಡೆಸಿಕೊಡಲಿದ್ದಾರೆ.

# ಪ್ಲಾಸ್ಟಿಕ್ ಚೀಲಗಳನ್ನುತ್ಯಜಿಸಿರಿ. ಬಟ್ಟೆ ಚೀಲಗಳನ್ನು ಬಳಸಿರಿ. ಪರಿಸರ ಉಳಿಸಿರಿ.ಡಾ.ಬಿರಾದಾರ




- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಇತ್ತೀಚಿನ ದಿನಗಳಲ್ಲಿ ಜನಸಾಮಾನ್ಯರು ಹೆಚ್ಚಾಗಿ ಪ್ರತಿಯೊಂದು ವಸ್ತುಗಳನ್ನು ತರಲು ಪ್ಲಾಸ್ಟಿಕ್ ಚಿಲಗಳನ್ನ ಬಳಕೆ ಮಾಡುತ್ತಿದ್ದಾರೆ.ಈಗಾಗಲೇ ಸರ್ಕಾರ ಜಿಲ್ಲಾಡಳಿತ. ಮಹಾನಗರ ಪಾಲಿಕೆ ಪ್ಲಾಸ್ಟಿಕ್ ಬಳಕೆಯನ್ನು ಮತ್ತು ಚೀಲಗಳನ್ನ ನಿಷೇಧಿಸುವ ಮತ್ತು ಜಾಗೃತಿ ಮುಡುವ ನಿರಂತರ ಕಾರ್ಯಕ್ರಮಗಳನ್ನ ಆಯೋಜನೆಯನ್ನು ಮಾಡುತ್ತಲೇ ಇವೆ. ರಾಯಚೂರು ಜಿಲ್ಲಾ ಉತ್ಸವದ ಅಂಗವಾಗಿ ಬಿಜಿ ವಿಜಿ ಅವರು ಇಂದು ಪ್ರೌಢಶಾಲೆಗಳಲ್ಲಿರುವ ಇಕೋ ಕ್ಲಬ್ ಅಡಿಯಲ್ಲಿ ಪ್ಲಾಸ್ಟಿಕ್ ತ್ಯಜಿಸಿರಿ ಪರಿಸರ ಉಳಿಸಿರಿ ಎಂಬ ಅಭಿಯಾನವನ್ನು ಕೈಗೊಂಡಿದ್ದು. ಇಂದು ನಮ್ಮ ಸರ್ಕಾರಿ ಪ್ರೌಢಶಾಲೆ ,ಉಡ ಮಗಲ್ ಖಾನಾಪುರದಲ್ಲಿ ಈ ಒಂದು ಅಭಿಯಾನವನ್ನು ಪ್ರಾರಂಭ ಮಾಡಲಾಗಿದೆ. ಹಸರು ಉಸಿರು. ಕಾಡಿದ್ದರೆ ನಾಡು. ಅರಣ್ಯ ನಾಶ. ನಾಡು ವಿನಾಶ ಅದಕ್ಕಾಗಿ ಕಾಡು ಬೆಳೆಸಿ ನಾಡನ್ನು ಉಳಿಸಬೇಕಾಗಿದೆ.ಪ್ರಾಣಿ ಪಕ್ಷಿಗಳು ಇಂದು ಪ್ಲಾಸ್ಟಿಕ್ ಹೆಚ್ಚು ಬಳಕೆಯಿಂದ ಅವುಗಳ ಜೀವಕ್ಕೆ ಹಾನಿಯಾಗುವಂತ ದೃಶ್ಯಗಳನ್ನ ನಾವು ಟಿವಿ ಮಾಧ್ಯಮದಲ್ಲಿ ನೋಡುತ್ತೇವೆ. ಆದ್ದರಿಂದ ಪ್ರತಿಯೊಬ್ಬರೂ ಪ್ಲಾಸ್ಟಿಕ್ ಬಳಕೆಯನ್ನು ಮಾಡುವುದನ್ನು ಮತ್ತು ಆ ಚೀಲಗಳ ಬಳಸುವುದನ್ನ ನಾವು ನಿಲ್ಲಿಸಬೇಕು. ಪರಿಸರಸ್ನೇಹಿ ಇರುವಂತ ಬಟ್ಟೆ ಚೀಲಗಳನ್ನ ಬಳಸಬೇಕು.ಇದರ ಮೂಲಕ ಪರಿಸರವನ್ನ ಉಳಿಸಿ ಬೆಳೆಸುವ ಒಂದು ಕಾರ್ಯಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕು ನಮ್ಮ ಶಾಲೆಯ ಇಕೋ ಕ್ಲಬ್ ಸಂಸ್ಥೆಯ ಮುಖ್ಯಸ್ಥರಾದ ಶ್ರೀಮತಿ ಅನಿತಾ ಎನ್ ಇವರ ನೇತೃತ್ವದಲ್ಲಿ ಇಂದು ಈ ಕಾರ್ಯಕ್ರಮ ಆಯೋಜನೆಯನ್ನು ಮಾಡಲಾಗಿದೆ ಉತ್ತಮವಾದ ಕಾರ್ಯವನ್ನು ಅವರು ಮಾಡಿದ್ದಾರೆ. ಅವರಿಗೆ ವಿಶೇಷವಾಗಿ ಮುಖ್ಯ ಗುರುಗಳ ಶಿಕ್ಷಕರ ವಿದ್ಯಾರ್ಥಿಗಳ ಪರವಾಗಿ ವಂದನೆಗಳನ್ನ ತಿಳಿಸಲಾಗುತ್ತದೆ.

ವಿದ್ಯಾರ್ಥಿಗಳು ಪರಿಸರದ ಬಗ್ಗೆ ಗಿಡಮರಗಳ ಬಗ್ಗೆ ಮತ್ತು ಉತ್ತಮ ಪರಿಸರವನ್ನ ನಿರ್ವಹಣೆ ನಿರ್ಮಾಣ ಮಾಡುವುದರ ಬಗ್ಗೆ ಕಾಳಜಿಯನ್ನು ವಹಿಸಿಕೊಳ್ಳಬೇಕು ಎಂದು ದಿನಾಂಕ 4.2.2026ರಂದು ರಾಯಚೂರು ತಾಲೂಕಿನ ಸರ್ಕಾರಿ ಪ್ರೌಢಶಾಲೆ , ಉಡಮಗಲ್ ಖಾನಾಪುರದಲ್ಲಿ ಜಿಲ್ಲಾ ಉತ್ಸವದ ಅಂಗವಾಗಿ ಬಿಜಿವಿಜಿ ಸಹಕಾರದೊಂದಿಗೆ ಪ್ಲಾಸ್ಟಿಕ್ ತ್ಯಜಿಸಿ ಪರಿಸರ ಉಳಿಸಿ ಎಂಬ ಅಭಿಯಾನದಲ್ಲಿ ಶಾಲಾ ಕನ್ನಡ ಕಲಾ ಶಿಕ್ಷಕರು ಮತ್ತು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಂ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕರಾದ ಡಾ. ದಂಡಪ್ಪ ಬಿರಾದಾರ್ ಪರಿಸರ ಸ್ನೇಹಿ ಬಟ್ಟೆ ಚೀಲಗಳನ್ನ ವಿತರಣೆ ಮಾಡಿ ಮಾತನಾಡಿದರು. ಶಾಲೆಯ ಇಕೋ ಕ್ಲಬ್ ಮುಖ್ಯಸ್ಥರಾದ ಶ್ರೀಮತಿ ಅನಿತಾ ಅವರು ಕಾರ್ಯಕ್ರಮದ ಹಿನ್ನೆಲೆ ಮತ್ತು ಪರಿಸರ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳು ಮಾಡಬೇಕಾದ ಕಾರ್ಯಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿ, ಸಕಲರನ್ನು ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಶಾಲಾ ಮುಖ್ಯ ಗುರುಗಳಾದ ವೀರೇಶ್ ಅಂಗಡಿ. ಎಸ್ ಡಿ ಎಂ ಸಿ ಯ ಅಧ್ಯಕ್ಷರಾದ ಖಾನಾಪುರದಯ್ಯ. ಶಾಲಾ ಶಿಕ್ಷಕ ವೃಂದ ಶ್ರೀಮತಿ ನಫೀಜಾ ಅಂಜುಮ. ವೀಣಾ ಕುಲಕರ್ಣಿ ಸಾವಿತ್ರಿ.ಸರಸ್ವತಿ. ಪಾಂಡುರಂಗ ದೇಸಾಯಿ ಹಾಗೂ ಶಾಲಾ ಸಿಬ್ಬಂದಿ ವಿವಿಧ ತರಗತಿಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.ನಾಂದಿ ಫೌಂಡೇಶನ್ ಸುಚಿತ್ರಾ. ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಡಾ. ದಂಡಪ್ಪ ಬಿರಾದಾರ್ ಪರಿ ಸರ ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಗೋಯಿಂಗ್ ಟು ಸ್ಕೂಲ್ ಸಂಸ್ಥೆಯ ತಿರುಮಲ ರೆಡ್ಡಿ ಕೊನೆಯಲ್ಲಿ ವಂದಿಸಿದರು.

# ಸಮಾವೇಶಕ್ಕೆ ಬರುವ ಜನರಿಗೆ ಶ್ರೀ ಗವಿಮಠದಿಂದ ಪ್ರಸಾದ ದಾಸೋಹ: ಬೆಟ್ಟದೂರು

- **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**




100ನೇ ದಿನದ ಹೋರಾಟದ ವಿಶೇಷ ಸಮಾವೇಶ ಮುಂದಿನ ಹೋರಾಟಕ್ಕೆ ಗಟ್ಟಿ ಹೆಜ್ಜೆ ಆಗಬೇಕು, ಇಲ್ಲಿನ ಕಾರ್ಖಾನೆಗಳಿಗೆ ನಾವು ದಶಕಗಳ ಕಾಲ ಸಹಕಾರ ಕೊಟ್ಟಿದ್ದೇವೆ, ಅವರಿಗೆ ಮಾನವೀಯತೆ ಇಲ್ಲದಾದಾಗ ಬಿದಿಗೆ ಬಂದಿದ್ದೇವೆ, ಈ ಹೋರಾಟಕ್ಕೆ ಎಲ್ಲರೂ ಕೈಜೋಡಿಸಿ ಎಂದು ಮಾಜಿ ನಗರಸಭೆ ಅಧ್ಯಕ್ಷ ಚಂದ್ರಶೇಖರ ಕವಲೂರ ಹೇಳಿದರು.

ಅವರು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತ ರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ಮೂಲಕ ಹಮ್ಮಿಕೊಂಡಿರುವ ಬಲ್ಡೋಟಾ, ಕಿರ್ಲೋಸ್ಕರ್, ಕಲ್ಯಾಣಿ, ಮುಕುಂದ್ ಸುಮಿ, ಎಕ್ಸ್ ಇಂಡಿಯಾ, ತನುಷ್, ದೃವದೇಶ ಸೇರಿದಂತೆ ಅನೇಕ ಪರಿಸರ ಮಾರಕ ಕಾರ್ಖಾನೆ ವಿರೋಧಿ ಅನಿರ್ದಿಷ್ಟವಾದಿ ಧರಣಿ ಸತ್ಯಾಗ್ರಹ 96ನೇ ದಿನದ ಹೋರಾಟಕ್ಕೆ ಪೂರಕವಾಗಿ ನಡೆದ ವಿಶೇಷ ಜಂಟಿ ಕ್ರಿಯಾ ವೇದಿಕೆ ಸಭೆಯಲ್ಲಿ ಮಾತನಾಡಿದರು.

ಇದೇ ಫೆಬ್ರವರಿ 7ರಂದು ಕಾರ್ಖಾನೆ ವಿರೋಧಿ ಹೋರಾಟಕ್ಕೆ 100ನೇ ದಿನ. ಅಂದು ನಡೆಸಬೇಕಿದ್ದ ಮೆರವಣಿಗೆಯನ್ನು ಮುಂದೂಡಲಾಗಿದ್ದು, ಮುಂದೆ ದೊಡ್ಡ ಪ್ರಮಾಣದಲ್ಲಿ ಮೆರವಣಿಗೆ ಸಂಘಟಿಸಲಾಗುವುದು. ಪ್ರಸ್ತುತ 100ನೇ ದಿನ ಬೃಹತ್ ಮಟ್ಟದ ಸಮಾವೇಶವನ್ನು ನಗರದ ಧರಣಿ ಸ್ಥಳದಲ್ಲಿ ನಡೆಸುವ ಮೂಲಕ ಮುಂದಿನ ಹೋರಾಟದ ನಿರ್ಣಯ ಕೈಗೊಳ್ಳಲು ಸಾವಿರಾರು ಸಂಖ್ಯೆಯಲ್ಲಿ ಭಾದಿತ ಹಳ್ಳಿಯ ಮತ್ತು ನಗರದ ಜನರು ಈ ಹೋರಾಟದಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು ಮಾತನಾಡಿ, ಅಂದು ಬೆಳಗ್ಗೆ ಉಪಹಾರ ಮತ್ತು ಮಧ್ಯಾಹ್ನದ ಪ್ರಸಾದದ ವ್ಯವಸ್ಥೆಯನ್ನು ಶ್ರೀ ಗವಿಮಠದಿಂದಲೇ ಮಾಡಲಾಗಿದೆ, ಗವಿಶ್ರೀಗಳ ನೇತೃತ್ವವಹಿಸಿದ್ದ ಹೋರಾಟವನ್ನೇ ಮುಂದುವರಿಸಿದ್ದು, ನಿಶ್ಚಿತವಾಗಿ ಬಲ್ಡೋಟ ಕಾರ್ಖಾನೆ ಇಲ್ಲಿಂದ ತೊಲಗುತ್ತದೆ. 20 ಗ್ರಾಮಗಳ ಐವತ್ತು ಸಾವಿರ ಜನರ ಜೀವ, ಆರೋಗ್ಯ ಉಳಿಸಿಕೊಳ್ಳಲು ಇನ್ನಷ್ಟು ತೀವ್ರತರವಾದ ಹೋರಾಟಕ್ಕೆ ಮುಂದಾಗೋಣ ಎಂದರು.

ಸಂಚಾಲಕರಾದ ಮಲ್ಲಿಕಾರ್ಜುನ ಬಿ. ಗೋನಾಳ, ಮಂಜುನಾಥ ಜಿ. ಗೊಂಡಬಾಳ, ಡಾ. ಮಂಜುನಾಥ ಸಜ್ಜನ್, ಬಿ.ಜಿ ಕರಿಗಾರ್, ಶಿವಕುಮಾರ ಕುಕನೂರ, ಶರಣು ಶೆಟ್ಟರ್, ಮಂಜುನಾಥ ಅಂಗಡಿ, ಸಂತೋಷ ದೇಶಪಾಂಡೆ, ಸುಭಾನ್ ನೀರಲಗಿ, ಶರಣು ಡೊಳ್ಳಿನ, ಮಹೇಶ ಮನ್ನಾಪುರ, ಹುಲಗಪ್ಪ ಕಟ್ಟಿಮನಿ, ಜಿ.ಬಿ. ಪಾಟೀಲ್, ಎ.ಎಂ. ಮದರಿ, ಎಸ್.ಬಿ.ರಾಜೂರು, ರಾಜಶೇಖರ ಏಳುಬಾವಿ ರಾಜು ಬಾಕಳೆ, ಶರಣು ಶೆಟ್ಟರ್,ಮಹೇಶ ಮನ್ನಾಪೂರ, ಶಿವಪ್ಪ ಜಲ್ಲಿ, ಮಹಾದೇವಪ್ಪ ಮಾವಿನಮಡು, ನೇತ್ರಾವತಿ ಇದ್ದರು. ಸಭೆಯ ನಂತರ ಮತ್ತೆ ಧರಣಿ ಮುಂದುವರಿಯಿತು. ರುಕ್ಸಾನಾ ಎಂ.ಕೆ,ಬಸವರಾಜಪ್ಪ ಶೆಟ್ಟರ್, ಎಲ್.ಎಫ್. ಪಾಟೀಲ್, ಮೈತ್ರಾ, ಬಸವರಾಜ ಮ್ಯಾಗಳಮನಿ, ಶರಣು ಗಡ್ಡಿ, ಕಾಶಪ್ಪ ಚಲುವಾದಿ ಅನೇಕರು ಜೊತೆಯಾದರು.

# ಯಾವುದೇ ಅವ್ಯವಸ್ಥೆ ಉಂಟಾಗದಂತೆ ಅಚ್ಚುಕಟ್ಟು ವ್ಯವಸ್ಥೆ ಮಾಡಿ: ಡಾ.ಸುರೇಶ ಬಿ.ಇಟ್ನಾಳ



- **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**

ಫೆಬ್ರವರಿ 7 ಮತ್ತು 8 ರಂದು ಕಾರಟಗಿಯಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದಲ್ಲಿ ರಾಜ್ಯಾದ್ಯಂತ ನೂರಾರು ಮಕ್ಕಳು ಭಾಗವಹಿಸಲಿದ್ದು, ಅವರಿಗೆ ಯಾವುದೇ ವಿಷಯಗಳಲ್ಲಿ ಅವ್ಯವಸ್ಥೆ ಉಂಟಾಗದಂತೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ, ಅನುಕೂಲ ಮಾಡಿಕೊಡಿ ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಹೇಳಿದರು.

ಬುಧವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆಯಿಂದ ಆಯೋಜಿಸಲಾಗಿರುವ 2025–26ನೇ ಸಾಲಿನ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದ ಅಂಗವಾಗಿ ನಡೆದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರಟಗಿಯ ಕೆ.ಪಿ.ಎಸ್ ಪ್ರೌಢಶಾಲೆ ವಿಭಾಗದಲ್ಲಿ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದ ಅಂಗವಾಗಿ ವಿವಿಧ ಸ್ಪರ್ಧೆಗಳು ನಡೆಯಲಿವೆ. ಸ್ಪರ್ಧೆಗಳಲ್ಲಿ ಭಾಗವಹಿಸಲು ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಿಂದ 1295 ವಿದ್ಯಾರ್ಥಿಗಳು ಆಗಮಿಸಲಿದ್ದಾರೆ. ರೈಲು ಹಾಗೂ ಬಸ್‌ಗಳ ಮೂಲಕ ಆಗಮಿಸುವ ವಿದ್ಯಾರ್ಥಿಗಳು, ಶಿಕ್ಷಕರಿಗೆ ಕಾರಟಗಿ ಹಾಗೂ ಕಾರ್ಯಕ್ರಮದ ವೇದಿಕೆ, ವಸತಿ ನಿಲಯಗಳನ್ನು ತಲುಪಲು ಅನುಕೂಲವಾಗುಂತೆ ಹೆಲ್ಪ್‌ಡೆಸ್ಕ್ ಸ್ಥಾಪಿಸಿ, ಮಾರ್ಗಸೂಚಕಗಳನ್ನು ಒದಗಿಸಿ. ವಿದ್ಯಾರ್ಥಿಗಳು ತಂಗುವ ವಸತಿ ನಿಲಯಗಳಲ್ಲಿ ಸ್ವಚ್ಛತೆ, ಕುಡಿಯುವ ನೀರು, ಬಿಸಿನೀರಿನ ವ್ಯವಸ್ಥೆ ಕಲ್ಪಿಸಿ. ಗುಣಮಟ್ಟದ ಹಾಗೂ ಶುದ್ಧ ಆಹಾರವನ್ನು ಒದಗಿಸಿ. ವಸತಿ ನಿಲಯಗಳಿಂದ ಕಾರ್ಯಕ್ರಮ ಸ್ಥಳ ಹಾಗೂ ಊಟದ ಸ್ಥಳಕ್ಕೆ ತೆರಳಲು ಬಸ್ ವ್ಯವಸ್ಥೆ ಕಲ್ಪಿಸಿ. ಬಸ್‌ಗಳು ಸುವ್ಯವಸ್ಥೆಯಲ್ಲಿರಬೇಕು. ಸಾರಿಗೆ ಅಧಿಕಾರಿಗಳು ಬಸ್‌ಗಳನ್ನು ಪರಿಶೀಲಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ವಿದ್ಯಾರ್ಥಿಗಳು ತಂಗುವ ವಸತಿ ನಿಲಯಗಳಲ್ಲಿ ಕಡ್ಡಾಯವಾಗಿ ಇಲಾಖೆಯ ಅಧಿಕಾರಿಗಳು ಹಾಜರಿರಬೇಕು. ಬಸ್‌ಗಳಲ್ಲಿ, ವಸತಿ ನಿಲಯಗಳಲ್ಲಿ ಪ್ರಥಮ ಚಿಕಿತ್ಸಾ ಕಿಟ್ ಕಡ್ಡಾಯ ಇರಬೇಕು. ಕಾರ್ಯಕ್ರಮ ಸ್ಥಳಗಳಲ್ಲಿ ವೈದ್ಯರ ತಂಡವನ್ನು ಆರೋಗ್ಯ ಇಲಾಖೆಯಿಂದ ಒದಗಿಸಬೇಕು. ಸ್ಥಳೀಯ ಸಂಸ್ಥೆಗಳು ಕಾರ್ಯಕ್ರಮ ಸ್ಥಳದ ಸ್ವಚ್ಛತೆ, ಶೌಚಾಲಯಗಳ ಸ್ಥಾಪನೆಗೆ ಕ್ರಮ ವಹಿಸಬೇಕು. ಕಡ್ಡಾಯವಾಗಿ ಶಿಷ್ಟಾಚಾರ ಪಾಲಿಸಬೇಕು. ಇಲಾಖೆಯ ಅಧಿಕಾರಿಗಳು ಜವಾಬ್ದಾರಿಯಿಂದ ಮುತುವರ್ಜಿ ವಹಿಸಿ ಕರ್ತವ್ಯ ನಿರ್ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಿಇಒ ವರ್ಣಿತ್ ನೇಗಿ ಮಾತನಾಡಿ, ಯಾವ ಶಾಲೆಯಲ್ಲಿ ಯಾವ ಸ್ಪರ್ಧೆ ನಡೆಯಲಿದೆ ಎಂಬ ಮಾಹಿತಿಯನ್ನು ಮುಂಚಿತವಾಗಿ ವಿದ್ಯಾರ್ಥಿಗಳಿಗೆ ಒದಗಿಸಬೇಕು. ಇದರಿಂದ ಅನಗತ್ಯ ಗೊಂದಲ ತಪ್ಪುತ್ತದೆ. ವಿದ್ಯಾರ್ಥಿಗಳಿಗೆ ನೀಡುವ ಊಟ, ಉಪಹಾರ ಸುರಕ್ಷಿತ ಹಾಗೂ ಶುದ್ಧವಾಗಿರಬೇಕು. ಎಲ್ಲ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ ಅವರು ಕಾರ್ಯಕ್ರಮದ ಕುರಿತು ವಿವರಗಳನ್ನು ನೀಡಿದರು.

ಸಭೆಯಲ್ಲಿ ಕಾರಟಗಿ ತಹಶೀಲ್ದಾರ ಕುಮಾರಸ್ವಾಮಿ, ಇಒ ಲಕ್ಷ್ಮೀದೇವಿ, ಕ್ಷೇತ್ರ ಶಿಕ್ಷಣಾಧಿಕಾರಿ ನಟೇಶ, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಎ.ಬಸವರಾಜ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಉತ್ಸವ: ಹೆಚ್ಚುವರಿ ಬಸ್

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಜಿಲ್ಲೆಯಲ್ಲಿ ಫೆ.05 ರಿಂದ 07ರವರೆಗೆ ನಡೆಯಲಿರುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ ಕಾರ್ಯಕ್ರಮದಲ್ಲಿ ಬೇರೆ ಬೇರೆ ಜಿಲ್ಲೆಗಳಿಂದ ಹಾಗೂ ತಾಲೂಕುಗಳಿಂದ ಕಲಾವಿದರು ಹಾಗೂ ಸಾರ್ವಜನಿಕ ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ವಿಭಾಗದ ವ್ಯಾಪ್ತಿಯ ಎಲ್ಲಾ ಘಟಕಗಳಿಂದ ಹೆಚ್ಚುವರಿ ವಾಹನಗಳು ಕಾರ್ಯಾಚರಿಸಲು ಉದ್ದೇಶಿಸಲಾಗಿದ್ದು ಸಾರ್ವಜನಿಕರು ಸದುಪಯೋಗಪಡೆದುಕೊಳ್ಳುವಂತ ಕೋರಲಾಗಿದೆ.ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಘಟಕಗಳಿಂದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಜಿಲ್ಲೆಯಿಂದ ತಾಲೂಕಿಗೆ ಹಾಗೂ ತಾಲೂಕಿನಿಂದ ಜಿಲ್ಲೆಗೆ ಸ್ತ್ರೀಯರಿಗೆ ಶಕ್ತಿ ಯೋಜನೆ ಅಡಿಯಲ್ಲಿ ಟಿಕೇಟ್ ವಿಧಿಸಲಾಗುವುದು ಹಾಗೂ ಪುರಷರಿಗೆ ಪ್ರಯಾಣದ ದರ ಮೇಲೆ ಹೆಚ್ಚಿನ ಬಸ್ಸುಗಳು ಕಾರ್ಯಾಚರಣೆ ಮಾಡಲಾಗುವುದು. ಅಲ್ಲದೇ ನಗರದಲ್ಲಿ ಸಹ ನಗರ ಸಾರಿಗೆ ವಾಹನಗಳು ಸ್ತ್ರೀಯರಿಗೆ ಶಕ್ತಿ ಯೋಜನೆ ಅಡಿಯಲ್ಲಿ ಟಿಕೆಟ್ ವಿಧಿಸಲಾಗುವುದು ಹಾಗೂ ಪುರಷರಿಗೆ ಪ್ರಯಾಣ ದರದ ಮೇಲೆ ಹೆಚ್ಚಿನ ಬಸ್ಸುಗಳು ಕಾರ್ಯಾಚರಣೆ ಮಾಡಲಾಗುವುದು. ರಾಯಚೂರು ಗ್ರಾಮೀಣ ಪ್ರದೇಶಕ್ಕೆ ಹಾಗೂ ಬೇರೆ ತಾಲೂಕುಗಳಿಗೆ ತೆರಳುವ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಬೆಳಿಗ್ಗೆ ಯಿಂದ ಸಂಜೆವರೆಗೆ ಗೇಟ್–2 ರಲ್ಲಿ ನಿರಂತರವಾಗಿ ವಾಹನಗಳು ಕಾರ್ಯಾಚರಿಸಲಾಗುವುದು. ಅಲ್ಲದೆ ರಾತ್ರಿ ಸಮಯದಲ್ಲಿ ನಿಗದಿತ ಪಾರ್ಕಿಗ್ ಸ್ಥಳದಿಂದ ಸಾರಿಗೆ ವಾಹನಗಳು ಕಾರ್ಯಾಚರಣೆಗೊಳಿಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಘಟಕ ವ್ಯವಸ್ಥಾಪಕರ ದೂರವಾಣಿ ಸಂಖ್ಯೆ: 1ನೇ ಘಟಕ ರಾಯಚೂರು: 7760992363, 2ನೇ ಘಟಕ ರಾಯಚೂರು: 7760992364, 3ನೇ ಘಟಕ ರಾಯಚೂರು: 7619351087 ಹಾಗೂ ಕೇಂದ್ರ ಬಸ್ ನಿಲ್ದಾಣಾಧಿಕಾರಿ ರಾಯಚೂರು: 6366976325, 7760992370ಗೆ ಸಂಪರ್ಕ ಮಾಡಬಹುದಾಗಿದೆ.ರಾಯಚೂರು ನಗರದಲ್ಲಿ ನಗರ ಸಾರಿಗೆ ಮತ್ತು ಕಲಾವಿದರು, ಮಾಧ್ಯಮ ಮುಂತದವರಿಗೆ ಬಸ್ಸಿನ ವ್ಯವಸ್ಥೆ ನೋಡಿಕೊಳ್ಳಲು ನೋಡಲ್ ಅಧಿಕಾರಿಗಳಾದ ಜಿಲ್ಲಾ ಉದ್ಯೋಗಾಧಿಕಾರಿ ನವೀನ ಕುಮಾರ: 8073610442, ಮೋಟಾರ್ ವಾಹನ ನಿರೀಕ್ಷಕರು ಶರಣ ಬಸಪ್ಪ ಮೊಬೈಲ್ ಸಂಖ್ಯೆ: 9113501545, ಸಹಾಯಕ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಗ್ರಾಣಿ ಕಲ್ಲು, ಉಸುಕಿನ ಮೂಟೆ ಎತ್ತುವ ಸ್ಪರ್ಧೆ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಎಡೆದೊರೆ ನಾಡು ರಾಯಚೂರು ಉತ್ಸವದ ಕಾರ್ಯಕ್ರಮ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯ ಇತರೆ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಫೆ.6ರ ಬೆಳಿಗ್ಗೆ 11ರಿಂದ ಮಧ್ಯಾಹ್ನ 2ರವರೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಸಂಗ್ರಾಣಿ ಕಲ್ಲು, ಉಸುಕಿನ ಮೂಟೆ ಎತ್ತುವುದು ಹಾಗೂ ಕುಸ್ತಿ ಕ್ರೀಡೆಗಳ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ಭಾಗವಹಿಸುವ ಆಸಕ್ತ ಕ್ರೀಡಾಪಟುಗಳು ಸಂಘಟಿಕರಾದ ಮಹಾದೇವ ಮೊಬೈಲ್ ಸಂಖ್ಯೆ: 9900188545, ಅಮಿತ್ ಸಿ.ಜೆ.: 6360828618, ಹನುಮಂತ: 7090307353 ಇವರನ್ನು ಸಂಪರ್ಕಿಸಿ ಬೆಳಿಗ್ಗೆ 9 ಗಂಟೆಯೊಳಗೆ ಸಂಘಟಿಕರಿಗೆ ವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ.ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅವಕಾಶಕ್ಕೆ ಸೂಚನೆ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಫೆ.05, 06, ಹಾಗೂ 07ರಂದು ನಡೆಯಲಿರುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದಲ್ಲಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರು ತಮ್ಮ ಕುಟುಂಬದ ಸಮೇತ ಭಾಗವಹಿಸಲು ಅನುಕೂಲ ಮಾಡಿಕೊಡಬೇಕೆಂದು ಕಾರ್ಮಿಕ ಸಂಘಟನೆಗಳು/ಕಾರ್ಮಿಕರು ಜಿಲ್ಲಾಡಳಿತವನ್ನು ಮತ್ತು ಕಾರ್ಮಿಕ ಇಲಾಖೆಯನ್ನು ಕೋರಿಕೊಂಡ ಹಿನ್ನಲೆಯಲ್ಲಿ ಉತ್ಸವದ ದಿನಾಂಕಗಳಂದು ಕಾರ್ಮಿಕರಿಗೆ ಬೆಳಿಗ್ಗೆ 01 ಗಂಟೆ ಮುಂಚಿತವಾಗಿ ಹಾಗೂ ಸಂಜೆ 01 ಗಂಟೆ ಕಾಲ ಮುಂಚಿತವಾಗಿ ಕೆಲಸದಿಂದ ತೆರಳಲು ಅವಕಾಶ ಮಾಡಿಕೊಡುವ ಮೂಲಕ ಉತ್ಸವವನ್ನು ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಸ್ವಯಂ ಪ್ರೇರಣೆಯಿಂದ ಉಚಿತವಾಗಿ 01 ಗಂಟೆ ಕಾಲ ಈ ಉತ್ಸವವನ್ನು ಸಂದರ್ಶಿಸಲು ಮಾಲೀಕರು ಅವಕಾಶ ಮಾಡಿಕೊಡಬೇಕೆಂದು ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಇಲ್ಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ರಾಯಚೂರು ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಚಿಸಿದ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿಗಳಿಗೆ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ರಾಯಚೂರಿನಲ್ಲಿ 2026ರ ಫೆಬ್ರವರಿ 2ನೇ ವಾರದಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಆಸಕ್ತ ಪರಿಶಿಷ್ಟ ಜಾತಿ ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು, ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು. 8ನೇ ತರಗತಿ ಯಿಂದ ಎಸ್.ಎಸ್.ಎಲ್.ಸಿ ವರಗೆ ಶಿಕ್ಷಣ ಪಡೆದಿಬೇಕು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವವರು ದಿನಾಂಕ: 08–02–2026 ರೊಳಗಾಗಿ ಮೊಬೈಲ್ ಸಂಖ್ಯೆ: 9986600631, 9986332736ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಅಥವಾ ಜಂಟಿ ನಿರ್ದೇಶಕರು, ಸಿಡಾಕ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ನವೀನ ಆಸ್ಪತ್ರೆ ಪಕ್ಕದಲ್ಲಿ ರಾಯಚೂರು ಇಲ್ಲಿಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 142ನೇ ಪಿಎಲ್‌ಐ ದಿನಾಚರಣೆ ಅಂಚೆ ಇಲಾಖೆಯಿಂದ ಜನಜಾಗೃತಿ ಜಾಥಾ



- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

142ನೇ ಪಿಎಲ್‌ಐ (ಪೋಸ್ಟಲ್ ಲೈಫ್ ಇನ್ಶುರನ್ಸ್) ದಿನಾಚರಣೆ ಪ್ರಯುಕ್ತ ಬಾಗಲಕೋಟೆ ಪ್ರಧಾನ ಅಂಚೆ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಯಿಂದ ನಗರದಲ್ಲಿ ಜನಜಾಗೃತಿ ಜಾಥಾ ನಡೆಯಿತು. ಜಾಥಾಕ್ಕೆ ಪ್ರಧಾನ ಅಂಚೆ ಕಚೇರಿ ಅಧೀಕ್ಷಕ ಮೋಹನ್ ಮಾಳೋದೆ ಚಾಲನೆ ನೀಡಿ ಮಾತನಾಡಿ, ಭಾರತೀಯ ಅಂಚೆ ಇಲಾಖೆಯ ಜೀವವಿಮಾ ಯೋಜನೆಯಾದ ಪೋಸ್ಟಲ್ ಲೈಫ್ ಇನ್ಶುರನ್ಸ್ ಕಡಿಮೆ ಪ್ರೀಮಿಯಂ, ಹೆಚ್ಚಿನ ಬೋನಸ್ ಮತ್ತು ಸರಕಾರದ ಗ್ಯಾರಂಟಿಯ ಕಾರಣದಿಂದ ಜನರಲ್ಲಿ ಹೆಚ್ಚಿನ ವಿಶ್ವಾಸ ಗಳಿಸಿದೆ ಎಂದರು. ಹೆಚ್ಚಿನ ಪ್ರೀಮಿಯಂ ಹಾಗೂ ಕಡಿಮೆ ಲಾಭದಿಂದ ಬೇಸತ್ತಿರುವವರು ಇದೀಗ ಸರಕಾರಿ ಯೋಜನೆಗಳತ್ತ ಮುಖ ಮಾಡುತ್ತಿದ್ದಾರೆ. ಕಡಿಮೆ ವೆಚ್ಚದಲ್ಲಿ ಹೆಚ್ಚು ಲಾಭ ದೊರಕುವುದು ಪಿಎಲ್‌ಐ ಯೋಜನೆಯ ಪ್ರಮುಖ ಆಕರ್ಷಣೆಯಾಗಿದೆ ಎಂದು ತಿಳಿಸಿದರು. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಈ ಯೋಜನೆಯ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಅಂಚೆ ಇಲಾಖೆ ವಿಶೇಷ ಪ್ರಚಾರ ಕಾರ್ಯಕ್ರಮ ಹಮ್ಮಿಕೊಂಡಿದೆ. ಅನೇಕರು ಇಂತಹ ಲಾಭದಾಯಕ ಯೋಜನೆಗಳ ಬಗ್ಗೆ ಇನ್ನೂ ತಿಳಿದಿಲ್ಲದಿರುವ ಹಿನ್ನೆಲೆಯಲ್ಲಿ ಜಾಗೃತಿ ಕಾರ್ಯಕ್ರಮಗಳು ಅಗತ್ಯವಿವೆ ಎಂದರು. ನಂತರ ಅಂಚೆ ಅಧಿಕಾರಿಗಳು ಮತ್ತು ಸಿಬ್ಬಂದಿ ಪ್ರಧಾನ ಅಂಚೆ ಕಚೇರಿಯಿಂದ ರೈಲು ನಿಲ್ದಾಣ, ಬಸ್ ನಿಲ್ದಾಣ ಮಾರ್ಗವಾಗಿ ಬಸವೇಶ್ವರ ವೃತ್ತದವರೆಗೆ ಜಾಥಾ ನಡೆಸಿದರು, ವೃತ್ತದಲ್ಲಿ ಪಿಎಲ್‌ಐ ಯೋಜನೆಯ ಕುರಿತ ಜಾಗೃತಿಯ ಘೋಷಣೆ ಕೂಗಿ ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಹಾಯಕ ಅಂಚೆ ಅಧೀಕ್ಷಕ ಸಿ.ಐ. ಕಾಂಬಳಿ, ಅಧಿಕಾರಿಗಳಾದ ರವೀಂದ್ರ ನಾಯಕ, ಪೋಸ್ಟ್‌ಮಾಸ್ಟರ್ ಎಸ್.ಬಿ. ಮೇಲಿನಮನಿ, ಡಿಒಪಿಎಲ್‌ಐ ಹನಮಂತ ಹೂಗಾರ ಸೇರಿದಂತೆ ನಗರದ ವಿವಿಧ ಅಂಚೆ ಶಾಖೆಗಳ ಸಿಬ್ಬಂದಿ ಪಾಲ್ಗೊಂಡಿದ್ದರು.

# ಸಂಗೀತ ಪ್ರೇಮಿಗಳ ತಲೆದೂಗಿಸಿದ ಸ್ವರ ಸಂಗೀತ ವೈಭವ



- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ನಗರದ ಗುರು ಗಾನಯೋಗಿ ಪಂಚಾಕ್ಷರಿ ಕೃಪಾಪೋಷಿತ ಶಾರದಾ ಸಂಗೀತ ವಿದ್ಯಾಲಯದ ಶಾಲಾ ವಾರ್ಷಿಕೋತ್ಸವ ಹಾಗೂ ಪಂಡಿತ ಪಂಚಾಕ್ಷರಿ ಗವಾಯಿಗಳ ಹಾಗೂ ಡಾ. ಪಂಡಿತ್ ಪುಟ್ಟರಾಜ ಕವಿ ಗವಾಯಿಗಳ ಮತ್ತು ಪರಮಪೂಜ್ಯ ಶ್ರೀ ಗಂಗಾಧರ ಮಹಾಸ್ವಾಮಿಗಳ ಪುಣ್ಯಸ್ಮರಣೋತ್ಸವ ಪ್ರಯುಕ್ತ ಸ್ವರ ನಿನಾದ ಸಂಗೀತ ವೈಭವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕುಮಾರ್ ಮರಡೂರು, ವಿದುಷಿ ವಾಣಿ ಮರಡೂರ, ಶಿವಾನಂದ ಸಾಲಿಮಠ ಅವರ ಗಾಯನ ನೆರೆದ ಸಂಗೀತ ಆಸಕ್ತರನ್ನು ಮಂತ್ರ ಮುಗ್ಧರನ್ನಾಗಿಸಿತು. ಅಂತರಾಷ್ಟ್ರೀಯ ತಬಲಾ ವಾದಕ ಹಾಗೂ ಆಕಾಶವಾಣಿ ಧಾರವಾಡ ನಿಲಯದ ಕಲಾವಿದ ಪಂ. ಶಾಂತಲಿಂಗ ದೇಸಾಯಿ ಕಲ್ಲೂರ ತಬಲಾ ಸಾತ್ ನೀಡಿದರು.

ಸಂಗೀತ ವೈಭವಕ್ಕೂ ಮುಂಚೆ ನಡೆದ ಉದ್ಘಾಟನೆ ಕಾರ್ಯಕ್ರಮದಲ್ಲಿ ಗದ್ದನಗಿರಿಯ ವಿಶ್ವನಾಥ ಮಹಾಸ್ವಾಮಿಗಳು, ಭಾಸ್ಕರ ಮಹಾಸ್ವಾಮಿಗಳು, ಮುರನಾಳ ಜಗನ್ನಾಥ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಮಾಜಿ ಶಾಸಕ ವೀರಣ್ಣ ಚರಂತಿಮಠ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಬಾಗಲಕೋಟೆ ಸಂಗೀತದ ತವರೂರಾಗಿದ್ದು ಸಾಕಷ್ಟು ಕಲಾವಿದರು ರಾಜ್ಯ ರಾಷ್ಟ್ರಮಟ್ಟದಲ್ಲಿ ಹೆಸರು ವಾಸಿಯಾಗಿದ್ದಾರೆ. ಹಿಂದೂಸ್ಥಾನಿ ಸಂಗೀತವನ್ನು ಉಳಿಸಿ ಬೆಳಸಬೇಕಾಗಿದೆ ಎಂದರು.

ಅಧ್ಯಕ್ಷತೆಯನ್ನು ಹಿರಿಯ ಸಂಗೀತ ಕಲಾವಿದ ಪಂ. ಎಚ್.ಆರ್. ಬಡಿಗೇರ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿದ್ದ ಕರ್ನಾಟಕ ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿ ಪುರಸ್ಕೃತ ಪಂ. ಸೋಮನಾಥ, ಗುರುಬಸವ ಸೂಳಿಬಾವಿ, ರಾಜು ನಾಯ್ಕರ ಸಂಗೀತ ವಿದ್ಯಾಲಯದ ಕಾರ್ಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಪಂ. ಅಶೋಕ ಬಡಿಗೇರ ಸಾರಥ್ಯದಲ್ಲಿ ಜರುಗಿದ ಸ್ವರ ನಿನಾದ ಸಂಗೀತ ಕಾರ್ಯಕ್ರಮ ಅತ್ಯುತ್ತಮವಾಗಿ ಮೂಡಿಬಂತು. ರಮೇಶ ಬಡಿಗೇರ, ವಸಂತ ಬಡಿಗೇರ, ಚಿದಾನಂದ ಬಡಿಗೇರ, ಶಿವಾನಂದ ಬಡಿಗೇರ, ಪ್ರಕಾಶ ರುದ್ರಸ್ವಾಮಿಮಠ, ಪವನಕುಮಾರ್ ಹಾಗೂ ಪಂಚಮಕುಮಾರ್, ಬಸವರಾಜ ದಾಸರ ಮತ್ತಿತರರು ಭಾಗವಹಿಸಿದ್ದರು.

# ಕಂಪ್ಲಿ ಪುರಸಭೆ: ಅರ್ಜಿ ಆಹ್ವಾನ

ಬಳ್ಳಾರಿ:ಕಂಪ್ಲಿಪುರಸಭೆವ್ಯಾಪ್ತಿಯಲ್ಲಿನ ಸೋಮಪ್ಪ ಪಾರ್ಕ್‌ನ್ನು ನಿರ್ವಹಣೆ ಮಾಡಲು ಡೇ-ನಲ್ಮ್ ಅಭಿಯಾನದಡಿ ರಚಿತವಾದ ಅರ್ಹ ಮಹಿಳಾ ಸ್ವ-ಸಹಾಯ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಕೇಂದ್ರ ಪುರಸ್ಕೃತ ಯೋಜನೆಯಾದ ಅಮೃತ 2.0 ಅಭಿಯಾನದ ಅಮೃತ್ ಮಿತ್ರ ಕಾರ್ಯಕ್ರಮದ ತಾಂತ್ರಿಕೇತರ ಚಟುವಟಿಕೆ

ಕಾರ್ಯಕ್ರಮದಡಿ ನಿರ್ವಹಣೆ ಮಾಡಲು ಉದ್ದೇಶಿಸಲಾಗಿದ್ದು, ಅರ್ಹ ಮಹಿಳಾ ಸ್ವ-ಸಹಾಯ ಸಂಘಗಳು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ನಿಗದಿತ ಅರ್ಜಿ ನಮೂನೆ ಹಾಗೂ ಅವಶ್ಯಕ ದಾಖಲೆಗಳನ್ನು ಫೆ.16 ರ ಸಂಜೆ 05.30 ರೊಳಗಾಗಿ ಮುಚ್ಚಿದ ಲಕೋಟೆಯಲ್ಲಿ ಕಂಪ್ಲಿ ಪುರಸಭೆ ಕಚೇರಿಗೆ ಸಲ್ಲಿಸಬೇಕು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.26, 27 ರಸ್ತೆ ಸಂಚಾರ ಗಣತಿ ಕಾರ್ಯ



- **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕರ್ನಾಟಕ ರಾಜ್ಯದ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿಗಳು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಓಡಾಡುವ ವಾಹನಗಳ ಗಣತಿಯನ್ನು ನಡೆಸಲಾಗುತ್ತಿದ್ದು, ಸಾರ್ವಜನಿಕರು ಸಹಕರಿಸುವಂತೆ ಕಲಬುರಗಿ ವಲಯದ ಲೋಕೋಪಯೋಗಿ ಇಲಾಖೆಯ ಸಂಪರ್ಕ ಮತ್ತು ಕಟ್ಟಡಗಳು(ಈಶಾನ್ಯ) ಮುಖ್ಯ ಇಂಜಿನಿಯರ್ ಶರಣಪ್ಪ ಸುಲಗಂಟೆ ಅವರು ತಿಳಿಸಿದ್ದಾರೆ.

2026 ನೇ ಸಾಲಿನ ರಸ್ತೆ ಸಂಚಾರ ಗಣತಿಯನ್ನು ಫೆ.26 ರ ಬೆಳಿಗ್ಗೆ 06 ಗಂಟೆಯಿಂದ ಫೆ.27ರ ಬೆಳಿಗ್ಗೆ 06 ಗಂಟೆಯವರೆಗೆ ಸತತವಾಗಿ 02 ದಿನಗಳ ಕಾಲ ನಡೆಯಲಿದೆ.

ಗಣತಿಗೆ ಈಶಾನ್ಯ ವಲಯದ ಕಲಬುರಗಿ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿಗಳ ಮೇಲೆ 370 ಗಣತಿ ಕೇಂದ್ರಗಳನ್ನು ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ 692 ಗಣತಿ ಕೇಂದ್ರಗಳನ್ನು, ಒಟ್ಟು 1062 ಗಣತಿ ಕೇಂದ್ರಗಳನ್ನು ಆಯ್ಕೆ ಮಾಡಲಾಗಿದೆ.

*ಗಣತಿಯ ಮುಖ್ಯ ಉದ್ದೇಶಗಳು:*

ಪ್ರತಿ ರಸ್ತೆಯ ಸಂಚಾರದ ಬೆಳವಣಿಗೆಯ ತೀವ್ರತೆಯನ್ನು ಅಳೆಯುವುದು. ಪ್ರಸ್ತುತದಲ್ಲಿ ಇರುವ ರಸ್ತೆಗಳನ್ನು ದುರಸ್ತಿ ಪಡಿಸುವಲ್ಲಿ ಹಾಗೂ ರಸ್ತೆಯನ್ನು ಇನ್ನು ಉತ್ತಮ ಪಡಿಸಲು ಸಹಾಯಕವಾಗಲಿದೆ.

ರಸ್ತೆಯ ಸಂಚಾರದ ಬೆಳವಣಿಗೆಯ ತೀವ್ರತೆಯನ್ನು ಗಮನಿಸಿ ರಸ್ತೆಯ ಅಗಲೀಕರಣಗೊಳಿಸುವುದು. ರಸ್ತೆಗಳನ್ನು ಮೇಲ್ದರ್ಜೆಗೆರಿಸುವಲ್ಲಿ ಈ ಗಣತಿಯ ವರದಿ ಪ್ರಮುಖವಾಗಿರುತ್ತದೆ.

ರಸ್ತೆಯ ಸಂಚಾರದ ಗಣತಿಯಿಂದ ವಾಹನ ಅಪಘಾತಗಳನ್ನು ತಡೆಯಲು ಕ್ರಮ ತೆಗೆದುಕೊಳ್ಳಲು ಅನುಕೂಲವಾಗುತ್ತದೆ. ರಸ್ತೆ ಸಂಚಾರ ಗಣತಿಯಿಂದ ಆ ರಸ್ತೆ ಮೇಲೆ ಯಾವ ರೀತಿ ವಾಹನ ಸಂಚಾರ ಅಧಿಕವಾಗುತ್ತಿದೆ ಎನ್ನುವುದನ್ನು ತಿಳಿಯುವುದರಿಂದ ಹಲವಾರು ರಸ್ತೆಗಳ ಅಭಿವೃದ್ಧಿ ಕಾರ್ಯಕ್ರಮವನ್ನು ಸರ್ಕಾರ ಮಟ್ಟದಲ್ಲಿ ರೂಪಿಸಲು ಅನುಕೂಲವಾಗುತ್ತದೆ.

ಸಂಚಾರ ಗಣತಿಯನ್ನು ಯಶಸ್ವಿಯಾಗಿಸಲು ವಾಹನ ಚಾಲಕರು ಮತ್ತು ಸಾರ್ವಜನಿಕರು ತಮ್ಮ ವಾಹನಗಳನ್ನು ನಿಧಾನವಾಗಿ ಚಲಿಸಿ ಸಹಕರಿಸುವಂತೆ ಕಲಬುರಗಿ ವಲಯದ ಲೋಕೋಪಯೋಗಿ ಇಲಾಖೆಯ ಸಂಪರ್ಕ ಮತ್ತು ಕಟ್ಟಡಗಳು(ಈಶಾನ್ಯ) ಮುಖ್ಯ ಇಂಜಿನಿಯರ್ ಶರಣಪ್ಪ ಸುಲಗಂಟೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಟೀಕಿನಮಠದ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ



- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಯುಗಪುರುಷ ಹಾನಗಲ್ಲ ಕುಮಾರ ಮಹಾಸ್ವಾಮಿಗಳವರ 159 ನೇ ಜಯಂತಿ, ನಗರದ ಟೆಂಗಿನ ಮಠದ ಶತಾಯುಷಿ ಲಿಂ. ಶ್ರೀಮಲ್ಲಿಕಾರ್ಜುನ ಮಹಾಸ್ವಾಮಿಗಳ ರಜತ ಪುಣ್ಯಸ್ಮರಣೆ, ಲಿಂ.ರೇವಣಸಿದ್ಧ ಮಹಾಸ್ವಾಮಿಗಳ ದಶಮ ಪುಣ್ಯಸ್ಮರಣೆ ಹಾಗೂ ಶ್ರೀ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ ಫೆ.5,6,7ಹಾಗೂ 8ರಂದು ಚರಂತಿಮಠದ ಶಿವಾನುಭ ಮಂಟಪದಲ್ಲಿ ಜರುಗಲಿದೆ. ಬಿ.ವಿ.ವಿ.ಸಂಘ ಹಾಗೂ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ ಸಮಿತಿ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ದಿನಾಂಕ 5 ರಂದು ಕುಮಾರ ಮಹಾಸ್ವಾಮಿಗಳವರ 159 ನೆಯ ಜಯಂತ್ಯುತ್ಸವ ಹಾಗೂ ಪುರಾಣ ಮಂಗಲ ಸಮಾರಂಭ ನಡೆಯಲಿದ್ದು, ದಿನಾಂಕ 6 ಧರ್ಮ ತತ್ವಚಿಂತನ, ಗುರುಸ್ಮರಣೆ ಹಾಗೂ ದಿನಾಂಕ 7 ಸಮಾಜ ಚಿಂತನ ಹಾಗೂ ಸಂಸ್ಕೃತಿ ಚಿಂತನ ಮತ್ತು ದಿನಾಂಕ 8 ರಂದು ಘಟಸ್ಥಲ ಬ್ರಹ್ಮೋದೇಶ ಹಾಗೂ ಶೂನ್ಯಪೀಠಾರೋಹಣ ಹಾಗೂ ಅಡ್ಡಪಲ್ಲಕ್ಕಿ ಉತ್ಸವ ಜರುಗುವುದು ಎಂದು ಹೇಳಿದರು. ದಿನಾಂಕ 5 ರಂದು ಗುರುವಾರ ಮುಂಜಾನೆ 8 ಗಂಟೆಗೆ ಬೆಳಗಾವಿ ಕಾರಂಜಿಮಠದ ಪೂಜ್ಯಶ್ರೀ ಗುರುಸಿದ್ಧ ಮಹಾಸ್ವಾಮಿಗಳಿಂದ ಘಟಸ್ಥಲ ಧ್ವಜಾರೋಹಣ ನೆರವೇರಲಿದೆ. ಸಂಜೆ 5.30ಕ್ಕೆ ಕಾರಣಿಕ ಯುಗಪುರುಷ ಲಿಂ.ಹಾನಗಲ್ಲ ಶ್ರೀ ಕುಮಾರ ಮಹಾಸ್ವಾಮಿಗಳವರ ಜಯಂತ್ಯುತ್ಸವ ಹಾಗೂ ಪುರಾಣ ಪ್ರವಚಣದ ಮಂಗಲ ಸಮಾರಂಭ ಜರುಗಲಿದ್ದು, ಈ ಸಮಾರಂಭದಲ್ಲಿ ಶ್ರೀಶೈಲ ಜಗದ್ಗುರು ಡಾ.ಚೆನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಮುಂಡರಗಿಯ ಅನ್ನದಾನೀಶ್ವರ ಸಂಸ್ಥಾನಮಠದ ನಾಡೋಜ ಡಾ.ಅನ್ನದಾನೀಶ್ವರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯವನ್ನು ವಹಿಸುವರು. ಶಿವಯೋಗಮಂದಿರ ಸಂಸ್ಥೆಯ ಉಪಾಧ್ಯಕ್ಷರು ಹಾಗೂ ಹಾವೇರಿ ಹುಕ್ಕೇರಿಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರೂ. ಅಗಡಿ ಅಕ್ಕಿಮಠದ ಗುರುಲಿಂಗ ಸ್ವಾಮಿಗಳು ಪ್ರವಚನ ಮಂಗಲ ನುಡಿಯನ್ನಾಡುವರು, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ತ ಸದಸ್ಯ ಹನಮಂತ ನಿರಾಣಿ, ಬಸವಪ್ರಭು ಸರನಾಡಗೌಡ ಭಾಗವಹಿಸುವರು. ಬಾದಾಮಿ ವಿಶ್ರಾಂತ ಪ್ರಾಚಾರ್ಯ ಜಿ.ಬಿ.ಶೀಲವಂತ ಅವರು ಸಮಾಜ ಪ್ರೇಮಿ ಹಾನಗಲ್ ಕುಮಾರ ಮಹಾಸ್ವಾಮಿಗಳು ಹಚ್ಚಿದ ಎರಡು ನಂದಾದೀಪಗಳು ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭೆ ಹಾಗೂ ಶಿವಯೋಗಮಂದಿರ ಸಂಸ್ಥೆ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ತದನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಫೆ.ರಂದು ಮುಂಜಾನೆ 10.30ಕ್ಕೆ ಧರ್ಮ ತತ್ವ ಚಿಂತನ ಜರುಗಲಿದೆ. ಚರಂತಿಮಠದ ಡಾ.ಪ್ರಭು ಮಹಾಸ್ವಾಮಿಗಳು. ಇಲಕಲ್ಲಿನ ಗುರುಮಹಾಂತಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದು, ಭೋವಿ ಪೀಠದ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಮಾಜಿ ಸಚಿವ ಎಸ್.ಆರ್.ಪಾಟೀಲ, ಬಿಡಿಸಿಸಿ ಬ್ಯಾಂಕಿನ ಮಾಜಿ ಅಧ್ಯಕ್ಷ ಅಜಕುಮಾರ ಸರನಾಯಕ, ಬಸವೇಶ್ವರ ಬ್ಯಾಂಕಿನ ಅಧ್ಯಕ್ಷ ಪ್ರಕಾಶ ತಪಶೆಟ್ಟಿ ಭಾಗವಹಿಸುವರು. ಘಟಸ್ಥಳಗಳು ಎಂಬ ವಿಷಯದ ಬಗ್ಗೆ ನರೇಗಲ್ಲ ಮೂಲಿಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು, ಪಂಚಾಚಾರಗಳ ಬಗ್ಗೆ ಕಾರಂಜಿಮಠದ ಡಾ ಶಿವಯೋಗಿ ದೇವರು, ಅಷ್ಟಾವರಣಗಳ ಬಗ್ಗೆ ಶಿವಯೋಗ ಮಂದಿರದ ವ್ಯವಸ್ಥಾಪಕ ಡಾ.ಬಿ.ಕೆ.ಹಿರೇಮಠ ಉಪನ್ಯಾಸ ನೀಡುವರು.

ಫೆ. 6 ಶುಕ್ರವಾರ ಸಾಯಂಕಾಲ 5.30ಕ್ಕೆ ಟೀಕಿನಮಠದ ಶತಾಯುಸಿ ಲಿಂ. ಮಲ್ಲಿಕಾರ್ಜುನ ಮಹಾಸ್ವಾಮಿಗಳವರ ರಜತ ಪುಣ್ಯಸ್ಮರಣೆ, ಹಾಗೂ ಲಿಂ. ರೇವಣಸಿದ್ಧ ಮಹಾಸ್ವಾಮಿಗಳವರ ದಶಮ ಪುಣ್ಯಸ್ಮರಣೆಯ ಗುರುಸ್ಮರಣೆ ಜರುಗಲಿದೆ. ಶಿವಮೊಗ್ಗ ಬೆಕ್ಕಿನ ಕಲ್ಮಠದ ಡಾ.ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸುವರು. ದಾರವಾಡ ಮುರುಘಾಮಠದ ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಚಿತ್ರದುರ್ಗದ ಸಂಸದ ಗೋವಿಂದ ಕಾರಜೋಳ, ಜಿಲ್ಲಾಧಿಕಾರಿ ಕೆ.ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್ ಭಾಗವಹಿಸುವರು. ಟೀಕಿನಮಠದ ಗುರುಪರಂಪರೆ ಕುರಿತು ಬಸವೇಶ್ವರ ಕಲಾ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ.ಎಸ್.ಡಿ ಕೆಂಗಲಗುತ್ತಿ ಉಪನ್ಯಾಸ ನೀಡುವರು. ನಂತರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು.

ಫೆ. 7 ಶನಿವಾರ ಮುಂಜಾನೆ 8 ಗಂಟೆಗೆ ಕೆರೂರಿನ ಚರಂತಿಮಠ ಡಾ.ಶಿವಕುಮಾರ ಸ್ವಾಮಿಗಳಿಂದ ಆಯ್ಯಾಚಾರ, ಲಿಂಗದೀಕ್ಷೆ ನೆರವೇರಲಿದೆ. ಮುಂಜಾನೆ 10.30 ಕ್ಕೆ ಸಮಾಜ ಚಿಂತನ ಸಮಾವೇಶ ಜರುಗಲಿದ್ದು, ಕೊಪ್ಪಳದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯವನ್ನು ವಹಿಸಲಿದ್ದು, ಹಾಲಕೆರೆ ಅನ್ನದಾನೀಶ್ವರ ಸಂಸ್ಥಾನಮಠದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ ಉಪಸ್ಥಿತರಿವರು. ವೀರಶೈವ-ಲಿಂಗಾಯತ ಒಂದೇ ಧರ್ಮದ ಎರಡು ನಾಣ್ಯಗಳು ಎಂಬ ವಿಷಯವನ್ನು ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷರು, ಮೈಸೂರಿನ ಸಾಹಿತಿ ಡಾ.ನಂದೀಶ ಹಂಚೆ, ಹಾಗೂ ವೀರಶೈವ-ಲಿಂಗಾಯತ ಮಠಮಾನ್ಯಗಳು ಹಾಗೂ ಪ್ರಸಾದ ನಿಲಯಗಳ ಬಗ್ಗೆ ಹೊಸಪೇಟೆಯ ಸಾಹಿತಿ ಡಾ.ಮೃತ್ಯುಂಜಯ ರುಮಾಲೆ ಮತ್ತು ವೀರಶೈವ-ಲಿಂಗಾಯತ ಶಿಕ್ಷಣ ಸಂಸ್ಥೆಗಳ ಬಗ್ಗೆ ಬಿವಿವಿ ಸಂಘ ಆಡಳಿತಾಧಿಕಾರಿಗಳು ಸಾಹಿತಿ, ಡಾ.ವಿಜಯಕುಮಾರ ಕಟಗಿಹಳ್ಳಿಮಠ ಉಪನ್ಯಾಸ ನೀಡುವರು.

ಸಾಯಂಕಾಲ 5.30ಕ್ಕೆ ಸಂಸ್ಕೃತಿ ಚಿಂತನ ಸಮಾವೇಶ ನಡೆಯಲಿದ್ದು, ಬೆಳಗಾವಿ ನಾಗನೂರಿನ ರುದ್ರಾಕ್ಷಿಮಠದ ಡಾ.ಅಲ್ಲಮಪ್ರಭು ಮಹಾಸ್ವಾಮಿಗಳು, ವಿಜಯಪುರ ಷಣ್ಮುಖಾರೂಢ ಮಠದ ಅಭಿನವ ಸಿದ್ಧಾರೂಢ ಸ್ವಾಮಿಗಳು ಸಾನಿಧ್ಯ ವಹಿಸುವರು. ಜಮಖಂಡಿ ಶಾಸಕ ಜಗದೀಶ ಗುಡಗುಂಟಿ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪಸ್ಥಿತರಿರುವರು.

# ಕಾಯಕ ಶರಣರ ಜಯಂತಿ ಕಾರ್ಯಕ್ರಮ

ಬಳ್ಳಾರಿ:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಫೆ.10 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಈ.ತುಕರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯ ಸಭೆ ಸಂಸದ ಡಾ.ಸೈಯದ್ ನಾಸೀರ್ ಹುಸೇನ್, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಕಂಪ್ಲಿ ಶಾಸಕ ಜೆ.ಎನ್. ಗಣೇಶ್, ಸಿರುಗುಪ್ಪ ಶಾಸಕ ಬಿ.ಎಂ ನಾಗರಾಜ್, ಸಂಡೂರು ಶಾಸಕಿ ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್, ಮಹಾಗರ ಪಾಲಿಕೆ ಮಹಾಪೌರರಾದ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನಿರಲ್ಸ್ ಕಾರ್ಪೋರೇಷನ್ ಲಿಮಿಟೆಡ್‌ನ ಉಪಾಧ್ಯಕ್ಷ ಹೆಚ್.ಲಕ್ಷ್ಮಣ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾದಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಭಾಗವಹಿಸುವರು.

# ಕರ್ನಾಟಕ ಸಂಘದಿಂದ ಅದ್ದೂರಿ ಮೆರವಣಿಗೆ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ಫೆ.5ರಂದು ಮಧ್ಯಾಹ್ನ 1ಗಂಟೆಗೆ ಆರಂಭವಾಗುವ ಉತ್ಸವದ ಅದ್ದೂರಿ ಮೆರವಣಿಗೆಗೆ ಕರ್ನಾಟಕ ಸಂಘದ ಆವರಣವು ಮತ್ತು ರಾಯಚೂರು ಸಿಟಿಯು ಸಿದ್ಧವಾಗಿದೆ. ಮೆರವಣಿಗೆಯು ಬಂಗಾರ ಬಜಾರ್, ಡಾ.ಬಿ.ಆರ್. ಅಂಬೇಡ್ಕರ್ ವೃತ್ತ, ಬಸವೇಶ್ವರ ವೃತ್ತದ ಮಾರ್ಗವಾಗಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದವರೆಗೆ ಸಂಚರಿಸಲಿದೆ.

ಮೆರವಣಿಗೆಯು ಬಸವರಾಜ ಸಿಂಧನೂರು ಅವರಿಂದ ವೀರಗಾಸೆ, ಅಂಬರೇಶ ಹಸಮಕಲ್ ಅವರಿಂದ ಹಗಲುವೇಷ, ದೇವರಾಜು ಅವರಿಂದ ಚಿಲಿಪಿಲಿ ಗೊಂಬೆ, ಹನುಮಂತ ಮಸ್ಕಿ ಅವರಿಂದ ಕೀಲುಕುದುರೆ, ಲಿಂಗರಾಜ ನೀರಮಾನ್ವಿ ಅವರಿಂದ ಡೊಳ್ಳು ಕುಣಿತ, ಶಾಂತರಾಜು ಆಶಾಪೂರ ಅವರಿಂದ ಜಾಂಜ್ ಮೇಳ, ಶಿವರಾಜ ರುದ್ರಾಕ್ಷಿ ದೇವದುರ್ಗ ಅವರಿಂದ ಹಗಲುವೇಷ, ಲಂಕೆಪ್ಪ ಆಮದಿಹಾಳ ಅವರಿಂದ ಕಣಿಹಲಗೆ, ಬಸವರಾಜ ಸಿರವಾರ ಅವರಿಂದ ಡೊಳ್ಳುಕುಣಿತ, ಪಂಪನಗೌಡ ಸಿಂಧನೂರು ಅವರಿಂದ ತಾಷಾರಾಂಡೋಲು,

ಚಿನ್ನಪ್ಪ ಸಿಂಧನೂರು ಅವರಿಂದ ಹಗಲುವೇಷ, ಗದ್ದೆಪ್ಪ ಭಜಂತ್ರಿ ಆಮದಿಹಾಳ ಅವರಿಂದ ಶಹನಾಯಿ ವಾದನ, ತಮ್ಮಣ್ಣ ರಾಠೋಡ ದೇವದುರ್ಗ ಅವರಿಂದ ಲಂಬಾಣಿ ನೃತ್ಯ, ನಾಗೇಶ ಬೆಂಗಳೂರು ಅವರಿಂದ ಕೊಂಬುಕಹಳೆ, ಹನುಮಂತ್ರಾಯ ಅವರಿಂದ ಗೊರವ ಕುಣಿತ, ಮಾರೆಪ್ಪ ಆತಕೂರ ಅವರಿಂದ ತಮಟೆವಾದನ, ಹಣಮಂತ್ರ ಭಜಂತ್ರಿ ಅವರಿಂದ ನಾಸಿಕಡೊಳ್ಳು, ಮಹೇಶ ಕವಿತಾಳ ಅವರಿಂದ ಹಗಲುವೇಷ, ನೀಲಕಂಠ ಕಲಬುರಗಿ ಅವರಿಂದ ಗೊಂಬೆ ಕುಣಿತ, ತಿಪ್ಪೇಸ್ವಾಮಿ ಚಿತ್ರದುರ್ಗ ಅವರಿಂದ ಮಹಿಳಾ ಡೊಳ್ಳು, ಶ್ರೀಕಾಂತ ದಕ್ಷಿಣ ಕನ್ನಡ ಅವರಿಂದ ಕಂಗೀಲು ಕುಣಿತ, ಕೆ ವಸಂತಕುಮಾರ ಬಳ್ಳಾರಿ ಅವರಿಂದ ಕಹಳೆವಾದನ, ಮಹಾಂತೇಶ ಚಿತ್ರದುರ್ಗ ಅವರಿಂದ ಸೋಮನಕುಣಿತ, ಸಿ ವೀರೇಶ ವಿಜಯನಗರ ಅವರಿಂದ ನಂದಿಧ್ವಜ ಮತ್ತು ಸಮಾಳ, ವೀರಯ್ಯ ಹಿರೇಮಠ ಕೊಪ್ಪಳ ಅವರಿಂದ ಭದ್ರಕಾಳಿ ಕುಣಿತ, ಮೀನ್ಹಾಕ್ಷಮ ದಾವಣಗೆರೆ ಅವರಿಂದ ಮಹಿಳಾ ವೀರಗಾಸೆ, ಕಲ್ಲಪ್ಪ ಹಂಚಿನಮನಿ ಧರವಾಡ ಅವರಿಂದ ಜಗ್ಗಲಗಿ, ಶ್ರೀನಿವಾಸ ದಾವಣಗೆರೆ ಕೋಳಿಕುಣಿತ, ಮಹಾಂತೇಶ ವಾಲಿ ಕೊಣ್ಣೂರ ಕರಡಿಮಜಲು, ಮಲ್ಲಿಕಾರ್ಜುನ ಕೊಪ್ಪದ ಅವರಿಂದ ಡೊಳ್ಳುಕುಣಿತ ಪ್ರಕಾರಗಳ ಮೂಲಕ ಮೆರವಣಿಗೆ ನಡೆಯಲಿದೆ.

# ಕರ್ತವ್ಯವನ್ನು ಮರೆಯದೆ ಹಾವನ್ನು ರಕ್ಷಣೆ ಮಾಡಿದ ಗೃಹರಕ್ಷಕ ದಳದ ಆದರ್ಶ ಕೆಎಂ



- **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಕಮಲಾಪುರ):**

ಕನ್ನಡ ವಿಶ್ವ ವಿದ್ಯಾಲಯದ ಲೇಡೀಸ್ ಹಾಸ್ಟೆಲ್ ರೂಮಿನ ಮುಂಭಾಗ ಕುಳಿತುಕೊಳ್ಳುವ ಸ್ಥಳದ ಹಿಂಭಾಗದಲ್ಲಿ ನಾಗರಹಾವು ಪತ್ತೆಯಾಗಿತ್ತು. ಕನ್ನಡ ವಿಶ್ವವಿದ್ಯಾಲಯದ ಲೇಡೀಸ್ ಹಾಸ್ಟೆಲ್ ವಾರ್ಡನ್ ತಕ್ಷಣವೇ ಗೃಹರಕ್ಷಕ ದಳದಲ್ಲಿ ಕೆಲಸ ಮಾಡುತ್ತಿದ್ದ ಉರಗ ರಕ್ಷಕ ಆದರ್ಶ್ ಕೆಎಂ ಅವರಿಗೆ ಕರೆ ಮಾಡಿ ಕರೆಸಿಕೊಂಡಿದ್ದಾರೆ. ನಾಗರಹಾವನ್ನು ರಕ್ಷಣೆ ಮಾಡಿ ಯಾವುದೇ ತೊಂದರೆಯಾಗದಂತೆ ಕ್ಷೇಮವಾಗಿ ಸುರಕ್ಷಿತ ಜಾಗದಲ್ಲಿ ಬಿಟ್ಟಿದ್ದಾರೆ.

ಗೃಹರಕ್ಷಕ ದಳದಲ್ಲಿ ಕೆಲಸ ಮಾಡುತ್ತಿದ್ದ ಆದರ್ಶ್ ಕೆಎಂ ತನ್ನ ಕರ್ತವ್ಯವನ್ನು ಮರೆಯದೆ ಪೊಲೀಸ್ ಠಾಣೆಯಲ್ಲಿ ಅನುಮತಿ ಪಡೆದುಕೊಂಡು ನಾಗರಹಾವನ್ನು ರಕ್ಷಣೆ ಮಾಡಿದ್ದಾರೆ.

# ಫೆ.5ರಂದು ಮಹಿಳಾ ಕವಿಗೋಷ್ಠಿ ವಿಚಾರಗೋಷ್ಠಿ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು :**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಫೆಬ್ರವರಿ 05ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1.30ರವರೆಗೆ ನಗರದ ಜಿಲ್ಲಾ ಕಾರಾಗೃಹ ಹತ್ತಿರದ ಮಹಿಳಾ ಸಮಾಜ ಆವರಣದಲ್ಲಿ ಕವಿಗೋಷ್ಠಿ ನಡೆಯಲಿದೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ರಂಗಣ್ಣ ಪಾಟೀಲ್ ಅಳ್ಳುಂಡಿ ಅವರು ಉದ್ಘಾಟನೆ ನೆರವೇರಿಸುವರು. ಕೇಂದ್ರ ಸಾಹಿತ್ಯ ಅಕಾಡೆಮಿ ಸದಸ್ಯರು ಹಾಗೂ ಕವಿ ಅನುವಾದಕರಾದ ಚಿದಾನಂದ ಸಾಲಿ ಅವರು ಆಶಯ ನುಡಿಗಳನ್ನಾಡುವರು. ಲಿಂಗಸುಗೂರಿನ ಸಾಹಿತಿಗಳಾದ ಗಿರಿರಾಜ ಹೊಸಮನಿ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಈರಣ್ಣ ಬಿರಾದಾರ್, ಸಾಹಿತಿ ಬಿ.ಜಿ.ಹುಲಿ, ರಾಯಚೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಡಾ.ಬಿ.ವಿಜಯರಾಜೇಂದ್ರ, ಸಿಂಧನೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಎಚ್.ಎಫ್.ಮಸ್ಕಿ ಅವರು ಭಾಗಿಯಾಗಲಿದ್ದಾರೆ.

ಭಾಗವಹಿಸುವ ಕವಿಗಳು: ಪಂಪಾಪತಿ ಶಾಸ್ತ್ರಿ, ಮಲ್ಲಣ್ಣ ಹರವಾಳ, ಮಹಾದೇವ ಎಸ್. ಪಾಟೀಲ್, ಖಾನ್ ಸಾಬ್ ಮೋಮಿನ್, ಜೆ.ಎಂ.ಶರಣಯ್ಯ ಸ್ವಾಮಿ, ಡಾ.ಹುಸೇನಪ್ಪ ಅಮರಾಪುರ, ಡಾ.ಸತೀಶ್ ಕುಮಾರ್ ಎಸ್.,

ಅನಿಲರಾಜ್ ಜೆ., ಮಹಾಂತೇಶ ಹೀರಾ, ಬಶೀರ್ ಅಹ್ಮದ್ ಹೊಸಮನಿ, ಅಮರಗುಂಡಪ್ಪ ಹೂಗಾರ, ದೇವರಾಜ್ ಎಸ್. ಬಪ್ಪೂರ, ಚಂದ್ರಶೇಖರ ನಾಡಗೌಡ, ಚಿದಾನಂದ ಕರಿಗೂಳಿ, ದುರುಗಪ್ಪ ಗುಡದೂರು, ಎಸ್.ಎನ್. ಅಲೆಕ್ಸಾಂಡರ್, ಅಖೀಲ್ ಅಹ್ಮದ್ ಅನ್ಸಾರಿ, ಬಸವರಾಜ ಜಂಗಮರಹಳ್ಳಿ, ರುದ್ರಪ್ಪ ಎಸ್ ತಳವಾರ, ವೆಂಕಟೇಶ ಗುಡೂರ, ಮಹೇಶ ಹಿಂದಿ ಶಿಕ್ಷಕ, ಕಾಶಿನಾಥ ಬಳಿಗಾರ, ರಾಮಕೃಷ್ಣ ನಾಯಕ, ಮಲ್ಲಿಕಾರ್ಜುನ ನಾಯಕ, ಕೆ. ಸತ್ಯನಾರಾಯಣ, ಪಲುಗುಲ ನಾಗರಾಜ, ಡಾ.ವೆಂಕಟೇಶ ನವಲಿ, ರಾಮಣ್ಣ ಬೋಯೆರ್, ಡಾ.ಎಸ್.ಜಿ.ಪಾಟೀಲ, ಲಕ್ಷ್ಮಣ ಬಾರಿಕೇರ, ವೆಂಕಟೇಶ ಬುಕ್ಕನೂರು, ಎಂ.ರಾಮಚಂದ್ರರಾವ್, ಮುರಳೀಕೃಷ್ಣ, ದೇವೇಂದ್ರ ಹುಡಾ, ಮಹಾಂತೇಶ ಗವಿಗಟ್ಟ, ಡಾ. ಅಮರಾಪುರ ಹೆಚ್. ಡಬ್ಲ್ಯು, ಶ್ರೀಧರರಾವ್ ದೇಸಾಯಿ, ಎಸ್.ಶಿವಮೂರ್ತಿ, ಗೋಪಿನಾಥ ದೇಸಾಯಿ, ರಾಘವೇಂದ್ರ ಕವಿತಾಳ, ಪ್ರಸನ್ನ ಪಟವಾರಿ, ಮುರುಗೇಶ ಕುಂಬಾರ, ಡಾ.ಸುನೀಲ್ ಕುಮಾರ್ ಪರೀಟ್, ಡಾ.ಶಾಮಸುಂದರ ಪಟವಾರಿ, ಪಿ.ವೆಂಕಟೇಶ ಬಾಗಲವಾಡ, ಸಣ್ಣ ಯಲ್ಲಪ್ಪ, ಮಂಜುನಾಥ ಗುತ್ತೇದಾರ, ಸೂಗೂರೇಶ ಹಿರೇಮಠ, ರಾಘವೇಂದ್ರ ವಿ.ಹೆಚ್., ರಘುನಾಥರೆಡ್ಡಿ ಮನ್ನಲಾಪುರ, ಶಂಕರರಾವ್ ಉಭಾಳೆ, ಡಾ.ತಿಮ್ಮಯ್ಯಶೆಟ್ಟಿ ಇಲ್ಲೂರ, ದೇವನಪಲ್ಲಿ ಶ್ರೀನಿವಾಸ್, ಸಿದ್ದಣ್ಣ ನಿಲೋಗಿ, ಸಿದ್ಧಾರ್ಥ ವಲ್ಲಭ, ಮಹಾಂತಸ್ವಾಮಿ ಉಪ್ರಾಳ, ರಾಯಸ್ವಾಮಿ ಪೆದ್ದರಾಯ, ನೀಲಕಂಠಯ್ಯ ಮಳಿಮಠ ಗಲಗ, ಇಮಾಮುದ್ದೀನ್ ಮಾಡಗಿರಿ, ಕೆ.ಮಲ್ಲಿಕಾರ್ಜುನ ಕವಿತಾಳ, ಜಿ.ಶರಣಬಸವರಾಜ್, ಶರಣಪ್ಪ ಗಬ್ಬೂರು, ಅಮರಯ್ಯ ಘಂಟಿ, ಚಂದ್ರಶೇಖರ ಮದ್ಲಾಪುರ, ವೀರೇಶ್ ಗೋನವಾರ, ಭೀರಪ್ಪ ಶಂಭೋಜಿ, ಸಿ.ದಾನಪ್ಪ, ಶಕೀಲ್ ಉಸ್ತಾದ್,

ಮಹಾದೇವ ಹಳ್ಳಿ, ಶಿವಪ್ಪ ಪಾಟೀಲ ಜಾನೇಕಲ್, ಮಂಜುನಾಥ ಸಾಹುಕಾರಮನಿ, ಆನಂದ ಶಿಲ್ಪಿ ಜಕ್ಕೂರ, ಸಿ.ಹನುಮಂತರಾಯ ಕವಿತಾ ವಾಚನ ಮಾಡುವರು. ಕಾರ್ಯಕ್ರಮದ ನಿರೂಪಣೆ ಅಣ್ಣಪ್ಪ ಮೇಟಿಗೌಡ, ಸ್ವಾಗತ ರಾವುತ್‌ರಾವ್ ಬರೂರ, ವಂದನಾರ್ಪಣೆ ವಿಜಯಲಕ್ಷ್ಮೀ ಅಸ್ಕಿಹಾಳ ಹಾಗೂ ನಿರ್ವಹಣೆಯನ್ನು ನಾಗಪ್ಪ ಹೊರಪ್ಯಾಟಿ ಅವರು ಮಾಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಕಾರ್ಯಕ್ರಮ

ಬಳ್ಳಾರಿ:ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಫೆ.07 ರಂದು ಸಂಜೆ 06 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ನಾಡೋಜ ಸುಭದ್ರಮ್ಮ ಮಾನ್ಸೂರ್ ಬಯಲು ರಂಗಮಂದಿರದಲ್ಲಿ ವಿಶೇಷ ಘಟಕ ಯೋಜನೆಯಡಿ ಕಲಿಕಾ ತರಬೇತಿ ಪಡೆದ ಡಾ.ಬಿ.ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕೀಯರ ವಸತಿ ನಿಲಯದ ವಿದ್ಯಾರ್ಥಿನಿಯರಿಂದ ಜಾನಪದ ಸಂಗೀತ ಗಾಯನ ಹಾಗೂ ಗಿರಿಜನ ಉಪಯೋಜನೆಯಡಿ ಕಲಿಕಾ ತರಬೇತಿ ಪಡೆದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದ ವಿದ್ಯಾರ್ಥಿನಿಯರಿಂದ ಶಾಸ್ತ್ರೀಯ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

## ಕು.ಶ್ರೇಯಾ ಮಹೇಶ್ ರಂಗಪ್ರವೇಶ



**ಬೆಂಗಳೂರು:** ಕಲೆ, ಸಾಹಿತ್ಯ, ನಾಟ್ಯ ಹಾಗೂ ಸಂಸ್ಕಾರದಲ್ಲಿ ಇಡೀ ಪ್ರಪಂಚದಲ್ಲಿಯೇ ಭಾರತ ದೇಶ ಶ್ರೀಮಂತವಾದದ್ದು ಎಂದು ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಾದ ಗೋಪಾಲಗೌಡ ಅವರು ಹೇಳಿದ್ದಾರೆ.

ಮಲ್ಲೇಶ್ವರಂನ ಚೌಡಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಏರ್ಪಡಿಸಿದ್ದ ವಕೀಲ ಆರ್.ಮಹೇಶ್ ಮತ್ತು ಆಶಾ ದಂಪತಿಗಳ ಸುಪುತ್ರಿ ಶ್ರೇಯಾ ಮಹೇಶ್ ಅವರ ರಂಗ ಪ್ರವೇಶ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹಲವು ವಿಭಾಗದಲ್ಲಿ ದೇಶದ ಶ್ರೀಮಂತಿಕೆ ಇಲ್ಲದೆ ಇರಬಹುದು. ಆದರೆ,ಕೆಲೆ ಮತ್ತು ಸಂಸ್ಕೃತಿಕತೆಯಲ್ಲಿ ನಮ್ಮ ದೇಶ ಎಂದೂ ಹಿಂದೆ ಬಿದ್ದಿಲ್ಲ. ಇದು ನಮ್ಮ ಹೆಗ್ಗಳಿಕೆ ಎಂದರು.

ಭರತ ನಾಟ್ಯ ಎನ್ನುವುದು ನಮ್ಮ ನೆಲದಲ್ಲಿಯೇ ಬೆಳೆದು ಅರಳಿದ ಕಲೆ. ಕು.ಶ್ರೇಯ ಅವರು ಅಮೋಘವಾಗಿ ನಾಟ್ಯ ಪ್ರದರ್ಶನ ಮಾಡಿದ್ದಾರೆ. ಒತ್ತಡ, ದುಗುಡವನ್ನು ಹೊರತಾದ ಪರಿಸಥಿತಿಯಲ್ಲಿ ಮನಸ್ಸಿಗೆ ಇಂಪಾದ ವಾತಾವರಣವನ್ನು ಕಲಾ ಪ್ರದರ್ಶನ ನೀಡುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಪ್ರತಿಭಾನ್ವಿತೆ ಕು.ಶ್ರೇಯ ಅವರನ್ನು ಹಲವು ಸಂಘ ಸಂಸ್ಥೆಗಳು ಸನ್ಮಾನಿಸಿದವು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಅಡ್ವಕೇಟ್ ಕಿರಣ್ ವಿ ರಾವ್, ಹಿರಿಯ ಸಿವಿಲ್ ನ್ಯಾಯಾಧೀಶರಾದ ನಿವೇದಿತಾ, ಯೋಗಮಿತ್ರ ಡಾ.ಎ.ಸುಬ್ರಹ್ಮಣ್ಯನ್, ಧರಣಿ ಕಶ್ಯಪ್, ಡಾ.ಸುಪರ್ಣವೆಂಕಟೇಶ್, ವಕೀಲ ಎ.ಪಿ. ರಂಗನಾಥ್, ಗೀತಾರಾಜ್ ಹಾಜರಿದ್ದರು.

## ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ ಇಂದಿನಿಂದ

**ಬಾಗಲಕೋಟೆ:** ಯುಗಪುರುಷ ಹಾನಗಲ್ಲ ಕುಮಾರ ಮಹಾಸ್ವಾಮಿಗಳವರ 159 ನೇ ಜಯಂತಿ, ನಗರದ ಟೆಂಗಿನ ಮಠದ ಶತಾಯುಷಿ ಲಿಂ. ಶ್ರೀಮಲ್ಲಿಕಾರ್ಜುನ ಮಹಾಸ್ವಾಮಿಗಳ ರಜತ ಪುಣ್ಯಸ್ಮರಣೆ, ಲಿಂ.ರೇವಣಸಿದ್ಧ ಮಹಾಸ್ವಾಮಿಗಳ ದಶಮ ಪೂಣ್ಯಸ್ಮರಣೆ ಹಾಗೂ ಶ್ರೀ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾದಿಕಾರ ಮಹೋತ್ಸವ ಫೆ.5,6,7ಹಾಗೂ 8ರಂದು ಚರಂತಿಮಠದ ಶಿವಾನುಭ ಮಂಟಪದಲ್ಲಿ ಜರುಗಲಿದೆ. ಬಿ.ವಿ.ವಿ.ಸಂಘ ಹಾಗೂ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ ಸಮಿತಿ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ದಿನಾಂಕ 5 ರಂದು ಕುಮಾರ ಮಹಾಸ್ವಾಮಿಗಳವರ 159 ನೆಯ ಜಯಂತ್ಯುತ್ಸವ ಹಾಗೂ ಪುರಾಣ ಮಂಗಲ ಸಮಾರಂಭ ನಡೆಯಲಿದ್ದು, ದಿನಾಂಕ 6 ಧರ್ಮ ತತ್ವ ಚಿಂತನ, ಗುರುಸ್ಮರಣೆ ಹಾಗೂ ದಿನಾಂಕ 7 ಸಮಾಜ ಚಿಂತನ ಹಾಗೂ ಸಂಸ್ಕೃತಿ ಚಿಂತನ ಮತ್ತು ದಿನಾಂಕ 8 ರಂದು ಘಟಸ್ಥಲ ಬ್ರಹ್ಮೋದೇಶ ಹಾಗೂ ಶೂನ್ಯ ಪೀಠಾರೋಹಣ ಹಾಗೂ ಅಡ್ಡಪಲ್ಲಕ್ಕಿ ಉತ್ಸವ ಜರುಗುವುದು ಎಂದು ಹೇಳಿದರು. ದಿನಾಂಕ 5 ರಂದು ಗುರುವಾರ ಮುಂಜಾನೆ 8 ಗಂಟೆಗೆ ಬೆಳಗಾವಿ ಕಾರಂಜಿಮಠದ ಪೂಜ್ಯಶ್ರೀ ಗುರುಸಿದ್ಧ ಮಹಾಸ್ವಾಮಿಗಳಿಂದ ಘಟಸ್ಥಲ ಧ್ವಜಾರೋಹಣ ನೆರವೇರಲಿದೆ. ಸಂಜೆ 5.30ಕ್ಕೆ ಕಾರಣಿಕ ಯುಗಪುರುಷ ಲಿಂ.ಹಾನಗಲ್ಲ ಶ್ರೀ ಕುಮಾರ ಮಹಾಸ್ವಾಮಿಗಳವರ ಜಯಂತ್ಯುತ್ಸವ ಹಾಗೂ ಪುರಾಣ ಪ್ರವಚಣದ ಮಂಗಲ ಸಮಾರಂಭ ಜರುಗಲಿದ್ದು, ಈ ಸಮಾರಂಭದಲ್ಲಿ ಶ್ರೀಶೈಲ ಜಗದ್ಗುರು ಡಾ.ಚೆನ್ನಸಿದ್ದರಾಮ ಪಂಡಿತಾದ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಮುಂಡರಗಿಯ ಅನ್ನದಾನೀಶ್ವರ ಸಂಸ್ಥಾನಮಠದ ನಾಡೋಜ ಡಾ.ಅನ್ನದಾನೀಶ್ವರ ಮಹಾಸ್ವಾಮಿಗಳು ದಿವ್ಯಸಾನಿದ್ಯವನ್ನು ವಹಿಸುವರು. ಶಿವಯೋಗಮಂದಿರ ಸಂಸ್ಥೆಯ ಉಪಾಧ್ಯಕ್ಷರು ಹಾಗೂ ಹಾವೇರಿ ಹುಕ್ಕೇರಿಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರೂ. ಅಗಡಿ ಅಕ್ಕಿಮಠದ ಗುರುಲಿಂಗ ಸ್ವಾಮಿಗಳು ಪ್ರವಚನ ಮಂಗಲ ನುಡಿಯನ್ನಾಡುವರು, ಸಂಸದ ಪಿ.ಸಿ.ಗದ್ದಿಗೌಡರ,ವಿಧಾನ ಪರಿಷತ್ತ ಸದಸ್ಯ ಹನಮಂತ ನಿರಾಣಿ, ಬಸವಪ್ರಭು ಸರನಾಡಗೌಡ ಭಾಗವಹಿಸುವರು.

# ಔಷದ ವಿತರಣಾ ಕೇಂದ್ರ ತೆರೆದಿಡುವಂತೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಚಿತ್ತಾಪುರ

ಪಟ್ಟಣದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ತವ್ಯದ ಮೇಲಿರುವ ವೈದ್ಯರು, ಸಿಬ್ಬಂದಿ ವಿವರ ನಾಮಫಲಕದಲ್ಲಿ ನಮೂದಿಸಬೇಕು ಹಾಗೂ ರಾತ್ರಿಯಲ್ಲಿಯೂ ಔಷದ ವಿತರಣಾ ಕೇಂದ್ರವು ತೆರೆದಿಡುವ ಮೂಲಕ ಜನರಿಗೆ ಅನುಕೂಲ ಮಾಡಿಕೊಡಬೇಕು ಎಂದು ಆಗ್ರಹಿಸಿ ತಾಲೂಕು ದೈಹಿಕ ಮತ್ತು ಮಾನಸಿಕ ಅಂಗವಿಕಲರ ವಿವಿದ್ದೋದ್ದೇಶಕ್ಷೇಮಾಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷ ಮಹ್ಮದ್ ಇಬ್ರಾಹಿಂ ಆಡಳಿತ ವೈದ್ಯಾಧಿಕಾರಿ ಡಾ.ಮಹ್ಮದ್ ಅಬ್ದುಲ್ ರಹೀಂ ಅವರಿಗೆ ಮನವಿ ಪತ್ರ ಸಲ್ಲಿಸಿದರು.



ನಂತರ ಮಾತನಾಡಿದ ಅವರು, ಚಿತ್ತಾಪುರ ಪಟ್ಟಣದ ಸರ್ಕಾರಿ ಸಾರ್ವಜನಿಕರ ಆಸ್ಪತ್ರೆಯಲ್ಲಿ ದಿನಾಲು ಹಗಲು ರಾತ್ರಿ ಪಾಳಿಯ ಪ್ರಕಾರ ಕರ್ತವ್ಯ ನಿರ್ವಹಿಸುವ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಯ ವಿವರ ನಾಮಫಲಕದಲ್ಲಿ ನಮೂದು ಮಾಡುತ್ತಿಲ್ಲ. ಕರ್ತವ್ಯ ನಿರತರ ವಿವರ ನಮೂದಿಸುವುದರಿಂದ ಆಸ್ಪತ್ರೆಗೆ ಬರುವ ರೋಗಿಗಳು ಮತ್ತು ರೋಗಿಗಳ ಸಂಬಂಧಿಕರು ನೇರವಾಗಿ ಅವರನ್ನು ಸಂಪರ್ಕಿಸಲು ಸಹಾಯಕವಾಗುತ್ತದೆ. ಅಲ್ಲದೆ ರಾತ್ರಿ ಸಮಯದಲ್ಲಿ ಆಸ್ಪತ್ರೆಗೆ ಬರುವ ರೋಗಿಗಳಿಗೆ ಔಷದ ಸೌಲಭ್ಯ ಸಮರ್ಪಕವಾಗಿ ಸಿಗುತ್ತಿಲ್ಲ. ಅಫಘಾತದಲ್ಲಿ ಗಂಭೀರವಾಗಿ ಗಾಯಗೊಂಡವರು ಆಸ್ಪತ್ರೆಗೆ ಬಂದಾಗ ಔಷದ ಸಮಸ್ಯೆಯಾಗುತ್ತಿದೆ. ಹೀಗಾಗಿ ರಾತ್ರಿ ಸಮಯದಲ್ಲೂ ಔಷದ ವಿತರಣಾ ಕೇಂದ್ರ ತೆರೆದಿಡಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಬಾಣಂತಿಯರು ಕುಟುಂಬ ಕಲ್ಯಾಣ ಯೋಜನೆಯಡಿ ಶಸ್ತ್ರ ಚಿಕಿತ್ಸೆಗೆಂದು ಬಂದರೆ ಅವರಿಗೆ ಸರಿಯಾದ ಸ್ಪಂದನೆ ಸಿಗುತ್ತಿಲ್ಲ. ಶಸ್ತ್ರ ಚಿಕಿತ್ಸೆ ಮಾಡುವ ನಿಖರ ದಿನಾಂಕ ನಿಗಧಿ ಮಾಡಿ ಆಸ್ಪತ್ರೆಗೆ ಬರುವವರಿಗೆ ಮಾಹಿತಿ ಸಿಗುವಂತೆ ನಾಮಫಲಕದಲ್ಲಿ ವಿವರ ಹಾಕುತ್ತಿಲ್ಲ. ಸಮಗ್ರ ವಿವರವನ್ನು ನಾಮಫಲಕದದಲ್ಲಿ ಹಾಕುವ ವ್ಯವಸ್ಥೆ ಮಾಡಬೇಕು. ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೇವೆ ಒದಗಿಸಬೇಕು. ಇನ್ನು ಹೆಚ್ಚಿನ ಶಸ್ತ್ರ ಚಿಕಿತ್ಸೆಯ ವ್ಯವಸ್ಥೆ ಮಾಡಿ ತಾಲ್ಲೂಕಿನ ಜನತೆಗೆ ಅನುಕೂಲ ಮಾಡಿಕೊಡಬೇಕು ಎಂದು ಹೇಳಿದರು.

ರಾತ್ರಿ ಸಮಯದಲ್ಲಿ ಹಾಗೂ ದಿನದ 24 ಗಂಟೆಗಳ ಕಾಲ ಔಷದ ವಿತರಣಾ ಕೇಂದ್ರ ತೆರೆಯಬೇಕು, ಮಹಿಳಾ ವೈದ್ಯಾಧಿಕಾರಿ ಹಾಗೂ ಮಹಿಳಾ ಎಂ.ಬಿ.ಬಿ.ಎಸ್ ವೈದ್ಯರನ್ನು ನಿಯೋಜನೆ ಮಾಡಬೇಕು, ಸುಂದು ಮಾಡುವ (ಅನೇಸ್ತಿಯಾ) ವೈದ್ಯರನ್ನು ನಿಯೋಜನೆ ಮಾಡಬೇಕು ಮತ್ತು ಸ್ಕ್ಯಾನಿಂಗ್ ವ್ಯವಸ್ಥೆ ಮಾಡಬೇಕೆಂಬ ಬೇಡಿಕೆಗಳ ಮನವಿ ಪತ್ರವನ್ನು ಸಲ್ಲಿಸಿದರು.

ಮನವಿಗೆ ಸ್ಪಂದಿಸಿ ಮಾತನಾಡಿದ ಡಾ.ಮಹ್ಮದ್ ಅಬ್ದುಲ್ ರಹೀಂ, ಈಗಾಗಲೇ ಆಸ್ಪತ್ರೆಯಲ್ಲಿ ಕರ್ತವ್ಯನಿರತ ವೈದ್ಯರ ಹೆಸರುಗಳ ನಾಮಫಲಕ ಅಳವಡಿಸಲಾಗಿದೆ ಇತರೆ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರವೀಂದ್ರ ತೇಲ್ಕರ್, ಅಂಬಾದಾಸ್ ಟೇಲರ್, ಮಹಿಬೂಬ್ ಟೇಲರ್, ಮೊಗಲಪ್ಪ ಕುಂಬಾರ, ರಾಮು ರಾಠೋಡ, ಚಂದ್ರಶೇಖರ ಕಾಶಿ ಸೇರಿದಂತೆ ಇತರರು ಇದ್ದರು.

## ಕೇಂದ್ರ ಬಜೆಟ್: ಅಯ್ಯಪ್ಪ ರಾಮತೀರ್ಥ ಮೆಚ್ಚುಗೆ

• ಮಲ್ಲಮ್ಮ ನುಡಿ ವಾರ್ತೆ ಚಿತ್ತಾಪುರ

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ 9ನೇ ಬಾರಿಗೆ ಬಜೆಟ್ ಮಂಡಿಸುವಲ್ಲಿ ಯಶಸ್ವಿ ಹೆಜ್ಜೆ ಇಟ್ಟಿದ್ದಾರೆ ಎಂದು ಬಿಜೆಪಿ ಮುಖಂಡ ಅಯ್ಯಪ್ಪರಾಮತೀರ್ಥ ಮೆಚ್ಚುಗೆವ್ಯಕ್ತಪಡಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿದ ಅವರು, ಈ ಬಾರಿ ಕರ್ನಾಟಕ ರಾಜ್ಯಕ್ಕೆ 2 ಹೈಸ್ಪೀಡ್ ರೈಲು ಘೋಷಿಸಿದ್ದಾರೆ. ದೇಶದ ಸಮಗ್ರ ಅಭಿವೃದ್ಧಿಗಾಗಿ ರಕ್ಷಣಾ, ಗೃಹ, ಕೃಷಿ ಸಾರಿಗೆ, ಆರೋಗ್ಯ, ಗ್ರಾಮೀಣಾಭಿವೃದ್ಧಿ, ಶಿಕ್ಷಣ, ವಿಮೆ, ಪ್ರವಾಸೋದ್ಯಮ, ಕೈಗಾರಿಕೆ ಹಾಗೂ ಎಐ ಆಧುನಿಕ ತಂತ್ರಜ್ಞಾನಕ್ಕೆ ಒತ್ತು ನೀಡಿರುವುದು ಹಾಗೂ ಮೂಲಭೂತ ಸೌಕರ್ಯಕ್ಕೆ ಆದ್ಯತೆ ನೀಡಿರುವುದು ಸಂತಸ. ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳ ಉತ್ತೇಜನಕ್ಕಾಗಿ 10 ಸಾವಿರ ಕೋಟಿ, ಬಯೋ ಫಾರ್ಮ ಗೆ 10 ಸಾವಿರ ಕೋಟಿ, ಚಾಂಪಿಯಾನಿಗಳಿಗಾಗಿ 10 ಸಾವಿರ ಕೋಟಿ ಮೀಸಲಿಟ್ಟಿದ್ದಾರೆ. ಕ್ರೀಡಾಪಟುಗಳಿಗೆ ಖೇಲ್ ಇಂಡಿಯಾ ಯೋಜನೆ ಘೋಷಣೆ, ಮುಂದಿನ 5 ವರ್ಷದಲ್ಲಿ 20 ಹೊಸ ಜಲಮಾರ್ಗ ನಿರ್ಮಾಣದ ಯೋಜನೆ ಕಾರ್ಯ ನಡೆಯಲಿದೆ ಎಂದಿದ್ದಾರೆ.

ಅತಿವೃಷಿಯಿಂದ ತತ್ತರಿಸಿದ ದೇಶದ ರೈತ, ಕೃಷಿ ಸಾಲ ಮನ್ನಾ ಮಾಡಬಹುದೆಂದು ನಿರೀಕ್ಷೆ ಮಾಡಲಾಗಿದ್ದು, ಅದು ಈಡೇರಲಿಲ್ಲ ಎಂಬ ತುಸು ನಿರಾಶೆಯ ಬೆನ್ನಲ್ಲೇ ಕರಾವಳಿ ಭಾಗದ ರೈತರು ಬೆಳೆಯುವ ಗೋಡಂಬಿ, ಕೋಕೋ, ತೆಂಗು ಮುಂತಾದ ಬೆಳೆಗಳಿಗೆ ಕೇಂದ್ರದ ಬೆಂಬಲದ ಅಭಯಹಸ್ತ ಹಾಗೂ ಸ್ವಾವಲಂಬಿ ಬದುಕು ರೈತನಿಗೆ ಸಂಧಾನ ತಂದಿದೆ. ತಂಬಾಕು, ಮದ್ಯದಂತಹ ಹಾನಿಕಾರಕ ಮಾದಕ ದ್ರವ್ಯಗಳ ಮೇಲೆ ಹೆಚ್ಚಿನ ಸುಂಕ ವಿಧಿಸಿ 17 ಕ್ಯಾನ್ಸರ್ ಔಷಧಿಗಳ ಸುಂಕ ವಿನಾಯ್ತಿ ನೀಡಿದ್ದು, ಅದರಲ್ಲಿ 7 ಔಷಧಗಳ ಮೇಲೆ ತೆರಿಗೆಯನ್ನೇರದ್ದು ಮಾಡಿದ್ದು ಉತ್ತಮ. ಹೀಗೆ ಬಜೆಟ್ ನಲ್ಲಿ ಹಲವಾರು ಉಪಯುಕ್ತ ಯೋಜನೆ ನೀಡಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಒಂದು ದಿನದ ಸಾಂಕೇತಿಕ ಶಾಂತಿಯುತ ಧರಣಿ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಕೆ.ಕೆ.ಆರ್.ಟಿ.ಸಿ ಬೀದರ್ ವಿಭಾಗೀಯ ಕಛೇರಿ ಎದುರುಗಡೆ ಫೆ. 06 ರಂದು ಶುಕ್ರವಾರ ಬೆಳ್ಳಿಗೆ 10:00 ಗಂಟೆ ಯಿಂದ ಸಾಯಂಕಾಲ 04:00 ಗಂಟೆ ವರೆಗೆ ಒಂದು ದಿನದ ಸಾಂಕೇತಿಕ ಶಾಂತಿಯುತ ಧರಣಿ ಸತ್ಯಗ್ರಹ ಹಮ್ಮಿಕೊಳ್ಳಲಾಗಿದೆಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರ ಸಂಘ ವಲಯ ಸಮಿತಿ ಅಧ್ಯಕ್ಷರು ಸೂರ್ಯಕಾಂತ್ ಟೈಗರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೀದರ್ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಗೈರು ಹಾಜರಿರುವ ನೌಕರರ ಹೆಸರಿನಲ್ಲಿ ಲಕ್ಷಾಂತರ ರೂಪಾಯಿ ಅವ್ಯವಹಾರ ಮಾಡಿ ಸಂಸ್ಥೆಗೆ ಹಣ ಲೂಟಿ ಹೊಡೆದಿರುತ್ತಾರೆ. ನೌಕರರ ಶಿಸ್ತು ಕ್ರಮಗಳನ್ನು ಜರುಗಿಸುವಲ್ಲಿ ತಾರತಮ್ಯ ಮಾಡಿ ಡಿಪೋಗಳಲ್ಲಿ ಸೇವೆ ಸಲ್ಲಿಸುವ ನೌಕರರ ಸೇವಾ ಮುಂಬಡ್ತಿಗಳನ್ನು ವ್ಯವಸ್ಥಿತವಾಗಿ ವಂಚಿಸಿರುತ್ತಾರೆ.

ವಾಣಿಜ್ಯ ಮಳಿಗೆಗಳ ಇ–ಟೆಂಡರ್ ನಿಬಂಧನೆಗಳನ್ನು ಉಲ್ಲಂಘನೆ ಮಾಡಿ ಬೇಕ್ ಬಿಟ್ಟಿ ಬಿಡ್ ದಾರರಿಗೆ ಆಯ್ಕೆ ಮಾಡಿದ ಕಾರಣ ಮಳಿಗೆಗಳು ಸಕಾಲದಲ್ಲಿ ಒಪ್ಪಂದ ಆಗದೆ ಹಾಗೂ ಸಂಸ್ಥೆಗೆ ಬರಬಹುದಾದ ಆದಾಯ ಕೈತಪ್ಪಿರುತ್ತದೆ. ಸಂಸ್ಥೆಯ ಸುತ್ತೋಲೆ/ಸ್ಥಾಯಿ ಸಮಿತಿ ಆದೇಶ GSO No 175/2021, 180/2024 ರನ್ವಯ ನೌಕರರಿಗೆ ವರ್ಗವಣೆ ಸೌಲಭ್ಯಗಳಲ್ಲಿ ನೀಡುವಲ್ಲಿ ವಿಫಲರಾಗಿರುತ್ತಾರೆ.

ಈ ರೀತಿಯ ನಿಗಮಕ್ಕೆ ಆರ್ಥಿಕವಾಗಿ ಲೂಟಿ ಮಾಡಿರುವ ಅಧಿಕಾರಿಗಳ ಮೇಲೆ ಪ್ರಕರಣ ದಾಖಲಿಸಿ, ಕೂಡಲೇ ಸೇವೆಯಿಂದ ಅಮಾನತ್ತುಗೊಳಿಸಿ ಬೇರೆ ವಿಭಾಗಕ್ಕೆ ವರ್ಗವಣೆ ಮಾಡುವಂತೆ ಎಖಖಿಅ ನೌಕರರ ಸಂಘ (ರಿ) ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟಪಂಗಡ ನೌಕರರ ಕ್ಷೇಮಾಭಿವೃದ್ಧಿ ಸಂಘ(ರಿ) ಮತ್ತು ಇತರೆ ಸಂಘಟನೆಗಳ ಬೆಂಬಲದೊಂದಿಗೆ ಧರಣಿ ಸತ್ಯಾಗ್ರಹ ಹೋರಾಟದಲ್ಲಿ ಎಲ್ಲಾ ನೌಕರರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಯಶಸ್ವಿಗೊಳಿಸಬೇಕೆಂದು ಸಂಘಟನೆ ಪರವಾಗಿ ತಿಳಿಸಿದ್ದಾರೆ.

# ಗೀತರಚನೆ ಕಲಿಸುವುದಲ್ಲ, ಸುಪ್ತಮನಸ್ಸಿನಿಂದ ಬರಬೇಕು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗೀತರಚನೆ ಎನ್ನುವುದು ಕಲಿಯೋದು, ಕಲಿಸೋದಲ್ಲ. ಕನ್ನಡ ಕಾವ್ಯ, ಸಾಹಿತ್ಯ ಓದಬೇಕು. ಜನಜೀವನ ನೋಡಬೇಕು. ಬರವಣಿಗೆ ಎನ್ನುವುದು ನಮ್ಮ ಸುಪ್ತಮನಸ್ಸಿನಿಂದ ಬರುವಂತದ್ದು. ಅದಕ್ಕೆಯಾವುದೇ ತರಬೇತಿ, ಕಾರ್ಯಾಗಾರ ಇರುವುದಿಲ್ಲ ಎಂದು ಖ್ಯಾತ ಸಾಹಿತಿ ಮತ್ತು ಚಿತ್ರಸಾಹಿತಿ ಜಯಂತ್ ಕಾಯ್ಕಿಣಿ ಅಭಿಪ್ರಾಯಪಟ್ಟಿದ್ದಾರೆ.

17ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ನಡೆದ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗೀತರಚನೆಯನ್ನು ಕಲಿಸುವುದಕ್ಕಾಗುವುದಿಲ್ಲ. ಕನಸ್ಸಿನಲ್ಲಿ ಒಮ್ಮೊಮ್ಮೆ ಅಮೂರ್ತವಾಗಿ ಏನೇನೋ ಕಾಣುತ್ತದಲ್ಲ, ಗೀತರಚನೆಯೂ ಹಾಗೆಯೇ. ನಿರ್ದೇಶನ, ನಟನೆಯ ತರಹ ಗೀತರಚನೆಗೆ ತರಬೇತಿ ತೆಗೆದುಕೊಳ್ಳುವುದಕ್ಕೆ ಆಗುವುದಿಲ್ಲ. ತರಬೇತಿ ಪಡೆದರೆ, ಜಮಿನಂದ ಬಂದ ಒಂದೇ ತರಹ ದೇಹಗಳ ಹಾಗೆ ಕಾಣುತ್ತದೆ. ಬ್ಯೂಟಿ ಪಾರ್ಲರ್‌ನಿಂದ ಬಂದ ವಧುವಿನ ಹಾಗೆ ಎಲ್ಲವೂ ಒಂದೇ ರೀತಿ ಕಾಣುತ್ತದೆ. ನಿಮ್ಮ ಛಾಪು ಮೂಡಿಸಬೇಕೆಂದರೆ ಸ್ವತಂತ್ರವಾಗಿ ಬರೆಯುವುದಕ್ಕೆ ಕಲಿಯಬೇಕು ಎಂದು ಹೇಳಿದರು.

ಕಾಲಕ್ಕೆ ತಕ್ಕ ಹಾಗೆ ಬದಲಾಗುತ್ತಿರಬೇಕು ಎಂದ ಅವರು, ಹಳೆಯದೆಲ್ಲಾ ಚೆನ್ನಾಗಿತ್ತು, ಈಗ ಚೆನ್ನಾಗಿಲ್ಲ ಎನ್ನುವುದು ತಪ್ಪು. ಅಂದರೆ ನಾವು ಸಹ ಮೊದಲ ಹಾಗಿಲ್ಲ ಎಂದರ್ಥ. ಎಲ್ಲಾ ಕಡೆ ಸಾಕಷ್ಟು ಬದಲಾವಣೆಗಳಾಗಿವೆ. ಮೊದಲು ನಮ್ಮೂರಿನಲ್ಲಿ ಸಾಕಷ್ಟು ಹಿರಿಯರಿದ್ದರು. ಈಗ ನಾನೇ ಹಿರಿಯ ಎನ್ನುವಂತಾಗಿದೆ. ಸಮಯ ಬದಲಾಗುತ್ತಿರುತ್ತದೆ. ತಂತ್ರಜ್ಞಾನ ಬೆಳೆಯುತ್ತಿದೆ. ನಾವು ಸಹ ಬದಲಾಗಬೇಕಾಗುತ್ತದೆ. ಹಳೆಯದೇ ಚೆನ್ನಾಗಿತ್ತು, ಈಗ ಚೆನ್ನಾಗಿಲ್ಲ ಎನ್ನುವುದು ತಪ್ಪು ಎಂದು ಅವರು ಹೇಳಿದರು.

ತಾವು ಮೊದಲಿಂದಲೂ ಸಿನಿಮಾ ಹಾಡುಗಳ ಪ್ರೇಮಿ ಎಂದ ಜಯಂತ್ ಕಾಯ್ಕಿಣಿ, ನಾವೆಲ್ಲಾ ಹಾಡುಗಳನ್ನು ಗುನುಗಿ ಬೆಳೆದವರು. ಗೊಣಗುವುದಕ್ಕಿಂತ ಗುನುಗುವುದು ಮೇಲು ಎಂದು ನಮ್ಮ ತಂದೆ ಹೇಳುತ್ತಿದ್ದರು. ನಾನು 52ನೇ ವಯಸ್ಸಿಗೆ ಸಿನಿಮಾದಲ್ಲಿ ಗೀತರಚನೆಕಾರನಾದೆ. ಯೌವ್ವನದಲ್ಲಿದ್ದಾಗ ಗಂಭಿರವಾಗಿ ಕೋಟಿತೀರ್ಥ ಅಂತ ಬರೆದೆ. ವಯಸ್ಸಾದ ಮೇಲೆ ಸಿನಿಮಾ ಹಾಡುಗಳನ್ನು ಬರೆಯುವಂತಾಯಿತು ಎಂದರು. ಆರಂಭದಲ್ಲಿ ಸಿನಿಮಾ ಹಾಡುಗಳನ್ನು ಬರೆಯುವಾಗ ಒಂದು ಉಡಾಫೆ ಇತ್ತು ಎಂದ ಅವರು, ಸಿನಿಮಾ ಹಾಡುಗಳನ್ನು ಬರೆಯುವುದು ಬಹಳ ಸುಲಭ ಎಂದು ಭಾವಿಸಿದ್ದೆ. ಹಾಡುಗಳನ್ನು ಬರೆಯುವುದಕ್ಕೆ ಶುರು ಮಾಡಿದ ಮೇಲೆ ಅದರ ಕಷ್ಟ ಗೊತ್ತಾಯ್ತು. ಸಿನಿಮಾದಲ್ಲಿ ಟ್ಯೂನ್ ಹಾಕಿದ ಮೇಲೆ, ಮೀಟರ್‌ಗೆ ತಕ್ಕ ಹಾಗೆ ಸಾಹಿತ್ಯವನ್ನು ರಚಿಸಲಾಗುತ್ತದೆ. ಅದು ದೊಡ್ಡ ಸವಾಲಾಗಿತ್ತು. ನಮ್ಮಲ್ಲಿ ಕೋಟ್ಯಂತರ ಹಾಡುಗಳಿವೆ. ಅದರಲ್ಲಿ ವಿಭಿನ್ನವಾದುದನ್ನೇನೋ ಬರೆಯಬೇಕು. ಅದರಲ್ಲಿ ಶೇ.97ರಷ್ಟು ಪ್ರೇಮಗೀತೆಗಳು. ಅದರಲ್ಲಿ ವಿಭಿನ್ನವಾಗಿ ಅದೆಷ್ಟು ಬರೆಯೋಕೆ ಸಾಧ್ಯ? ಒಲವು, ನಲಿವು, ಚೆಲುವು, ಹಸಿರು, ಉಸಿರು ಈ ಪದಗಳನ್ನೇ ಪುನಃ ಬಳಸಬೇಕು. ಅದನ್ನು ಹೊರತುಪಡಿಸಿ, ಹೊಸ ಎಕ್ಸ್‌ಪ್ರೆಶನ್ ಸೃಷ್ಟಿಸುವುದು ನಿಜಕ್ಕೂ ಸವಾಲಿನ ಕೆಲಸ ಎಂದು ಹೇಳಿದರು.



# ಮಹಾ ಸಂಭ್ರಮದ ಆಹ್ವಾನ ಪತ್ರಿಕೆ ಬಿಡುಗಡೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರದ ಐತಿಹಾಸಿಕ ಶಾಲೆಯಾದ ಎಚ್.ಪಿ.ಬಿ.ಎಸ್ ತನ್ನ 140ನೇ ವರ್ಷದವಾರ್ಷಿಕೋತ್ಸವದಕಾರ್ಯಕ್ರಮನ್ನ ಫೆಬ್ರವರಿ.6.ಶುಕ್ರವಾರ. ಸಂಜೆ 4:30ಕ್ಕೆ ನಡೆಯಲಿದೆ ಎಂದು ಶಾಲೆಯ ಮುಖ್ಯ ಶಿಕ್ಷಕರಾದ ಹಾಗೂ ಸಾಹಿತಿ ಡಾ.ಮಾದುಪ್ರಸಾದ್ ಅಭಿಪ್ರಾಯ ಪಟ್ಟರು.

ನಗರದ ಶಾಲೆ ಆವರಣದಲ್ಲಿ ಶಾಲಾ ವಾರ್ಷಿಕೋತ್ಸವದ ಆಹ್ವಾನ ಪತ್ರಿಕೆಗಳ ಬಿಡುಗಡೆ ಮಾಡಿ ನಂತರ ಮಾತಾನಾಡಿದಸಂಭ್ರಮದಲ್ಲಿದೆ ಹಾಗೂ ಈ ಶಾಲೆಯು ಆಧುನಿಕತೆಯ ಓಟಕ್ಕೆ ತನ್ನನ್ನು ಒಗ್ಗಿಸಿಕೊಂಡು ಪೋಷಕರಿಗೆ ತಮ್ಮ ಮಕ್ಕಳ ಶಿಕ್ಷಣದ ಅಗತ್ಯತೆಯನ್ನು ಪೂರೈಸುತ್ತಾ ಬಹು ಬೇಗನೆ ಜನ ಮನ್ನಣೆಗೆ ಪಾತ್ರವಾಗಿದೆ ಎಂದು ಶಾಲೆ ಸಮಿತಿ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಎ ಎಸ್ ಶುಭಾ ಅವರು ಮಾತನಾಡಿ ಈ ಶಾಲೆಯಲ್ಲಿ ನಮ್ಮ ಮಕ್ಕಳು ಓದುವುದು ನಮಗೆ ಪ್ರತಿಷ್ಠೆ ಎನಿಸುತ್ತದೆ ಎಂದರು.

ಉಪಾಧ್ಯಕ್ಷ ಮೊಹಮ್ಮದ್ ರಫಿಕ್ ಮಾತನಾಡಿ ಈ ಶಾಲೆಯ ಹೆಮ್ಮೆಯ ವಿದ್ಯಾರ್ಥಿ ಗಳಾದ ಹುಣಸೂರು ವಿಧಾನ ಸಭಾ ಕ್ಷೇತ್ರದಲ್ಲಿ ಸುಮಾರು ಹದಿನೈದು ವರ್ಷಗಳ ಕಾಲ ಶಾಸಕರಾಗಿದ್ದ ಎಚ್.ಪಿ.ಮಂಜುನಾಥ್ ಹಾಗೂ ಮೈಸೂರು–ಚಾಮರಾಜನಗರ ಜಿಲ್ಲೆಯ ವಿಧಾನ ಪರಿಷತ್ತಿನ ಶಾಸಕರಾದ ಡಾ.ಡಿ ತಿಮ್ಮಯ್ಯ ಅವರನ್ನು ಮತ್ತು ಶಾಲಾ ಪ್ರಗತಿಗೆ ನೆರವಾದ ನಿಕಟಪೂರ್ವ ಎಸ.ಡಿ.ಎಮ್.ಸಿ.ಅಧ್ಯಕ್ಷ ರಮೇಶ್ ಅವರನ್ನು ಸನ್ಮಾನಿಸಲಾಗುವುದು ಎಂದರು.

ದಾಸೋಹ ಭವನ ಹಾಗೂ ಕಾರ್ಯಕ್ರಮವನ್ನು ಶಾಸಕರಾದ ಶ್ರೀ ಹರೀಶ್ ಗೌಡರು ಉದ್ಘಾಟಿಸುವರು. ಕಾರ್ಯಕ್ರಮದಲ್ಲಿ ಉಪ ವಿಭಾಗಾಧಿಕಾರಗಳಾದ ಕು. ಕಾವ್ಯರಾಣಿ, ತಹಸೀಲ್ದಾರರಾದ ಶ್ರೀಮಂಜುನಾಥ್, ನಗರಾಯುಕ್ತೆ ಮಾನಸ, ತಾಲ್ಲೂಕು ಪಂಚಾಯತ್ ನಿರ್ವಹಣಾಧಿಕಾರಿ ಶ್ರೀ ಹೊಂಗಯ್ಯ, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀ ಎಸ್.ಪಿ .ಮಹಾದೇವ ಸೇರಿದಂತೆ ಹಲವು ಗಣ್ಯರು ಭಾಗವಹಿಸುವರೆಂದು ಶಾಲೆಯ ಹಿರಿಯ ಶಿಕ್ಷಕರಾದ ನರಸಿಂಹ ಮಾಹಿತಿ ನೀಡಿದರು.

ಸದಸ್ಯರು ಶಿವರಾಂ ಬೆಳ್ತೂರು ವೆಂಕಟೇಶ್ ಚೆಲುವರಾಜ್ ಪಲ್ಲವಿ ನರ್ಮದಾ ವೆಂಕಟೇಶ್ ಹಾಗೂ ಶಾಲೆಯ ಶಿಕ್ಷಕರು ಹಾಜರಿದ್ದರು.

## ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆ ಆರಂಭಕ್ಕೆ ದಿನಗಣನೇ ಶುರುವಾಗಿದ್ದು, ವಿದ್ಯಾರ್ಥಿಗಳು ಯಾವುದೇ ಒತ್ತಡ, ಗೊಂದಲ, ಆತಂಕಕ್ಕೆ ಒಳಗಾಗದೇ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಬೇಕು ಎಂದು ಕ್ಷೇತ್ರಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ ಹೇಳಿದರು. ಪಟ್ಟಣದ ಪುರಭವನ ಸಭಾಂಗಣದಲ್ಲಿ ಜಿಲ್ಲಾ ಪಂಚಾಯಿತಿ ಬೀದರ್, ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಬುಧವಾರ ಆಯೋಜಿಸಿದ್ದ 2025–26ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಸುಧಾರಣಾ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.



ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಮುಂದಿನ ಭವಿಷ್ಯವನ್ನು ನಿರ್ಧರಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಈಗಿನಿಂದಲೇ ಸಿದ್ಧತೆ ಮಾಡಿಕೊಂಡು ಓದಿನ ಕಡೆಗೆ ಹೆಚ್ಚಿನ ಸಮಯ ನೀಡಬೇಕು. ತಿಳಿಯದ ವಿಷಯಗಳ ಬಗ್ಗೆ ತಮ್ಮ ಶಿಕ್ಷಕರ ಬಳಿ ಕೇಳಿ ಇರುವ ಸಮಸ್ಯೆ, ಗೊಂದಲಗಳನ್ನು ಬಗೆಹರಿಸಿಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ದತ್ತು ಕಾಟಕರ್, ವಿಷಯ ಸಂಪನ್ಮೂಲ ವ್ಯಕ್ತಿ ಅವಿನಾಶ ಸೇರಿದಂತೆ ಹಲವರು ಇದ್ದರು.






Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)